24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 88 | ನವದೆಹಲಿ | ಬೆಲೆ ₹10 | ಸೆಪ್ಟೆಂಬರ್ 23., 2026 ಬುಧವಾರ

## ಒಳಪುಟಗಳಲ್ಲಿ

ಬರಪೀಡಿತ ತಾಲ್ಲೂಕುಗಳ ಸಂಖ್ಯೆ 200ಕ್ಕೆ ಏರಿಕೆ ನಿರೀಕ್ಷೆ: ಡಿಸಿಎಂ ಜಿ.ಪರಮೇಶ್ವರ್- ಪು.2

ವಂದೇಮಾತರಂ ವಿವಾದ: 2 ವಾರಗಳಲ್ಲಿ ಉತ್ತರಿಸುವಂತೆ ಕೇಂದ್ರಕ್ಕೆ ಸುಪ್ರೀಂ ಸೂಚನೆ-ಪು.3

ಜಾಗತಿಕ ನಿರ್ಧಾರ ಪ್ರಕ್ರಿಯೆ ಪಾರದರ್ಶಕವಾಗಿಸುವ ಅಗತ್ಯ: ವಿಶ್ವಸಂಸ್ಥೆಯಲ್ಲಿ ಜೈಶಂಕರ್ ಪ್ರತಿಪಾದನೆ-ಪು.4

# ಕಸ್ತೂರಿರಂಗನ್ ವರದಿ ತಿರಸ್ಕರಿಸಲು ವಿಧಾನಮಂಡಲದಲ್ಲಿ ಸರ್ವಾನುಮತದ ನಿರ್ಣಯ

**ಬೆಂಗಳೂರು, ಸೆ.22:** ಪಶ್ಚಿಮಘಟ್ಟಗಳನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸುವ ಕುರಿತು ಡಾ. ಕೆ. ಕಸ್ತೂರಿರಂಗನ್ ಸಮಿತಿ ನೀಡಿರುವ ಶಿಫಾರಸುಗಳು ಮತ್ತು ಅದರ ಆಧಾರದ ಮೇಲೆ ಕೇಂದ್ರ ಸರ್ಕಾರ ಹೊರಡಿಸಿರುವ 7ನೇ ಕರಡು ಅಧಿಸೂಚನೆಯನ್ನು ಕರ್ನಾಟಕ ಸರ್ಕಾರ ಸಂಪೂರ್ಣವಾಗಿ ತಿರಸ್ಕರಿಸಿದೆ. ವರದಿಯ ಜಾರಿಗೆ ವಿರೋಧ ವ್ಯಕ್ತಪಡಿಸಿ ರಾಜ್ಯ ಸರ್ಕಾರ ಮಂಡಿಸಿದ ನಿರ್ಣಯವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳಲ್ಲಿ ಸರ್ವಾನುಮತದ ನಿರ್ಣಯ ಅಂಗೀಕರಿಸಲಾಗಿದೆ.

ಉಭಯ ಸದನಗಳಲ್ಲಿ ಕಸ್ತೂರಿರಂಗನ್ ವರದಿ ಕುರಿತು ಆಡಳಿತ ಮತ್ತು ಪ್ರತಿಪಕ್ಷಗಳ ನಾಯಕರು ಸುದೀರ್ಘ ಚರ್ಚೆ ನಡೆಸಿದ್ದು, ಪಶ್ಚಿಮಘಟ್ಟ ವ್ಯಾಪ್ತಿಯ ಜನರ ಹಿತರಕ್ಷಣೆಗಾಗಿ ಒಗ್ಗಟ್ಟು ಪ್ರದರ್ಶಿಸಿದ್ದಾರೆ. ಸರ್ಕಾರದ ನಿರ್ಣಯವನ್ನು ಅಂಗೀಕರಿಸಿದ್ದಾರೆ.

ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಸ್ತೂರಿರಂಗನ್ ಸಮಿತಿಯು ಉಪಗ್ರಹ ಆಧಾರಿತ ಬಾಹ್ಯಾಕಾಶ ದತ್ತಾಂಶಗಳನ್ನು ಬಳಸಿಕೊಂಡು ಗಡಿ ಗುರುತಿಸಿರುವುದರಿಂದ ಜನವಸತಿ, ಕೃಷಿಭೂಮಿ ಹಾಗೂ ಅರಣ್ಯಗಳ ನಡುವಿನ ವ್ಯತ್ಯಾಸ ಸ್ಪಷ್ಟವಾಗಿಲ್ಲ. ಉಪಗ್ರಹ ಚಿತ್ರಗಳನ್ನಷ್ಟೇ ನೆಚ್ಚಿಕೊಳ್ಳದೆ,



### ವಿಶೇಷ ಅಧಿವೇಶನ

ತಕ್ಷಣವೇ ಭೌತಿಕ ಸಮೀಕ್ಷೆ ನಡೆಸಿ ಮರುಪ್ರಸ್ತಾವನೆ ಸಿದ್ಧಪಡಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಪಶ್ಚಿಮಘಟ್ಟಗಳ ಪರಿಸರ ಸಂರಕ್ಷಣೆ ನಮಗೂ ಮುಖ್ಯ. ಆದರೆ, ವಾಸ್ತವ ಸ್ಥಿತಿಯನ್ನು ಅರಿಯದೆ ಉಪಗ್ರಹ ಚಿತ್ರಗಳ ಆಧಾರದ ಮೇಲೆ ವರದಿ ಸಿದ್ಧಪಡಿರುವುದರಿಂದ ಕಾಫಿ–ಅಡಿಕೆ ಬೆಳೆಗಾರರು, ರೈತರು ಹಾಗೂ ಪಶ್ಚಿಮಘಟ್ಟ ವ್ಯಾಪ್ತಿಯಲ್ಲಿ ತಲೆತಲಾಂತರಗಳಿಂದ ವಾಸಿಸುತ್ತಿರುವ ಸ್ಥಳೀಯರ ಜೀವನೋಪಾಯಕ್ಕೆ ಭಾರಿ ಧಕ್ಕೆಯಾಗಲಿದೆ. ಜನವಸತಿ ಮತ್ತು ಕೃಷಿ ಪ್ರದೇಶಗಳನ್ನು ಪರಿಸರ ಸೂಕ್ಷ್ಮ ವ್ಯಾಪ್ತಿಗೆ ಸೇರಿಸುವುದನ್ನು ನಾವು ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ. ರಾಜ್ಯದ ಹಿತರಕ್ಷಣೆ ನಮಗೆ ಮೊದಲ ಆದ್ಯತೆ ಎಂದು ಹೇಳಿದ್ದಾರೆ.

ಪ್ರತಿಪಕ್ಷ ನಾಯಕ ಆರ್. ಅಶೋಕ್ ಮಾತನಾಡಿ, ಕಸ್ತೂರಿರಂಗನ್ ವರದಿಯನ್ನು ಜಾರಿಗೊಳಿಸಿದರೆ ಪಶ್ಚಿಮ ಘಟ್ಟ ವ್ಯಾಪ್ತಿಯ ಲಕ್ಷಾಂತರ ಜನರ ಬದುಕು ಬೀದಿಗೆ ಬರಲಿದೆ. ಕೇರಳ ಸರ್ಕಾರ ಅನುಸರಿಸಿದ ಮಾದರಿಯಲ್ಲೇ ಕರ್ನಾಟಕದಲ್ಲೂ ಗ್ರಾಮಮಟ್ಟದಲ್ಲಿ ಪ್ರತ್ಯೇಕ ಭೌತಿಕ ಸಮೀಕ್ಷೆ ನಡೆಸಬೇಕು. ನೈಜ ಅರಣ್ಯ ಪ್ರದೇಶ ಮತ್ತು ಜನರು ವಾಸಿಸುವ ಕೃಷಿಭೂಮಿಯನ್ನು ಪ್ರತ್ಯೇಕವಾಗಿ ಗುರುತಿಸಿ, ಆ ವಾಸ್ತವಾಂಶಗಳನ್ನು ಕೇಂದ್ರ ಸರ್ಕಾರ ಮತ್ತು ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಮುಂದೆ ಪ್ರಬಲವಾಗಿ ಮಂಡಿಸಬೇಕು ಎಂದು ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ರಾಜ್ಯ ಸರ್ಕಾರವು ಕಸ್ತೂರಿರಂಗನ್ ಸಮಿತಿಯ ಶಿಫಾರಸುಗಳನ್ನು ಈಗಾಗಲೇ ಹಲವು ಬಾರಿ ತಿರಸ್ಕರಿಸಿದೆ. ವಿಧಾನಮಂಡಲದ ಉಭಯ ಸದನಗಳಲ್ಲಿ ಅಂಗೀಕರಿಸಲಾದ ಈ ಅಧಿಕೃತ ನಿರ್ಣಯವನ್ನು ಕೇಂದ್ರ ಪರಿಸರ ಸಚಿವಾಲಯಕ್ಕೆ ಕಳುಹಿಸಲಾಗುವುದು ಎಂದು ತಿಳಿಸಿದ್ದಾರೆ.

### ವರದಿ ನ್ಯೂನತೆ ಮಾರ್ಪಾಡಿಗೆ ಸಮಿತಿ ರಚನೆ ನಿರ್ಧಾರ



ಕಸ್ತೂರಿರಂಗನ್ ವರದಿಯ ನ್ಯೂನತೆಗಳನ್ನು ಪರಿಶೀಲಿಸಿ ತಿದ್ದುಪಡಿ ಸೂಚಿಸಲು ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚನೆ, ಕೇಂದ್ರಕ್ಕೆ ಸರ್ವಪಕ್ಷ ನಿಯೋಗ, ಗ್ರಾಮ ಮತ್ತು ಸರ್ವೇವಾರು ಸಮೀಕ್ಷೆ ನಡೆಸಿ ಮಾರ್ಪಾಡು ಸೂಚಿಸಲು ಒಂದು ವರ್ಷದ ಕಾಲಾವಕಾಶ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುವ ಕುರಿತು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಗಳವಾರ ಸರ್ವಾನುಮತದ ನಿರ್ಣಯ ಅಂಗೀಕರಿಸಲಾಯಿತು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನಲ್ಲಿ ಕಸ್ತೂರಿರಂಗನ್ ವರದಿ ಆಧರಿತ ಕರಡು ಅಧಿಸೂಚನೆ ಕುರಿತು ನಡೆದ ಚರ್ಚೆಗೆ ಮಂಗಳವಾರ ಉತ್ತರಿಸಿ ಈ ನಿರ್ಣಯಗಳನ್ನು ಮಂಡಿಸಿದರು. ಅದಕ್ಕೆ ಉಭಯ ಸದನಗಳು ಒಮ್ಮತದ ಒಪ್ಪಿಗೆ ನೀಡಿದವು.

# ಅನಂತ್‌ನಾಗ್‌ಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ

**ಕೆವಾಡಿಯಾ, ಸೆ.22:** ಗುಜರಾತ್‌ನ ನರ್ಮದಾ ಜಿಲ್ಲೆಯ ಕೆವಾಡಿಯಾದ ಏಕ್ತಾ ನಗರದಲ್ಲಿ ಮಂಗಳವಾರ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕನ್ನಡದ ಖ್ಯಾತ ನಟ ಅನಂತ್‌ನಾಗ್ ಅವರಿಗೆ ಭಾರತೀಯ ಚಲನಚಿತ್ರ ರಂಗದ ಅತ್ಯುನ್ನತ ಗೌರವವಾದ 'ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ'ಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರದಾನ ಮಾಡಿದರು. ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ಅನಂತ್ ನಾಗ್ ಅವರಿಗೆ ಈ ಪ್ರಶಸ್ತಿ ನೀಡಲಾಗಿದೆ. ಅಲ್ಲದೆ, 2024ನೇ ಸಾಲಿನ ಸಿನಿಮಾ ಸಾಧಕರಿಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ವಿವಿಧ ವಿಭಾಗಗಳಲ್ಲಿ ಒಟ್ಟು 92 ಮಂದಿ ಪ್ರಶಸ್ತಿಗಳನ್ನು ಸ್ವೀಕರಿಸಿದರು. ಅನಂತ್‌ನಾಗ್ ಅವರು, ಐದು ದಶಕಗಳ ಸುದೀರ್ಘ ಹಾಗೂ ಗಮನಾರ್ಹ ವೃತ್ತಿಜೀವನದಲ್ಲಿ 300ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದು, ಕನ್ನಡ ಹಾಗೂ ಭಾರತೀಯ ಚಲನಚಿತ್ರ ರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅನಂತ್ ನಾಗ್ ಅವರು ಜನಪ್ರಿಯ ಟೆಲಿವಿಷನ್ ಸರಣಿ 'ಮಾಲ್ಗುಡಿ ಡೇಸ್'ನಲ್ಲಿನ ತಮ್ಮ ಅಭಿನಯಕ್ಕೂ ಹೆಸರುವಾಸಿಯಾಗಿದ್ದಾರೆ. ಈ ಜನಪ್ರಿಯ ನಟನಿಗೆ 2025ರಲ್ಲಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು.



### ರಕ್ಷಿತ್‌ಶೆಟ್ಟಿ ನಿರ್ಮಾಣದ 'ಮಿಥ್ಯ'ಗೆ 3 ಪ್ರಶಸ್ತಿ

ರಕ್ಷಿತ್ ಶೆಟ್ಟಿ ನಿರ್ಮಾಣದ ಕನ್ನಡದ 'ಮಿಥ್ಯ' ಮೂರು ಪ್ರಶಸ್ತಿಗಳನ್ನು, ತುಳುವಿನ 'ಇಂಬು' ಪ್ರಶಸ್ತಿಯನ್ನು ಪಡೆದುಕೊಂಡಿದ್ದು, ಚಿತ್ರತಂಡಕ್ಕೆ ರಾಷ್ಟ್ರಪತಿಗಳು ಪ್ರಶಸ್ತಿ ಪ್ರದಾನ ಮಾಡಿದರು. ಕನ್ನಡ ಚಿತ್ರರಂಗದ ಅತ್ಯಂತ ಜನಪ್ರಿಯ ನಟ ರಕ್ಷಿತ್ ಶೆಟ್ಟಿ ಮಾಲೀಕತ್ವದ ಪರಂವಃ ಸ್ಟುಡಿಯೋಸ್ ಮತ್ತು ಪ್ರಸಿದ್ಧ ಕೆಆರ್‌ಜಿ ಸ್ಟುಡಿಯೋಸ್ ಜಂಟಿಯಾಗಿ ನಿರ್ಮಾಣ ಮಾಡಿರುವ ಮಿಥ್ಯ ಸಿನಿಮಾ ಮೂರು ಪ್ರಶಸ್ತಿಗೆ ಪಾತ್ರವಾಗಿದೆ.

# ಕರ್ನಾಟಕದ ನಾಲ್ಕು ಸ್ಥಾನ ಸೇರಿ ವಿವಿಧ ರಾಜ್ಯಗಳ 28 ವಿಧಾನ ಪರಿಷತ್ ಸ್ಥಾನಗಳಿಗೆ ಅ.23ರಂದು ಚುನಾವಣೆ

**ನವದೆಹಲಿ, ಸೆ.22:** ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳ ವಿಧಾನ ಪರಿಷತ್‌ನ 28 ಸ್ಥಾನಗಳಿಗೆ ಚುನಾವಣೆ ನಡೆಸಲು ಚುನಾವಣಾ ಆಯೋಗ ದಿನಾಂಕ ಪ್ರಕಟಿಸಿದೆ. ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ ಹಾಗೂ ಕರ್ನಾಟಕದಲ್ಲಿ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಸೆಪ್ಟೆಂಬರ್ 29ರಂದು ಅಧಿಸೂಚನೆ ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಅಕ್ಟೋಬರ್ 6 ಕೊನೆಯ ದಿನವಾಗಿದ್ದು, ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅಭ್ಯರ್ಥಿಗಳು ಅಕ್ಟೋಬರ್ 9ರವರೆಗೆ ನಾಮಪತ್ರ ಹಿಂಪಡೆಯಬಹುದು.ಅಕ್ಟೋಬರ್ 23ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅಕ್ಟೋಬರ್ 27ರಂದು ಮತ ಎಣಿಕೆ ನಡೆಯಲಿದೆ. ಸಂಬಂಧಿತ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಲ್ಲಿ ಮಾದರಿ ನೀತಿ ಸಂಹಿತೆ ತಕ್ಷಣದಿಂದಲೇ ಜಾರಿಗೆ ಬಂದಿದೆ. ಕರ್ನಾಟಕದಲ್ಲಿ ನಡೆಯಲಿರುವ ಚುನಾವಣೆ ಪದವೀಧರರ 2 ಹಾಗೂ ಶಿಕ್ಷಕರ 2 ಕ್ಷೇತ್ರಗಳಿಗೆ ಸೀಮಿತವಾಗಿದೆ. ಉತ್ತರಪ್ರದೇಶದಲ್ಲಿ 11, ಬಿಹಾರದಲ್ಲಿ 8, ಮಹಾರಾಷ್ಟ್ರದಲ್ಲಿ 5 ಸ್ಥಾನಗಳು ಸೇರಿವೆ. ಈ ಎಲ್ಲ ಕ್ಷೇತ್ರಗಳಿಗೆ ಅಕ್ಟೋಬರ್ 23ರಂದು ಮತದಾನ ನಡೆಯಲಿದೆ.

### ರಾಜ್ಯಸಭೆಗೂ ಚುನಾವಣೆ

ಉತ್ತರ ಪ್ರದೇಶ ಮತ್ತು ಉತ್ತರಾಖಂಡದ ಒಟ್ಟು 11 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಘೋಷಿಸಲಾಗಿದೆ. ಉತ್ತರ ಪ್ರದೇಶದ 10 ಹಾಗೂ ಉತ್ತರಾಖಂಡದ ಒಂದು ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಇದರ ಜತೆಗೆ ಪಶ್ಚಿಮ ಬಂಗಾಳದಲ್ಲಿ ತೆರವಾಗಿರುವ ಒಂದು ರಾಜ್ಯಸಭಾ ಸ್ಥಾನಕ್ಕೆ ಉಪಚುನಾವಣೆ ನಡೆಯಲಿದೆ. ಹೀಗಾಗಿ ರಾಜ್ಯಸಭೆಗೆ ಸಂಬಂಧಿಸಿದಂತೆ ಒಟ್ಟು 12 ಸ್ಥಾನಗಳಿಗೆ ಅಕ್ಟೋಬರ್ 16ರಂದು ಮತದಾನ ನಡೆಯಲಿದೆ. ರಾಜ್ಯಸಭೆ ಚುನಾವಣೆಗೆ ಸೆಪ್ಟೆಂಬರ್ 29ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಕ್ಟೋಬರ್ 6 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅಕ್ಟೋಬರ್ 7ರಂದು ಪರಿಶೀಲನೆ, ಅಕ್ಟೋಬರ್ 9ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನ. ಅಕ್ಟೋಬರ್ 16ರಂದು ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ಆರಂಭವಾಗಲಿದೆ.ಉತ್ತರ ಪ್ರದೇಶದಿಂದ ನಿವೃತ್ತಿಯಾಗಲಿರುವ ರಾಜ್ಯಸಭಾ ಸದಸ್ಯರಲ್ಲಿ ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ, ಸಮಾಜವಾದಿ ಪಕ್ಷದ ಹಿರಿಯ ನಾಯಕ ರಾಮಗೋಪಾಲ್ ಯಾದವ್, ಅರುಣ್ ಸಿಂಗ್, ಬ್ರಿಜ್‌ಲಾಲ್, ಬಿ.ಎಲ್. ವರ್ಮಾ, ನೀರಜಾ ಶೇಖರ್, ಗೀತಾ ಅಲಿಯಾಸ್ ಚಂದ್ರಪ್ರಭಾ, ರಾಮ್ಜಿ, ಸೀಮಾ ಹಾಗೂ ಡಾ. ದಿನೇಶ್ ಶರ್ಮಾ ಸೇರಿದ್ದಾರೆ. ಉತ್ತರಾಖಂಡದಿಂದ ನರೇಶ್ ಬನ್ಸಾಲ್ ಅವರ ಅವಧಿಯೂ ಮುಕ್ತಾಯವಾಗಲಿದೆ.



**ನಿತ್ಯ ಪಂಚಾಂಗ 23.09.2026 ಬುಧವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ವಾಮಾನ ಜಯಂತಿ, ಶ್ರವಣ ದ್ವದಶಿ, ಕ್ಷೀರ ವ್ರತರಂಭ, ಶರದ್ ವಿಷುವತ್, ವೇದಂತಚರ್ಯ ತಿರುನಕ್ಷತ್ರ

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಕೆಪಿಎಸ್‌ಸಿಯನ್ನೇ ಮುಚ್ಚಿದರೆ ಹೇಗೆ: ಗಮನಸೆಳೆದ ಸಿಎಂ ಡಿಕೆಶಿ ಹೇಳಿಕೆ

## ಸದ್ಯದ ವ್ಯವಸ್ಥೆ ಮುಂದುವರಿಸಬೇಕೇ ಅಥವಾ ಬೇರೊಂದು ವ್ಯವಸ್ಥೆ ರೂಪಿಸಬೇಕೇ ಎಂಬ ಬಗ್ಗೆ ಪರಿಶೀಲನೆ

**ಬೆಂಗಳೂರು, ಸೆ.22:** ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ತನಿಖೆಗೆ ಹೈಕೋರ್ಟ್ ವಿಶೇಷ ತನಿಖಾ ತಂಡ ರಚಿಸಿರುವ ಬೆನ್ನಲ್ಲೇ ಕೆಪಿಎಸ್‌ಸಿಯನ್ನೇ ಮುಚ್ಚಿದರೆ ಹೇಗೆ ಎಂಬ ಬಗ್ಗೆಯೂ ಕಾನೂನುಬದ್ಧವಾಗಿ ಚರ್ಚೆ ನಡೆಸಲಾಗುತ್ತಿದೆ ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆ ಚರ್ಚೆಗೆ ಗ್ರಾಸವಾಗಿದೆ.

ಕೆಪಿಎಸ್‌ಸಿ ವಿಚಾರವಾಗಿ ಹೈಕೋರ್ಟ್ ಎಸ್‌ಐಟಿ ರಚಿಸಿರುವುದಕ್ಕೆ ಆಕ್ಷೇಪವಿಲ್ಲ. ರಾಜ್ಯದ ಪೊಲೀಸ್ ತನಿಖಾ ಸಂಸ್ಥೆಗಳು ಈಗಾಗಲೇ ಪ್ರಕರಣದ ತನಿಖೆ ನಡೆಸುತ್ತಿದ್ದು, ಹಲವು ಮಂದಿಯನ್ನು ವಿಚಾರಣೆಗೊಳಪಡಿಸಲಾಗಿದೆ. ಜಾರಿ ನಿರ್ದೇಶನಾಲಯವೂ ಪ್ರಕರಣದಲ್ಲಿ ಮಧ್ಯಪ್ರವೇಶಿಸಿದ್ದು, ತನಿಖೆ ನಡೆಯುವುದಕ್ಕೆ ಯಾವುದೇ ಅಭ್ಯಂತರವಿಲ್ಲ ಎಂದು ತಿಳಿಸಿದ್ದಾರೆ.

ಕೆಪಿಎಸ್‌ಸಿಯಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಮಾತನಾಡಿದ ಅವರು, "ದೊಡ್ಡ ಖದೀಮರು ಸೇರಿಕೊಂಡು ಲೂಟಿ ಮಾಡುತ್ತಿದ್ದಾರೆ. ಸಾಕಷ್ಟು ದಾಖಲೆಗಳು ಸಿಗುತ್ತಿವೆ" ಎಂದು ಆರೋಪಿಸಿದ್ದಾರೆ. ಕೆಪಿಎಸ್‌ಸಿ ನೇಮಕಾತಿ ವ್ಯವಸ್ಥೆಯಲ್ಲಿ ನಂಬಿಕೆ ಮತ್ತು ಪಾರದರ್ಶಕತೆಯನ್ನು ಮರಳಿ ತರುವ ನಿಟ್ಟಿನಲ್ಲಿ ಸದ್ಯ ಇರುವ



ವ್ಯವಸ್ಥೆಯನ್ನೇ ಮುಂದುವರಿಸಬೇಕೇ ಅಥವಾ ಬೇರೊಂದು ವ್ಯವಸ್ಥೆ ರೂಪಿಸಬೇಕೇ ಎಂಬ ಬಗ್ಗೆ ಕಾನೂನುಬದ್ಧವಾಗಿ ಪರಿಶೀಲನೆ ನಡೆಸಲಾಗುತ್ತಿದೆ. ನಂಬಿಕೆ ಇಟ್ಟು ಜವಾಬ್ದಾರಿ ನೀಡಿದವರೇ ಅಕ್ರಮಗಳಲ್ಲಿ ಭಾಗಿಯಾದರೆ ಏನು ಮಾಡಬೇಕು ಎಂಬುದನ್ನು ಯೋಚಿಸಬೇಕಾಗುತ್ತದೆ" ಎಂದು ಹೇಳಿದ್ದಾರೆ.

### ಎಸ್‌ಐಟಿಯಲ್ಲಿ ಯಾರಿರಬೇಕು ಎನ್ನುವುದು ಸರ್ಕಾರಕ್ಕೆ ಬಿಡಬೇಕು

ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ತನಿಖೆಗೆ ಕರ್ನಾಟಕ ಹೈಕೋರ್ಟ್ ಹಿರಿಯ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ನೇತೃತ್ವದಲ್ಲಿ ಐವರು ಸದಸ್ಯರ ಎಸ್‌ಐಟಿ ರಚಿಸಿದೆ. ಪಶುವೈದ್ಯಾಧಿಕಾರಿ ನೇಮಕಾತಿ ಸೇರಿ ಸಂಬಂಧಿತ ಪ್ರಕರಣಗಳ ತನಿಖೆಯನ್ನು ಈ ತಂಡ ನಡೆಸಲಿದ್ದು, 100 ದಿನಗಳಲ್ಲಿ ವರದಿ ಸಲ್ಲಿಸುವಂತೆ ನ್ಯಾಯಾಲಯ ಗಡುವು ನೀಡಿದೆ. ಪ್ರತಿ 30 ದಿನಗಳಿಗೊಮ್ಮೆ ತನಿಖೆಯ ಪ್ರಗತಿ ವರದಿ ಸಲ್ಲಿಸುವಂತೆಯೂ ಸೂಚಿಸಲಾಗಿದೆ. ತನಿಖೆಯನ್ನು ಹೈಕೋರ್ಟ್ ಉಸ್ತುವಾರಿ ಮಾಡಬಹುದು, ವರದಿಯನ್ನು ತರಿಸಿಕೊಳ್ಳ ಬಹುದು. ಆದರೆ ತನಿಖಾ ತಂಡದಲ್ಲಿ ಯಾರನ್ನು ನೇಮಿಸಬೇಕು, ಯಾರನ್ನು ಸೇರಿಸಬೇಕು ಎಂಬುದನ್ನು ಸರ್ಕಾರಕ್ಕೆ ಬಿಡಬೇಕೇ ಎಂಬ ವಿಚಾರ ಈಗ ಚರ್ಚೆಯಲ್ಲಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಈ ಬಗ್ಗೆ ಕಾನೂನು ತಜ್ಞರೊಂದಿಗೆ ಚರ್ಚಿಸಿ ಮುಂದಿನ ಕ್ರಮದ ಬಗ್ಗೆ ನಿರ್ಧರಿಸಲಾಗುವುದು ಎಂದಿದ್ದಾರೆ.

# ಬರಪೀಡಿತ ತಾಲ್ಲೂಕುಗಳ ಸಂಖ್ಯೆ 200ಕ್ಕೆ ಏರಿಕೆ ನಿರೀಕ್ಷೆ: ಡಿಸಿಎಂ ಜಿ.ಪರಮೇಶ್ವರ್

**ಬೆಂಗಳೂರು, ಸೆ.22:** ರಾಜ್ಯದಲ್ಲಿ ಈ ಬಾರಿ ವಾಡಿಕೆಗಿಂತ ಅತ್ಯಂತ ಕಡಿಮೆ ಮಳೆಯಾಗಿದ್ದು, ಬರ ಪೀಡಿತ ತಾಲೂಕುಗಳ ಸಂಖ್ಯೆ 200ಕ್ಕೆ ಏರುವ ಸಾಧ್ಯತೆ ಇದೆ ಎಂದು ಡಿಸಿಎಂ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ.

ವಿಧಾನ ಪರಿಷತ್ ಕಲಾಪ ಇಂದು ಆರಂಭವಾಗುತ್ತಿದ್ದಂತೆಯೇ, ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಕರ್ನಾಟಕ ಲೋಕಸೇವಾ ಆಯೋಗದ ಅಕ್ರಮಗಳ ಕುರಿತು ನಿಯಮ 53ರಡಿ ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಭಾಪತಿ, ಸರ್ಕಾರದ ಗಮನಕ್ಕೆ ತರುವುದಾಗಿ ಹೇಳಿ ರಾಜ್ಯದಲ್ಲಿನ ಬರಗಾಲ ಕುರಿತ ಚರ್ಚೆಯನ್ನು ಕೈಗೆತ್ತಿಕೊಂಡರು.

ರಾಜ್ಯದಲ್ಲಿ , ಈ ಬಾರಿ 150 ವರ್ಷಗಳ ಹಿಂದೆ ಸಂಭವಿಸಿದ್ದಂತಹ ಭೀಕರ ಬರಗಾಲ ಪರಿಸ್ಥಿತಿ ಉಂಟಾಗಿದೆ. ವಾಡಿಕೆಯಂತೆ ಇಲ್ಲಿಯವರೆಗೂ 852 ಮಿಲಿ ಮೀಟರ್ ಮಳೆಯಾಗಬೇಕಿತ್ತು. ಆದರೆ 642 ಮಿಲಿ ಮೀಟರ್ ಮಾತ್ರ ಮಳೆಯಾಗಿದೆ ಎಂದು ತಿಳಿಸಿದರು. ಜೂನ್‌ನಿಂದ ಇಲ್ಲಿಯವರೆಗೂ ತೀವ್ರ ಮಳೆ ಕೊರತೆಯಾಗಿದ್ದು, ರೈತರ ಬೆಳೆ ನಷ್ಟವಾಗಿದೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯ ಮೊದಲ ಹಂತದಲ್ಲಿ 101 ತಾಲೂಕುಗಳನ್ನು, ತದನಂತರ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು. ಇಂದು ಮತ್ತೆ 53 ತಾಲೂಕು ಸೇರಿ ಒಟ್ಟಾರೆ 177 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಅಂತಿಮವಾಗಿ ರಾಜ್ಯದಲ್ಲಿ ಅಂದಾಜು 200 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಸಾಧ್ಯತೆ ಇದೆ ಎಂದರು.

ಮೊದಲ ಹಂತದಲ್ಲಿನ 101 ತಾಲೂಕುಗಳಲ್ಲಿ 18 ಸಾವಿರ ಕೋಟಿ ರೂ.ಗಳಷ್ಟು ನಷ್ಟ ಆಗಿದ್ದು, ಕೇಂದ್ರದಿಂದ 3 ಸಾವಿರದ 500 ಕೋಟಿ ಪರಿಹಾರ ಬಿಡುಗಡೆಗೆ ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕೊಂಡೊಯ್ಯಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ರೂಪಿಸಿರುವ ನಿಯಮಗಳ ಪ್ರಕಾರವೇ ನಾವು ನಡೆದುಕೊಳ್ಳುತ್ತಿದ್ದೇವೆ. ಆ ನಿಯಮಗಳಡಿ ರಾಜ್ಯಕ್ಕೆ ದೊರೆಯಬೇಕಾದ ಬರ ಪರಿಹಾರವನ್ನು ಕೇಂದ್ರ ಸರ್ಕಾರ ನೀಡಬೇಕು. ಅದೇ ವೇಳೆ ರಾಜ್ಯ ಸರ್ಕಾರವೂ ತನ್ನ ಜವಾಬ್ದಾರಿಯಿಂದ



### ಗದಗದ ಸ್ಥಿತಿ ವೀಕ್ಷಿಸಿದ್ದೇನೆ: ಸಿಎಂ

ಗದಗ ಜಿಲ್ಲೆಯ ಬರಪರಿಸ್ಥಿತಿ ಕುರಿತು ಉಲ್ಲೇಖಿಸಿದ ಅವರು, ಗದಗದಲ್ಲಿ ಪ್ರವಾಸ ಕೈಗೊಂಡಾಗ ಪರಿಸ್ಥಿತಿಯನ್ನು ಖುದ್ದಾಗಿ ವೀಕ್ಷಿಸಿದ್ದೇನೆ. ಶಾಸಕ ಎಚ್.ಕೆ. ಪಾಟೀಲರು ಹೇಳಿರುವುದು ಸತ್ಯ. ಮಲೆನಾಡಿನಲ್ಲೇ ಭೀಕರ ಅಭಾವ ಸೃಷ್ಟಿಯಾಗಿರುವಾಗ ಗದಗದಲ್ಲೂ ಬರ ಇರುವುದು ನಿಶ್ಚಿತ. ಈಗಾಗಲೇ ರಾಜ್ಯದಲ್ಲಿ 124 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಈ ಸಂಖ್ಯೆ 200ಕ್ಕೆ ಏರಿಕೆಯಾಗುವ ಸಾಧ್ಯತೆಯಿದೆ ಎಂದು ವಿವರಣೆ ನೀಡಿದರು. ಇದೇ ವೇಳೆ ಸೌಜನ್ಯಾ ಪ್ರಕರಣದ ಮರುತನಿಖೆಯ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಈ ಪ್ರಕರಣದ ಬಗ್ಗೆ ಪೂರ್ಣ ಮಾಹಿತಿ ತರಿಸಿಕೊಳ್ಳುತ್ತೇನೆ. ತನಿಖೆಯಲ್ಲಿ ಸರ್ಕಾರ ಅಥವಾ ಯಾರೊಬ್ಬರೂ ಹಸ್ತಕ್ಷೇಪ ಮಾಡುವುದಿಲ್ಲ. ಕಾನೂನಿನ ಚೌಕಟ್ಟಿನಲ್ಲೇ ಎಲ್ಲವೂ ನಡೆಯುತ್ತದೆ ಎಂದು ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು.

ಹಿಂದೆ ಸರಿಯದೆ, ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸಿ ರೈತರಿಗೆ ಪರಿಹಾರ ತಲುಪಿಸುವ ಕೆಲಸ ಮಾಡಲಿದೆ ಎಂದು ಹೇಳಿದರು. ಕಸ್ತೂರಿರಂಗನ್ ವರದಿ ಮತ್ತು ಬರಗಾಲ ಎರಡೂ ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ಮಹತ್ವದ ವಿಷಯಗಳಾಗಿವೆ. ಹೀಗಾಗಿ ಆಡಳಿತ ಮತ್ತು ವಿರೋಧ ಪಕ್ಷಗಳು ಪಕ್ಷಭೇದ ಮರೆತು ಸದನದಲ್ಲಿ ಸಮಗ್ರವಾಗಿ ಚರ್ಚಿಸಿ, ರಾಜ್ಯದ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಒಗ್ಗಟ್ಟಿನ ನಿಲುವನ್ನು ಕೇಂದ್ರ ಸರ್ಕಾರದ ಮುಂದೆ ಮಂಡಿಸಬೇಕಿದೆ ಎಂದು ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರು ಸದನಕ್ಕೆ ಮನವಿ ಮಾಡಿದರು.

# ನಂದಿನಿ ಹಾಲಿನ ದರ ಹೆಚ್ಚಳ; ಸರ್ಕಾರಕ್ಕೆ ಒಕ್ಕೂಟಗಳ ಮನವಿ

## ಹಾಲು ಉತ್ಪಾದನೆಗೆ ತಗಲುವ ವೆಚ್ಚ ಸೇರಿ, ಸಮಗ್ರ ಮಾಹಿತಿ ಒದಗಿಸಲು ಸಿಎಂ ಡಿಕೆಶಿ ಸೂಚನೆ

**ಬೆಂಗಳೂರು, ಸೆ.22:** ನಂದಿನಿ ಹಾಲಿನ ಖರೀದಿ ಮತ್ತು ಮಾರಾಟ ದರವನ್ನು ಪ್ರತಿ ಲೀಟರ್‌ಗೆ ರೂ.8ರಿಂದ ರೂ.10ರಷ್ಟು ಹೆಚ್ಚಿಸಲು ಕರ್ನಾಟಕ ರಾಜ್ಯದ ಸಹಕಾರ ಹಾಲು ಉತ್ಪಾದಕರ ಒಕ್ಕೂಟಗಳ ನಿಯೋಗ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದೆ.

ವಿಧಾನಸೌಧದಲ್ಲಿ ಶಿವಕುಮಾರ್ ಅವರನ್ನು ಹಾಲು ಒಕ್ಕೂಟಗಳ ನಿಯೋಗವು ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿತು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಅವರು, "ಕಳೆದ 10 ವರ್ಷಗಳಲ್ಲಿ ಪಶು ಆಹಾರ ದರದಲ್ಲಿನ ಹೆಚ್ಚಳ, ಪ್ರತಿ ಲೀಟರ್ ಹಾಲು ಉತ್ಪಾದನೆಗೆ ತಗಲುವ ವೆಚ್ಚ, ಜಿಲ್ಲೆಗಳಲ್ಲಿ ಎಷ್ಟು ಪ್ರಮಾಣದ ಹಾಲು, ಒಕ್ಕೂಟ ಹೊರತುಪಡಿಸಿ ಬೇರೆ ಕಡೆ ಮಾರಾಟವಾಗುತ್ತಿದೆ? ಒಕ್ಕೂಟ ಎಷ್ಟು ಖರೀದಿಸುತ್ತಿದೆ? ನೆರೆಯ ರಾಜ್ಯಗಳಲ್ಲಿ ಹಾಲು ಖರೀದಿ ಮತ್ತು ಮಾರಾಟ ದರದ ವಿವರ ಸೇರಿದಂತೆ ಸಮಗ್ರ ಮಾಹಿತಿಯನ್ನು



ಸಲ್ಲಿಸಿ" ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಿಯೋಗದ ಪರವಾಗಿ ಮಾತನಾಡಿದ ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್, "ಹೈನುಗಾರಿಕೆಗೆ ಅಗತ್ಯವಿರುವ ಪಶು ಆಹಾರ, ಮೇವು, ಔಷಧೋಪಚಾರ ಸೇರಿದಂತೆ ನಿರ್ವಹಣಾ ವೆಚ್ಚ ನಿರಂತರವಾಗಿ ಹೆಚ್ಚಾಗುತ್ತಿರುವುದರಿಂದ ಹಾಲಿನ ಉತ್ಪಾದನಾ ವೆಚ್ಚ ಗಣನೀಯವಾಗಿ ಹೆಚ್ಚಾಗಿದೆ. ಸದ್ಯದ ಬರ ಪರಿಸ್ಥಿತಿಯಲ್ಲಿ ಬೆಳೆ ಕೊರತೆಯಿಂದ ವ್ಯವಸಾಯ ಆದಾಯ ತೀವ್ರವಾಗಿ ಕುಸಿದಿದ್ದು, ಮೇವಿನ ಲಭ್ಯತೆ ಕಡಿಮೆಯಾಗಿರುವುದರಿಂದ ಹೈನುಗಾರರು ಸಂಕಷ್ಟ ಎದುರಿಸುತ್ತಿದ್ದಾರೆ" ಎಂದು ವಿವರಿಸಿದರು.

"ವಿವಿಧ ರಾಜ್ಯಗಳ ಸಹಕಾರಿ ಸಂಸ್ಥೆಗಳು ಹಾಗೂ ಖಾಸಗಿ ಡೇರಿಗಳು ನಿರಂತರವಾಗಿ ಹಾಲು ಮತ್ತು ಹಾಲಿನ ಉತ್ಪನ್ನ ದರಗಳನ್ನು ಏರಿಕೆ ಮಾಡುತ್ತಿವೆ. ಗ್ರಾಹಕರ ಹಿತದೃಷ್ಟಿಯಿಂದ ಕಳೆದ ಒಂದೂವರೆ ವರ್ಷಗಳಿಂದ ಹಾಲಿನ ದರವನ್ನು ನಾವು ಹೆಚ್ಚಳ ಮಾಡಿರುವುದಿಲ್ಲ. ಖಾಸಗಿ ಸಂಸ್ಥೆಗಳು ಹೆಚ್ಚಿನ ಹಾಲಿನ ಶೇಖರಣೆಗೆ ಪ್ರಯತ್ನಿಸುತ್ತಿದ್ದು, ಒಕ್ಕೂಟಗಳು ಹಾಲು ಶೇಖರಣೆಗೆ ತೀವ್ರ ಪೈಪೋಟಿ ಎದುರಿಸಬೇಕಾಗಿದೆ" ಎಂದು ಹೇಳಿದರು.

"ಕರ್ನಾಟಕದಲ್ಲಿ ಒಕ್ಕೂಟ ಉತ್ಪಾದಕರಿಂದ ಟೋನ್ಡ್ ಹಾಲನ್ನು ಲೀಟರಿಗೆ ರೂ.35ಕ್ಕೆ ಖರೀದಿಸುತ್ತಿದ್ದು, ನೆರೆಯ ಆಂಧ್ರಪ್ರದೇಶದಲ್ಲಿ ರೂ. 41.5, ಕೇರಳದಲ್ಲಿ ರೂ. 41.8, ಮಹಾರಾಷ್ಟ್ರದಲ್ಲಿ ರೂ. 41, ತಮಿಳುನಾಡಿನಲ್ಲಿ ರೂ. 42.24 ಕ್ಕೆ ಖರೀದಿಸಲಾಗುತ್ತಿದೆ" ಎಂದು ಹೇಳಿದರು.

"ಇದೇ ರೀತಿ ಹಾಲಿನ ಗರಿಷ್ಠ ಮಾರಾಟ ದರದಲ್ಲಿ ಸಹ ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಲೀಟರಿಗೆ ಕನಿಷ್ಠ ರೂ.12 ರಷ್ಟು ಕಡಿಮೆಯಿದೆ" ಎಂದರು.

# ಬೆಂಗಳೂರಿಗೆ ಮೈಸೂರು ಬೆಂಬಲಿತ ಆಧಾರಸ್ತಂಭ, ತಂತ್ರಜ್ಞಾನ ಅಭಿವೃದ್ಧಿಗೆ ಆದ್ಯತೆ ಅಗತ್ಯ: ಸಂಸದ ಯದುವೀರ್ ಒಡೆಯರ್

**ಬೆಂಗಳೂರು, ಸೆ.22:** ಮಾಹಿತಿ ತಂತ್ರಜ್ಞಾನ ಸೇರಿ ಎಲ್ಲಾ ವಲಯಗಳಲ್ಲೂ ಮುಂಚೂಣಿಯಲ್ಲಿರುವ ಬೆಂಗಳೂರು ಮಹಾನಗರಕ್ಕೆ ಮೈಸೂರು ನಗರ ಬೆಂಬಲಿತ ಆಧಾರ ಸ್ತಂಭವಾಗಲಿದ್ದು, ಬೆಂಗಳೂರು ಹೊರತುಪಡಿಸಿ ಉಳಿದ ಪ್ರದೇಶಗಳ ಅಭ್ಯುದಯಕ್ಕೆ ಆದ್ಯತೆ ನೀಡಬೇಕಾಗಿದೆ ಎಂದು ಮೈಸೂರು ಲೋಕಸಭಾ ಕ್ಷೇತ್ರದ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ.

ನಗರದಲ್ಲಿಂದು ಹತ್ತು ದೇಶಗಳಿಗೂ ಅಧಿಕ ಪ್ರತಿನಿಧಿಗಳು ಪಾಲ್ಗೊಂಡಿದ್ದ "ಇಂಡಿಯಾ ಅಡ್ವಾಂಟೇಜ್ ಸಮ್ಮಿಟ್ ನಲ್ಲಿ ಮಾತನಾಡಿದ ಅವರು, ಮೈಸೂರಿನ ಸಂಸ್ಕೃತಿ, ಪರಂಪರೆ ಉಳಿಸಲು ಆರ್ಥಿಕ ಶಕ್ತಿ ಅಗತ್ಯವಾಗಿದೆ. ಮೈಸೂರು ಪ್ರವಾಸೋದ್ಯಮದಿಂದ ಮಾತ್ರ ಶಾಶ್ವತ ಆದಾಯ ಗಳಿಕೆಗೆ ಸೀಮಿತವಾಗಬಾರದು. ಮೈಸೂರು ವಿಭಾಗ ಬೆಳವಣಿಗೆಯಾಗಬೇಕು ಎಂಬುದು ತಮ್ಮ ಹೆಬ್ಬಯಕೆಯಾಗಿದೆ. ಮೈಸೂರಿನಲ್ಲಿ ಉತ್ತಮ ವಾತಾವರಣವಿದ್ದು, ಕೃತಕ ಬುದ್ಧಿಮತ್ತೆ, ಜಿಟಿಟಲ್ ತಂತ್ರಜ್ಞಾನ, ಸೈಬರ್ ಭದ್ರತೆ, ಕ್ಲೌಡ್ ಕಂಪ್ಯೂಟಿಂಗ್ ಹೀಗೆ ನಾನಾ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಲು ಮೈಸೂರಿಗೆ ಅವಕಾಶವಿದೆ. ಭಾರತದ ಬೆಳವಣಿಗೆಯಲ್ಲಿ ತಂತ್ರಜ್ಞಾನ ಅತ್ಯಂತ ಮಹತ್ವದ್ದಾಗಿದೆ. ಉತ್ತಮ ಕಾರ್ಯಕ್ರಮಗಳನ್ನು ರೂಪಿಸುವುದು ಜನಪ್ರತಿನಿಧಿಗಳ ಗುರಿಯಾಗಿದ್ದು, ಬರುವ 2047ರ ವೇಳೆಗೆ ಸಮಗ್ರ, ಸಂಪೂರ್ಣ ಗುರಿ ಸಾಧನೆ ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆ ಧ್ಯೇಯವಾಗಿದೆ. ಕೈಗಾರಿಕಾ ವಲಯ ಇದಕ್ಕೆ ಕೈಜೋಡಿಸಬೇಕು ಎಂದರು.

### ತಂತ್ರಜ್ಞಾನ ಮಾನವ ಕೇಂದ್ರಿತವಾಗಿರಬೇಕು

ಟಿಐಎ ಸಮ್ಮಿಟ್ ಮತ್ತು ಫ್ಯೂಚರ್ ಐಸಿಟಿ ಫೋರಂ ಅಧ್ಯಕ್ಷ ಜೋಸ್ ಜೇಕಬ್ ಕೆ ಶೃಂಗಸಭೆಯನ್ನು ಉದ್ಘಾಟಿಸಿ, ವಿದ್ವಾನ್ ಎಐ ಕೃತಕ ಬುದ್ಧಿಮತ್ತೆ ವೇದಿಕೆ ಲೋಕಾರ್ಪಣೆ ಮಾಡಿ ಮಾತನಾಡಿ, ತಂತ್ರಜ್ಞಾನದ ಭವಿಷ್ಯ ಕೇವಲ ಸ್ಮಾರ್ಟ್ ಆಗಿರುವುದಷ್ಟೇ ಸಾಲದು; ಅದು ಮಾನವಕೇಂದ್ರಿತವಾಗಿರಬೇಕು, ಕೃತಕ ಬುದ್ಧಿಮತ್ತೆ ಆಧಾರಿತವಾಗಿರಬೇಕು ಮತ್ತು ಫಲಿತಾಂಶಕೇಂದ್ರಿತವಾಗಿರಬೇಕು ಎಂದು ಹೇಳಿದರು. ಹೋಚ್‌ಶುಲೆ ಹೋಫ್,



ಯುನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್‌ನ ಅಧ್ಯಕ್ಷ ಪ್ರೊ. ಡಾ. ಹಿ.ಸಿ. ಜುರ್ಗೆನ್ ಲೆಹ್‌ಮನ್ ಮಾತನಾಡಿ, ಡಿಜಿಟಲೀಕರಣದ ವೇಗ ವೃದ್ಧಿಸುತ್ತಿರುವ, ಜಾಗತಿಕ ಸಹಭಾಗಿತ್ವಗಳಲ್ಲಿ ಬದಲಾವಣೆ ಹಾಗೂ ಮೂಲಸೌಕರ್ಯ, ಸಂಪನ್ಮೂಲಗಳ ಮೇಲಿನ ಒತ್ತಡ ಹೆಚ್ಚುತ್ತಿರುವ ಸಂದರ್ಭದಲ್ಲಿ ತಾಂತ್ರಿಕ ಸಾಮರ್ಥ್ಯ ಹಾಗೂ ಅಂತಾರಾಷ್ಟ್ರೀಯ ಸಹಕಾರವನ್ನು ವಿಸ್ತರಿಸಲು ಆರ್ಥಿಕ, ಪರಿಸರ ಹಾಗೂ ಸಾಮಾಜಿಕ ಫಲಿತಾಂಶಗಳಾಗಿ ಪರಿವರ್ತಿಸುವುದು ಅಗತ್ಯವಾಗಿದೆ ಎಂದರು.

ಜಿಎಬಿ ಶೃಂಗಸಭೆಯ ಸಂಚಾಲಕ ಅನಿಲ್‌ಕುಮಾರ್ ತಲ್ಲಂ ಮಾತನಾಡಿ, ಡಿಸೆಂಬರ್ 25ರಿಂದ ಮೂರು ದಿನಗಳ ಕಾಲ ಜಿಜಬಿ ಶೃಂಗಶಭೆ ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುತ್ತಿದ್ದು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸಮ್ಮೇಳನ ಉದ್ಘಾಟಿಲಿದ್ದಾರೆ. ಕೇಂದ್ರ ಸರ್ಕಾರದ ಆರು ಮಂದಿ ಸಚಿವರು, ಐದು ರಾಜ್ಯಗಳ ಮುಖ್ಯಮಂತ್ರಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಬವರೇಯನ್ ಸಂಸದೆ ಉಲ್ರಿಕೆ ಮುಲ್ಲರ್, ಬೆಂಗಳೂರಿನಲ್ಲಿ ಜರ್ಮನಿ ರಾಯಬಾರಿ ಡಾ. ಕ್ರಿಸ್ಟೋಫ್ ದೋರ್ಸ್ ಚೆಫೆಲ್ಡ್‌ಟ್, ಬವೇರಿಯಾದ ಜಿಲ್ಲಾ ಗೌರ್ನರ್ ಡಾ. ಒಲಿವರ್ ಬಾರ್, ಬೆಂಗಳೂರಿನಲ್ಲಿ ಡೆನ್ಮಾರ್ಕ್ ರಾಯಭಾರಿ ಪೀಟರ್ ವಿಂಥೆರ್ ಸ್ಚುಮಿಡ್ಟ್, ಬೆಂಗಳೂರಿನಲ್ಲಿ ಇಟಲಿ ರಾಯಬಾರಿ ಜಿಂಡೋಮೆನಿಕೋ ಮಿಲಾನೋ, ಸಿಜ್ಜರ್ ಲ್ಯಾಂಡ್ ರಾಯಭಾರಿ ಡಾ. ಅಂಗೇಲ ಹೊನೆಗ್ಗರ್, ದಕ್ಷಿಣ ಭಾರತದಲ್ಲಿ ಇಸ್ರೇಲ್ ರಾಯಬಾರಿ ಒರ್ಲಿ ವೇಟ್ಜ್ ಮ್ಯಾನ್ ಮತ್ತಿತರೆ ರಾಯಬಾರಿ ಕಚೇರಿ ಹಿರಿಯ ಸಿಬ್ಬಂದಿ ಪಾಲ್ಗೊಂಡಿದ್ದರು.

# ಡಾ.ಅಚ್ಯುತ ಸಮಂತಗೆ ರೊಮೇನಿಯಾದ ವಿಶೇಷ ಗೌರವ

**ಭುವನೇಶ್ವರ, ಸೆ.22:** ಇಲ್ಲಿನ ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಟೆಕ್ನಾಲಜಿ (ಕೆಐಐಟಿ) ಮತ್ತು ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ (ಕಿಸ್) ಸಂಸ್ಥಾಪಕ ಡಾ. ಅಚ್ಯುತ ಸಮಂತ ಅವರು ರೊಮೇನಿಯಾದ ನಗರಗಳಾದ ಮಿಲಿಸೌಟ್ಸಿ ಮತ್ತು ಬಾರ್ಲಾಡ್‌ನಿಂದ ಎರಡು ವಿಶೇಷ ಗೌರವಗಳಿಗೆ ಪಾತ್ರರಾಗಿದ್ದಾರೆ.

ಮಿಲಿಸೌಟ್ಸಿ ನಗರದ 'ಗೌರವ ಪೌರತ್ವ' ಹಾಗೂ ಬಾರ್ಲಾಡ್ ನಗರದ ಮುನ್ಸಿಪಾಲಿಟಿಯು 'ಕೀ ಟು ದಿ ಸಿಟಿ ಆಫ್ ಬಾರ್ಲಾಡ್' (ಬಾರ್ಲಾಡ್ ನಗರದ ಕೀಲಿ) ಎಂಬ ಪ್ರತಿಷ್ಠಿತ ಗೌರವವನ್ನು ನೀಡಿ ಗೌರವಿಸಲಾಗಿದೆ.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ. ಸಮಂತ ಅವರು, ಶಿಕ್ಷಣ, ಮಾನವೀಯತೆ ಮತ್ತು ಸಮಾಜಕ್ಕೆ ನಾನು ಸಲ್ಲಿಸಿದ ಜೀವಮಾನದ ಸೇವೆಯನ್ನು ಗುರುತಿಸಿ ಈ ಗೌರವಗಳನ್ನು ನೀಡಲಾಗಿದೆ. ನಾನು ಇವುಗಳನ್ನು ಅತ್ಯಂತ ವಿನಮ್ರತೆಯಿಂದ ಸ್ವೀಕರಿಸುತ್ತೇನೆ ಎಂದರು.

ಬಾರ್ಲಾಡ್ ನಗರದ ಬಾಗಿಲುಗಳು ನನಗಾಗಿ ಯಾವಾಗಲೂ ತೆರೆದಿರುತ್ತವೆ ಎಂಬುದು ಅತ್ಯಂತ ಖುಷಿ ಮತ್ತು ಗೌರವದ ವಿಷಯ. ಕೌನ್ಸಿಲ್ ಸದಸ್ಯರು ಮತ್ತು ಅನೇಕ ಗಣ್ಯರ ಸಮ್ಮುಖದಲ್ಲಿ ಮೇಯರ್ಗಳಿಂದ ಈ ಗೌರವಗಳನ್ನು ಸ್ವೀಕರಿಸಿದ್ದು ವಿಶೇಷ ಕ್ಷಣ ಎಂದು ಅಭಿಪ್ರಾಯಪಟ್ಟರು.

ಮಿಲಿಸೌಟ್ಸಿ ಮತ್ತು ಬಾರ್ಲಾಡ್ ಪುರಸಭೆಗಳ



**ರೊಮೇನಿಯಾದ ಜನರು ನನಗೆ ನೀಡಿದ ಪ್ರೀತಿ ಮತ್ತು ಗೌರವವನ್ನು ನಾನು ಸದಾ ಸ್ಮರಿಸುತ್ತೇನೆ. ಈ ಎರಡೂ ಗೌರವ ಸ್ವೀಕಾರದ ವೇಳೆ ಹಾಜರಿದ್ದ ರೊಮೇನಿಯಾದಲ್ಲಿನ ಭಾರತದ ರಾಯಭಾರಿಗಳಿಗೆ ಕೃತಜ್ಞತೆಗಳು.**

**– ಡಾ.ಅಚ್ಯುತ ಸಮಂತ**

ಮೇಯರ್ಗಳು ಹಾಗೂ ಎಲ್ಲಾ ಕೌನ್ಸಿಲ್ ಸದಸ್ಯರು ತೋರಿದ ಆತ್ಮೀಯತೆ, ವಾತ್ಸಲ್ಯ ಮತ್ತು ಗೌರವಕ್ಕಾಗಿ ಅವರಿಗೆ ನನ್ನ ಧನ್ಯವಾದಗಳು ಎಂದು ಹೇಳಿದರು.

# ಯುಕೆಪಿ ನಿವೇಶನ ಅಕ್ರಮ: ತಪ್ಪಿತಸ್ಥರನ್ನು ಜೈಲಿಗಟ್ಟಿ, ಸಚಿವ ಚಲುವರಾಯಸ್ವಾಮಿ ಎಚ್ಚರಿಕೆ

**ಬೆಂಗಳೂರು, ಸೆ.22:** ಯುಕೆಪಿ (ಕೃಷ್ಣಾ ಮೇಲ್ದಂಡೆ ಯೋಜನೆ) ಹಂತ–1 ಮತ್ತು 2ರಲ್ಲಿ ಮುಳುಗಡೆ ಸಂತ್ರಸ್ತರಿಗೆ ಹಂಚಿಕೆ ಮಾಡಿರುವ ನಿವೇಶನಗಳಲ್ಲಿ ನಡೆದಿರುವ ಅಕ್ರಮಗಳಲ್ಲಿ ಭಾಗಿಯಾಗಿರುವವರ ಮೇಲೆ ಮುಲಾಜಿಲ್ಲದೆ ಕ್ರಮ ಕೈಗೊಳ್ಳಿ. ಸಿಐಡಿ (ಹಿಂದಿನ ಸಿಒಡಿ) ತನಿಖೆಯನ್ನು ವೇಗಗೊಳಿಸಿ, ಅಕ್ರಮಕ್ಕೆ ಸಹಕರಿಸಿದವರನ್ನು ಮುಲಾಜಿಲ್ಲದೆ ಜೈಲಿಗಟ್ಟಿ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಖಡಕ್ ಸೂಚನೆ ನೀಡಿದರು.

ವಿಕಾಸಸೌಧದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–1 ಮತ್ತು 2ರಲ್ಲಿ ನಿರ್ಮಿಸಿ ಹಸ್ತಾಂತರಿಸಿರುವ ಕೋಲ್ಹಾರ ಪುನರ್ವಸತಿ ಕೇಂದ್ರಕ್ಕೆ ಸಂಬಂಧಿಸಿದಂತೆ ಮಂಗಳವಾರ ನಡೆದ ಸಭೆಯಲ್ಲಿ ಅವರು ಅಧಿಕಾರಿಗಳಿಗೆ ಹಲವು ನಿರ್ದೇಶನ ನೀಡಿದರು.

ಒಬ್ಬರಿಗೆ ಎರಡೆರಡು–ಮೂರು ನಿವೇಶನ ಹಂಚಿಕೆ ಮಾಡಿರುವುದು, ನಕಲಿ ದಾಖಲೆ ಸೃಷ್ಟಿಸಿ ಅನರ್ಹರಿಗೆ ನಿವೇಶನ ನೀಡಿರುವ ಪ್ರಕರಣಗಳನ್ನು ಕಾನೂನಿನ ಮೂಲಕವೇ ಎದುರಿಸಬೇಕು. ತಪ್ಪು ಮಾಡಿದವರ ಮೇಲೆ ಎಫ್‌ಐಆರ್ ದಾಖಲಿಸಿ. ಏನೇನು ಪರಿಶೀಲನೆ ಮಾಡಿಸಬೇಕೋ ಮಾಡಿಸಿ, ನನಗೆ ಅದೆಲ್ಲ ಮುಖ್ಯವಲ್ಲ, ಸ್ಪಷ್ಟ ಪರಿಹಾರ ಬೇಕು. ತನಿಖಾ ಸಂಸ್ಥೆಗಳು ಯಾವ ಮಾನದಂಡದಲ್ಲಿ ತನಿಖೆ ನಡೆಸುತ್ತಿವೆ ಎಂಬ ಮಾಹಿತಿ ಒದಗಿಸಬೇಕು ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಪ್ರತಿಯೊಂದಕ್ಕೂ ಉತ್ತರದಾಯಿತ್ವ ಇರಬೇಕು. ಅಕ್ಟೋಬರ್ ಅಂತ್ಯದೊಳಗೆ ತಾಂತ್ರಿಕ ಸಮಸ್ಯೆಗಳು



ಇತ್ಯರ್ಥವಾಗಬೇಕು. ಮುಂದಿನ ಸಭೆಯ ವೇಳೆಗೆ ಗೊಂದಲಗಳಿಲ್ಲದೆ ಸಮಸ್ಯೆಗಳು ಬಗೆಹರಿದಿರಬೇಕು. ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಸಂಬಂಧ ಅಭಿವೃದ್ಧಿಪಡಿಸಿದ ಬಡಾವಣೆಗಳ ನಕ್ಷೆ ನೀಡಿ, ಅಲ್ಲಿನ ಸೌಲಭ್ಯಗಳ ಕುರಿತು 3 ದಿನಗಳಲ್ಲಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಇ–ಆಸ್ತಿ ಸೃಜಿಸಲು ಅಡ್ಡಿಯಾಗಿರುವ ತಾಂತ್ರಿಕ ಸಮಸ್ಯೆಗಳ ಕುರಿತು ಲಿಖಿತ ಮಾಹಿತಿ ಸಲ್ಲಿಸಿ. 15 ದಿನಗಳಲ್ಲಿ ಈ ಸಂಬಂಧ ಬೋರ್ಡ್ ರಚನೆಗೊಳ್ಳಲಿದ್ದು, ಅದರ ಮುಂದೆ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ನಿವೇಶನಗಳ ಹಕ್ಕುಪತ್ರದೊಂದಿಗೆ (ಆರ್.ಸಿ) ಅಭಿವೃದ್ಧಿಪಡಿಸಿದ ಲೇಔಟ್ ಅನ್ನೇ ನೀಡಬೇಕು. ಪ್ರಸ್ತುತ ತಾಲೂಕು ಕೇಂದ್ರವಾಗಿರುವ ಕೋಲ್ಹಾರದಲ್ಲಿ ಅತಿಹೆಚ್ಚು ಆರ್.ಸಿ.ಗಳಿವೆ. ಹೀಗಾಗಿ ಗ್ರಾಮ ಪಂಚಾಯಿತಿ ಮತ್ತು ಪಟ್ಟಣ ಪಂಚಾಯಿತಿಗೆ ಸ್ಪಷ್ಟ ನಿರ್ದೇಶನ ನೀಡುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ತಾಲೂಕು ಪಂಚಾಯಿತಿ ಇಒ ಅವರನ್ನು ಪ್ರತ್ಯೇಕವಾಗಿ ತರಾಟೆಗೆ ತೆಗೆದುಕೊಂಡ ಸಚಿವರು, "ಇಂತಹ ಸಮಸ್ಯೆಗಳನ್ನು ಪರಿಹರಿಸಲು ಇಷ್ಟು ವರ್ಷ ಬೇಕಿತ್ತಾ? ಪ್ರಾದೇಶಿಕ ಆಯುಕ್ತರೊಂದಿಗೆ ಸಮನ್ವಯ ಸಾಧಿಸಿ ಕೂಡಲೇ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ. ತಿಂಗಳೊಳಗೆ ಸಮಸ್ಯೆ ಇತ್ಯರ್ಥವಾಗದಿದ್ದರೆ ನಿಮ್ಮ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು" ಎಂದು ಎಚ್ಚರಿಕೆ ನೀಡಿದರು.

**ವಿಡಿಯೋ ಕರೆ ಮೂಲಕ ಸೂಚನೆ:**

ಸಭೆಯ ಮಧ್ಯೆಯೇ ವಿಡಿಯೋ ಕರೆ ಮೂಲಕ ಪ್ರಾದೇಶಿಕ ಆಯುಕ್ತೆ ಜಾನಕಿ ಅವರೊಂದಿಗೆ ಮಾತನಾಡಿದ ಸಚಿವರು, "ತಕ್ಷಣವೇ ಸಿಐಡಿ ಜೊತೆ ಮಾತನಾಡಿ ಲಿಖಿತ ಪತ್ರ ಬರೆಯಿರಿ. ಈವರೆಗಿನ ತನಿಖೆಯ ಪ್ರಗತಿ ಪರಿಶೀಲಿಸಿ. ಅಕ್ರಮ ಎಸಗಿದವರು ಮತ್ತು ಅವರಿಗೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ. ಅನಧಿಕೃತವಾಗಿ ನಿವೇಶನ ಪಡೆದುಕೊಂಡಿರುವವರಿಂದ ಆದಷ್ಟು ಬೇಗ ಜಾಗ ತೆರವುಗೊಳಿಸಿ" ಎಂದು ನಿರ್ದೇಶಿಸಿದರು. "ನಾರಾಯಣಪುರ ವ್ಯಾಪ್ತಿಯಲ್ಲಿನ ಅರ್ಹರಿಗೆ ಕೋಲ್ಹಾರದಲ್ಲಿ ನಿವೇಶನ ನೀಡಿದರೆ ಹೇಗೆ?" ಎಂದು ಕೆಂಡಾಮಂಡಲಗೊಂಡ ಸಚಿವರು, "ಕಳೆದ 15 ವರ್ಷಗಳಿಂದ ಇಂತಹ ಸಮಸ್ಯೆಗಳನ್ನು ಜೀವಂತವಾಗಿಟ್ಟಿದ್ದೀರಿ. ಅಕ್ಟೋಬರ್ ಅಂತ್ಯದೊಳಗೆ ಯಾವುದೇ ದೂರನ್ನು ಹೊತ್ತು ಶಾಸಕ ಶಿವಾನಂದ ಪಾಟೀಲ್ ಅವರು ನನ್ನ ಬಳಿ ಬರುವಂತಾಗಬಾರದು. ಅಪ್ಪಿತಪ್ಪಿ ಶಾಸಕರು ಇದೇ ಸಮಸ್ಯೆಗಳನ್ನು ಹಿಡಿದುಕೊಂಡು ಬಂದರೆ ಅಧಿಕಾರಿಗಳೇ ನೇರ ಹೊಣೆ ಹೊರಬೇಕಾಗುತ್ತದೆ ಹಾಗೂ ಮನೆಗೆ ಹೋಗಬೇಕಾಗುತ್ತದೆ" ಎಂದು ಎಚ್ಚರಿಸಿದರು.

**ಬೋರ್ಡ್ ಸಭೆ ಕಡ್ಡಾಯ:**

ಮುಂದಿನ ಒಂದು ತಿಂಗಳೊಳಗೆ ಇಲಾಖೆ ವ್ಯಾಪ್ತಿಯ ನಾಲ್ಕು ನಿಗಮಗಳ ಮಂಡಳಿ (ಬೋರ್ಡ್) ಅಸ್ತಿತ್ವಕ್ಕೆ ಬರಲಿದೆ. ಪ್ರತಿ 3 ತಿಂಗಳಿಗೊಮ್ಮೆ ಕಡ್ಡಾಯವಾಗಿ ಬೋರ್ಡ್ ಸಭೆ ನಡೆಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಶಾಸಕ ಶಿವಾನಂದ ಪಾಟೀಲ್, ನೀರಾವರಿ ಇಲಾಖೆ ಕಾರ್ಯದರ್ಶಿ ಕುಲಕರ್ಣಿ ಹಾಗೂ ಕೃಷ್ಣಾಭಾಗ್ಯ ಜಲ ನಿಗಮದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಏನಿದು ವಿವಾದ?

ಯುಕೆಪಿ ಯೋಜನೆಯಡಿ ಒಟ್ಟು 176 ಗ್ರಾಮಗಳು ಮುಳುಗಡೆಯಾಗಿದ್ದವು. ನಾರಾಯಣಪುರ ಜಲಾಶಯದ ಹಿನ್ನೀರಿನಲ್ಲಿ 40 ಗ್ರಾಮಗಳು ಮತ್ತು ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ 136 ಗ್ರಾಮಗಳು ಮುಳುಗಡೆಯಾಗಿದ್ದವು. 3,435 ಸಂತ್ರಸ್ತ ಕುಟುಂಬಗಳಿಗಾಗಿ 5,664 ನಿವೇಶನಗಳ ಪುನರ್ವಸತಿ ಕೇಂದ್ರವನ್ನು 1995ರಲ್ಲಿ ರಚಿಸಲಾಗಿತ್ತು. ಆದರೆ ಇದರಲ್ಲಿ 1,117 ನಿವೇಶನಗಳು ಕಾನೂನುಬಾಹಿರವಾಗಿ ಹಂಚಿಕೆಯಾಗಿದ್ದವು. ಮಧ್ಯವರ್ತಿಗಳು ನಕಲಿ ದಾಖಲೆ ಸೃಷ್ಟಿಸಿ ಅನರ್ಹರಿಗೆ ನಿವೇಶನ ನೀಡಿದ್ದರು. 123 ನಿವೇಶನಗಳು ಇಬ್ಬಿಬ್ಬರಿಗೆ (ಡಬಲ್) ಹಂಚಿಕೆಯಾಗಿದ್ದವು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ 2016ರಲ್ಲಿ ಸಿಒಡಿ ತನಿಖೆ ನಡೆದು 8 ಮಂದಿ ಅಧಿಕಾರಿಗಳ ಮೇಲೆ ಚಾರ್ಜ್‌ಶೀಟ್ ಸಹ ಸಲ್ಲಿಕೆಯಾಗಿತ್ತು. ಇದರಲ್ಲಿ ಎಸ್.ಎಲ್.ಒ ಮತ್ತು ಆರ್.ಒ ಹಂತದ ಅಧಿಕಾರಿಗಳೂ ಅಕ್ರಮ ಎಸಗಿದ್ದರು. ಆದರೆ ತನಿಖೆ ಇಂದಿಗೂ ಪೂರ್ಣಗೊಂಡಿಲ್ಲ.

# 7 ಜಿಲ್ಲೆ 500 ಕೆರೆಗಳ ಪುನಶ್ಚೇತನಕ್ಕೆ 150 ಕೋಟಿ: ಖಂಡ್ರೆ

**ಬೆಂಗಳೂರು, ಸೆ.22:** ರಾಜ್ಯದ 7 ಜಿಲ್ಲೆಗಳ 500 ಕೆರೆಗಳ ಪುನಶ್ಚೇತನಕ್ಕೆ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ 150 ಕೋಟಿ ರೂ. ಸಮಗ್ರ ಯೋಜನಾ ವರದಿ ಸಿದ್ಧವಾಗಿದ್ದು, ಸಮರ ಸಜ್ಜಿನಂತೆ ಕೆರೆ ಅಭಿವೃದ್ಧಿ ಮಾಡುವಂತೆ ಸಂಬಂಧಿತ ಸಿಇಒಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.



ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಎಲ್ಲ ಜಿಲ್ಲೆಗಳ ಪಂಚಾಯತಿ ಸಿಇಒಗಳ ಜತೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ ಅವರು, ವಿಶ್ವಬ್ಯಾಂಕ್ ನೆರವಿನ ಜೊತೆಗೆ ವಿವಿಬಿ ರಾಮ್ ಜಿ ಸಹಯೋಗದಲ್ಲಿ ಈ ಕೆರೆಗಳ ಹೂಳು ತೆಗೆಯುವುದು, ಏರಿ ದುರಸ್ತಿ, ಏರಿ ಎತ್ತರಿಸುವುದು, ಸೌಂದರ್ಯೀಕರಣ, ನಾಲೆಗಳ ದುರಸ್ತಿ ಮಾಡುವಂತೆ ನಿರ್ದೇಶನ ನೀಡಿದರು.

ಈಗ ಮಳೆ ಇಲ್ಲದ ಕಾರಣ ಕೆರೆಗಳು ಬತ್ತಿ ಹೋಗಿದ್ದು, ಕೆರೆ, ಕಾಲುವೆ ಪುನಶ್ಚೇತನಕ್ಕೆ ಸೂಕ್ತ ಸಮಯವಾಗಿದೆ. ಹಿಂಗಾರು ಮಳೆಯಾದರೆ ಈ ಕೆರೆಗಳಿಗೆ ನೀರು ಬರುತ್ತದೆ. ಮುಂದಿನ ಬೇಸಿಗೆಯಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಗೆ ಪರಿಹಾರ ದೊರಕುತ್ತದೆ. ಭೂಮಿಯ ತೇವಾಂಶ ಮತ್ತು ಅಂತರ್ಜಲ ಮಟ್ಟವೂ ಹೆಚ್ಚುತ್ತದೆ. ಹೀಗಾಗಿ ತತ್ ಕ್ಷಣವೇ ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು. ವಿಶ್ವಬ್ಯಾಂಕ್ ಯೋಜನೆಯಡಿ ಬೆಂಗಳೂರು ಗ್ರಾಮಾಂತರ –68, ಬೆಂಗಳೂರು ನಗರ –67, ಬೀದರ್–44, ಚಿಕ್ಕಬಳ್ಳಾಪುರ –90, ಕಲ್ಬುರ್ಗಿ–49, ತುಮಕೂರು –96 ಮತ್ತು ಕೋಲಾರ ಜಿಲ್ಲೆಯ–86 ಕೆರೆಗಳ ಪುನಶ್ಚೇತನಕ್ಕೆ ಯೋಜನೆ ರೂಪಿಸಲಾಗಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಹಳ್ಳಿಮಕ್ಕಳಿಗೆ ತಂತ್ರಜ್ಞಾನ ತಲುಪಿಸಿ: ಸಿಎಂ ಡಿ.ಕೆ.ಶಿವಕುಮಾರ್ ಕರೆ

## ಭವಿಷ್ಯದ ಪೀಳಿಗೆಯನ್ನು ತಯಾರು ಮಾಡುವ ಕಿಯೋನಿಕ್ಸ್ ಯತ್ನಕ್ಕೆ ಶ್ಲಾಘನೆ: ಕಿಯೋನಿಕ್ಸ್‌ಗೆ 50 ವರ್ಷಗಳ ಸಂಭ್ರಮ



**ಬೆಂಗಳೂರು, ಸೆ.22:** ಕಿಯೋನಿಕ್ಸ್ ಸಂಸ್ಥೆ ಎಐ ಆಧಾರಿತ ಕಿಯೋ ಕಂಪ್ಯೂಟರ್‌ಗಳ ಮೂಲಕ ತಂತ್ರಜ್ಞಾನವನ್ನು ಹಳ್ಳಿ ಮಕ್ಕಳಿಗೆ ನೀಡುವ ದೊಡ್ಡ ಪ್ರಯತ್ನಕ್ಕೆ ಮುಂದಾಗಿದೆ. ಭವಿಷ್ಯದ ಮಕ್ಕಳನ್ನು ತಯಾರು ಮಾಡುವ ಚಿಂತನೆಗೆ ಕಿಯೋನಿಕ್ಸ್ ಮುಂದಾಗಿರುವುದನ್ನು ಸ್ವಾಗತಿಸುತ್ತೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನ ಖಾಸಗಿ ಹೋಟೇಲ್‌ನಲ್ಲಿ ಮಂಗಳವಾರ ನಡೆದ ಕಿಯೋನಿಕ್ಸ್‌ನ 50ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರಸ್ತುತ ನಾವು ಭವಿಷ್ಯ ನಿರ್ಮಾಣ ಮಾಡುವ ಸಂದರ್ಭದಲ್ಲಿದ್ದೇವೆ. ಎಐ ಯುಗದ ಪ್ರವೇಶದಲ್ಲಿದ್ದು, ಕಿಯೋನಿಕ್ಸ್ ಹೊಸ ಸಾಧ್ಯತೆಗಳನ್ನು ಗುರುತಿಸಿ ಕಿಯೋ ತಯಾರಿಸಿದ್ದಾರೆ. ಆ ಮೂಲಕ ಕರ್ನಾಟಕವನ್ನು ಭವಿಷ್ಯಕ್ಕೆ ತಯಾರು ಮಾಡುತ್ತಿದೆ. ದೇವರಾಜ ಅರಸು ಅವರ ಕಾಲದಲ್ಲಿ ಇದನ್ನು ಸ್ಥಾಪಿಸಿದ್ದು, ಇದರಿಂದ ಸಾಕಷ್ಟು ಜನರಿಗೆ ಉದ್ಯೋಗ ಸಿಗುತ್ತಿದೆ. ತಂತ್ರಜ್ಞಾನ, ವಿಜ್ಞಾನ ಎಂದರೆ ಬೆಂಗಳೂರು ಎಂದರು.

**ಕೌಶಲ್ಯ ವೃದ್ಧಿಗೆ ಉದ್ಯಮ ಆಧಾರಿತ ಪಠ್ಯಕ್ರಮಕ್ಕೆ ಆದ್ಯತೆ ನೀಡಲು ಸೂಚನೆ:** ನಮ್ಮಲ್ಲಿ 30 ಸಾವಿರ ಇಂಜಿನಿಯರಿಂಗ್ ಸೀಟುಗಳು ಖಾಲಿ ಉಳಿದಿದೆ. ಇಂಜಿನಿಯರಿಂಗ್ ವ್ಯಾಸಂಗ ಮಾಡಿದವರಿಗೆ ಕಡಿಮೆ ವೇತನ ಸಿಗುತ್ತಿದ್ದು, ಇದನ್ನು ಯಾವ ರೀತಿ ಬಗೆಹರಿಸಬೇಕು ಎಂದು ಆಲೋಚನೆ ಮಾಡಲಾಗುತ್ತಿದೆ. ಮಕ್ಕಳಲ್ಲಿ ಕೌಶಲ್ಯ ವೃದ್ಧಿಗೆ ಆದ್ಯತೆ ನೀಡಲು ಅವರ ಪಠ್ಯಕ್ರಮವನ್ನು ಉದ್ಯಮ ಆಧಾರಿತವನ್ನಾಗಿ ಪರಿವರ್ತಿಸಲು ಸೂಚಿಸಿದ್ದೇನೆ. ಕೆಲವು ವಿದೇಶಗಳಲ್ಲಿ ಉದ್ಯೋಗ ನೀಡುವಾಗ ಪದವಿಗಳನ್ನು ಕೇಳುವುದಿಲ್ಲ. ಆ ಉದ್ಯೋಗಕ್ಕೆ ಸೂಕ್ತವಾದ ಕೌಶಲ್ಯವಿದೆಯೇ ಎಂದಷ್ಟೇ ಕೇಳುತ್ತಾರೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಕಿಯೋನಿಕ್ಸ್ ಆರಂಭವಾದಾಗ ಬೆಂಗಳೂರಿನಲ್ಲಿ 20 ಲಕ್ಷ ಜನಸಂಖ್ಯೆ ಇತ್ತು. ಈಗ 1.40 ಕೋಟಿ ಜನ ಇದ್ದಾರೆ. ಕರ್ನಾಟಕ ಸರ್ಕಾರ ಆಗಲೇ ದೂರದೃಷ್ಟಿಯಿಂದ ತಂತ್ರಜ್ಞಾನ ಕ್ಷೇತ್ರಕ್ಕೆ ದೊಡ್ಡ ಅಡಿಪಾಯ ಹಾಕಿತು. ಇದಕ್ಕಾಗಿ ದೇವರಾಜ ಅರಸು, ವೀರಪ್ಪ ಮೊಯ್ಲಿ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ. ಉತ್ಪಾದನಾ ವಲಯದಲ್ಲಿ ತನ್ನ ಕೊಡುಗೆ ನೀಡಿದೆ. 50 ವರ್ಷಗಳ ಅನ್ವೇಷಣೆ, ತಂತ್ರಜ್ಞಾನ, ಪ್ರಗತಿಯ ಪಯಣವಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

### ಬಿಯಾಂಡ್ ಬೆಂಗಳೂರು ಮೂಲಕ ಐಟಿ ತಂತ್ರಜ್ಞಾನಕ್ಕೆ ಉತ್ತೇಜನ

ಪ್ರಸ್ತುತ ಎಲ್ಲ ಕ್ಷೇತ್ರಗಳಲ್ಲೂ ತಂತ್ರಜ್ಞಾನದ ಸೇವೆ ಒದಗಿಸಲಾಗುತ್ತಿದೆ. ಬೆಂಗಳೂರಿನ ಜತೆಗೆ ಹುಬ್ಬಳ್ಳಿ, ಶಿವಮೊಗ್ಗ, ಕಲಬುರಗಿ, ಮಂಗಳೂರಿನಲ್ಲಿ ಮಾಹಿತಿ ತಂತ್ರಜ್ಞಾನಕ್ಕೆ ಉತ್ತೇಜನ ನೀಡಲು ತೀರ್ಮಾನಿಸಿದ್ದು, ಬಿಯಾಂಡ್ ಬೆಂಗಳೂರು ಪರಿಕಲ್ಪನೆಯಲ್ಲಿ ಬೇರೆ ಜಿಲ್ಲೆಗಳಲ್ಲಿ ಉದ್ಯಮಗಳ ಪ್ರಗತಿಗೆ ಮುಂದಾಗಿದ್ದೇವೆ. ಸಮಸ್ಯೆ ಯಾವುದೇ ಆದರೂ ಸಕಾರಾತ್ಮಕವಾಗಿ ಆಲೋಚಿಸಿ ಪರಿಹಾರ ಕಂಡುಕೊಳ್ಳಬೇಕು. ಎಐ ತಂತ್ರಜ್ಞಾನ ಬಂದಿದ್ದು, ಎಲ್ಲರಿಗೂ ಇದು ಲಭ್ಯವಾಗುತ್ತಿದೆ. ಕಿಯೋನಿಕ್ಸ್ ಅವರು ಗ್ರಾಮೀಣ ಭಾಗದ ಶಾಲೆಗಳು ಹಾಗೂ ಸಣ್ಣ ಉದ್ಯಮಿಗಳಿಗೆ ಈ ತಂತ್ರಜ್ಞಾನ ತಲುಪಿಸುತ್ತಿರುವುದಕ್ಕೆ ಅಭಿನಂದಿಸುತ್ತೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

# ವಂದೇಮಾತರಂ ಗೀತೆ ವಿವಾದ ಸರ್ಕಾರದ ಆದೇಶ ಮರುಪರಿಶೀಲಿಸಿ



■ ಮುಖ್ಯಮಂತ್ರಿಗೆ ರಾಜ್ಯಪಾಲರ ಪತ್ರ

**ಬೆಂಗಳೂರು, ಸೆ.22:** ವಂದೇ ಮಾತರಂ ಗೀತೆಯ ಎರಡು ಚರಣಗಳನ್ನು ಮಾತ್ರ ಹಾಡಲು ಕರ್ನಾಟಕ ಸರ್ಕಾರ ನಿರ್ಧರಿಸಿರುವ ವಿಚಾರಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಆಕ್ಷೇಪ ವ್ಯಕ್ತಪಡಿಸಿದ್ದು, ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ರಾಜ್ಯಪಾಲರು ನಾಲ್ಕು ಪುಟಗಳ ಪತ್ರ ಬರೆದಿದ್ದಾರೆ.

ರಾಜ್ಯ ಸರ್ಕಾರದ ನಿರ್ಧಾರವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಿಗೆ ವಿರುದ್ಧವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿರುವ ರಾಜ್ಯಪಾಲರು, ಸಂವಿಧಾನಾತ್ಮಕ ಅಂಶಗಳು ಹಾಗೂ ಕೇಂದ್ರ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ವಂದೇ ಮಾತರಂ ಕುರಿತ ರಾಜ್ಯ ಸರ್ಕಾರದ ಆದೇಶವನ್ನು ಮರುಪರಿಶೀಲಿಸುವಂತೆ ಸೂಚಿಸಿದ್ದಾರೆ.

ವಂದೇ ಮಾತರಂನ ಅಧಿಕೃತ ಆವೃತ್ತಿಯನ್ನು ಕೇಂದ್ರ ಗೃಹ ಸಚಿವಾಲಯ ನಿಗದಿಪಡಿಸಿದೆ. ರಾಷ್ಟ್ರೀಯ ಗೀತೆ ಹಾಗೂ ರಾಷ್ಟ್ರಗಾನದ ಕುರಿತು ನಿರ್ದಿಷ್ಟ ಆದೇಶಗಳನ್ನು ಹೊರಡಿಸಲಾಗಿದ್ದು, ರಾಜ್ಯಗಳೂ ಕೇಂದ್ರದ ಮಾರ್ಗಸೂಚಿಗಳನ್ನು ಪಾಲಿಸುವಂತೆ ಪತ್ರದಲ್ಲಿ ಸೂಚಿಸಲಾಗಿದೆ.

**ರಾಜ್ಯದ ಕಾರ್ಯಕ್ರಮಗಳಿಗೆ ಪ್ರತ್ಯೇಕ ಆವೃತ್ತಿ ಮಾಡುವಂತಿಲ್ಲ:** ಸಾಮೂಹಿಕ ಗಾಯನ ಸಂದರ್ಭದಲ್ಲೂ ವಂದೇ ಮಾತರಂನ ಅಧಿಕೃತ ಆವೃತ್ತಿಯನ್ನೇ ಹಾಡಬೇಕು ಎಂದು ಕೇಂದ್ರದ ಮಾರ್ಗಸೂಚಿಯಲ್ಲಿ ಸೂಚಿಸಲಾಗಿದೆ. ರಾಜ್ಯ ಸರ್ಕಾರದ ಕಾರ್ಯಕ್ರಮಗಳಿಗೆ ಪ್ರತ್ಯೇಕವಾಗಿ ಸಂಕ್ಷಿಪ್ತ ಅಥವಾ ಬದಲಾದ ಆವೃತ್ತಿಯನ್ನು ಹಾಡಲು ಅವಕಾಶವಿಲ್ಲ ಎಂದು ರಾಜ್ಯಪಾಲರು ಪತ್ರದಲ್ಲಿ ಹೇಳಿದ್ದಾರೆ. ಇದು ಕೇವಲ ಆಡಳಿತಾತ್ಮಕ ಅನುಕೂಲದ ವಿಚಾರವಲ್ಲ. ರಾಷ್ಟ್ರೀಯ ಚಿಹ್ನೆಗೆ ಸಂಬಂಧಿಸಿದ ನಿಯಮಗಳ ಪಾಲನೆಯ ವಿಚಾರವಾಗಿದೆ. 1971ರ ಕಾಯ್ದೆಯ ಸೆಕ್ಷನ್ 3ರ ಅಡಿ ರಾಷ್ಟ್ರೀಯ ಗೀತೆಗೆ ನೀಡಲಾಗಿರುವ ರಕ್ಷಣೆಯನ್ನು ವಂದೇ ಮಾತರಂಗೂ ವಿಸ್ತರಿಸಲಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

# ನೈಋತ್ಯ ರೈಲ್ವೆ ವ್ಯಾಪ್ತಿಗೆ ಸಂಪೂರ್ಣ ಮಂಗಳೂರು ರೈಲ್ವೆ ಪ್ರದೇಶ



■ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

**ಬೆಂಗಳೂರು, ಸೆ.22:** ಮಂಗಳೂರು ರೈಲ್ವೆ ಪ್ರದೇಶವನ್ನು ಸಂಪೂರ್ಣವಾಗಿ ನೈಋತ್ಯ ರೈಲ್ವೆ ವಲಯದ ವ್ಯಾಪ್ತಿಗೆ ತರುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸ್ಪಷ್ಟಪಡಿಸಿದ್ದಾರೆ.

ಮಂಗಳೂರು ರೈಲ್ವೆ ಪ್ರದೇಶವನ್ನು ಒಂದೇ ವಲಯದ ಅಡಿಯಲ್ಲಿ ತರುವ ಮೂಲಕ ಹಲವು ವರ್ಷಗಳಿಂದ ಎದುರಾಗುತ್ತಿರುವ ಕಾರ್ಯಾಚರಣೆಯ ಸಮಸ್ಯೆಗಳನ್ನು ನಿವಾರಿಸುವ ಉದ್ದೇಶ ಹೊಂದಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಂಗಳೂರು ವಿಭಾಗವನ್ನು ನೈಋತ್ಯ ರೈಲ್ವೆಗೆ ಸೇರಿಸುವ ನಿರ್ಧಾರಕ್ಕೆ ಕೇರಳದಿಂದ ವಿರೋಧ ವ್ಯಕ್ತವಾಗುತ್ತಿರುವ ಸಂದರ್ಭದಲ್ಲೇ ಸಚಿವರ ಈ ಹೇಳಿಕೆ ಬಂದಿದೆ. ತಮ್ಮನ್ನು ಭೇಟಿಯಾದ ಕೇರಳದ ಸಂಸದರಿಗೆ ಪ್ರತಿಕ್ರಿಯಿಸಿದ ಅಶ್ವಿನಿ ವೈಷ್ಣವ್, ಮಂಗಳೂರು ರೈಲ್ವೆ ಪ್ರದೇಶವನ್ನು ಈ ಹಿಂದೆ ಮೂರು ವಿಭಿನ್ನ ರೈಲ್ವೆ ವಲಯಗಳಾಗಿ ವಿಂಗಡಿಸಲಾಗಿತ್ತು. ಇದರಿಂದ ರೈಲು ಕಾರ್ಯಾಚರಣೆಯಲ್ಲಿ ಹಲವು ಗಂಭೀರ ಸಮಸ್ಯೆಗಳು ಎದುರಾಗುತ್ತಿದ್ದವು ಎಂದು ಹೇಳಿದ್ದಾರೆ.

ರೈಲ್ವೆ ಸಚಿವಾಲಯವೂ ಈ ಕುರಿತು ಸ್ಪಷ್ಟನೆ ನೀಡಿದ್ದು, ಮಂಗಳೂರು ಪ್ರದೇಶವು ಹಲವು ವಲಯಗಳ ನಡುವೆ ವಿಭಜನೆಯಾಗಿರುವುದರಿಂದ ರೈಲುಗಳ ಸಂಚಾರದಲ್ಲಿ ಅನಗತ್ಯ ವಿಳಂಬ ಮತ್ತು ದಟ್ಟಣೆ ಉಂಟಾಗುತ್ತಿತ್ತು ಎಂದು ತಿಳಿಸಿದೆ. ಗೋವಾ ಅಥವಾ ಹಾಸನ ಭಾಗದಿಂದ ಮಂಗಳೂರಿನತ್ತ ಬರುವ ರೈಲುಗಳು ಮಂಗಳೂರು ನಿಲ್ದಾಣ ತಲುಪುವ ಮೊದಲು ಮೂರು ಕಾರ್ಯಾಚರಣಾ ವಲಯಗಳು ಹಾಗೂ ಬದಲಾವಣೆ ಕೇಂದ್ರಗಳನ್ನು ದಾಟಬೇಕಾದ ಪರಿಸ್ಥಿತಿ ಇತ್ತು. ಪ್ರತಿ ಹಂತದಲ್ಲೂ ಕಾರ್ಯಾಚರಣಾ ವ್ಯವಸ್ಥೆಯಲ್ಲಿ ಬದಲಾವಣೆ ಎದುರಾಗುತ್ತಿದ್ದರಿಂದ ರೈಲು ಸಂಚಾರದ ವೇಗ ಮತ್ತು ನಿರ್ವಹಣೆಯ ಮೇಲೆ ಪರಿಣಾಮ ಬೀರುತ್ತಿತ್ತು ಎಂದು ಸಚಿವಾಲಯ ಹೇಳಿದೆ.

ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಮಂಗಳೂರು ರೈಲ್ವೆ ಪ್ರದೇಶವನ್ನು ಒಂದೇ ವಲಯದ ಅಡಿಯಲ್ಲಿ ತರಲು ನಿರ್ಧರಿಸಲಾಗಿದೆ. ಇದರಿಂದ ರೈಲುಗಳ ಕಾರ್ಯಾಚರಣೆ ಹೆಚ್ಚು ಸರಳವಾಗುವುದರ ಜೊತೆಗೆ ಸಂಚಾರ ನಿರ್ವಹಣೆಯಲ್ಲೂ ದಕ್ಷತೆ ಹೆಚ್ಚಲಿದೆ ಎಂಬುದು ರೈಲ್ವೆ ಸಚಿವಾಲಯದ ನಿಲುವಾಗಿದೆ.ಮಂಗಳೂರು ವಿಭಾಗದ ವ್ಯಾಪ್ತಿಗೆ ಸಂಬಂಧಿಸಿದ ಈ ನಿರ್ಧಾರ ಇದೀಗ ಕೇರಳದಲ್ಲೂ ಚರ್ಚೆಗೆ ಕಾರಣವಾಗಿದ್ದು, ವಿರೋಧದ ನಡುವೆಯೇ ಕೇಂದ್ರ ಸರ್ಕಾರ ತನ್ನ ನಿರ್ಧಾರವನ್ನು ಕಾರ್ಯಾಚರಣೆಯ ಅಗತ್ಯಗಳ ಆಧಾರದ ಮೇಲೆ ಸಮರ್ಥಿಸಿಕೊಂಡಿದೆ.

# ವಂದೇಮಾತರಂ ವಿವಾದ: 2 ವಾರಗಳಲ್ಲಿ ಉತ್ತರಿಸುವಂತೆ ಕೇಂದ್ರಕ್ಕೆ ಸುಪ್ರೀಂ ಸೂಚನೆ

## ಕರ್ನಾಟಕ ಸಂಗೀತ ಗಾಯಕ ಟಿ.ಎಂ. ಕೃಷ್ಣ ಅವರಿಂದ ಅರ್ಜಿ

**ನವದೆಹಲಿ, ಸೆ.22:** ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆ ವಂದೇಮಾತರಂನ ಎಲ್ಲಾ ಆರು ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸಿರುವ ಕೇಂದ್ರದ ನಿರ್ದೇಶನ ಹಾಗೂ ಅದಕ್ಕೆ ಸಂಬಂಧಿಸಿದ ದಂಡಾತ್ಮಕ ಕ್ರಮಗಳನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಿತು. ಅರ್ಜಿಗೆ ಎರಡು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸುವಂತೆ ಕೇಂದ್ರ ಸರ್ಕಾರಕ್ಕೆ ನ್ಯಾಯಾಲಯ ಸೂಚಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ಮೋಹನಾ ಅವರನ್ನೊಳಗೊಂಡ ಪೀಠ ಅರ್ಜಿಯನ್ನು ವಿಚಾರಣೆ ನಡೆಸಿತು. ಕರ್ನಾಟಕ ಮೂಲದ ಖ್ಯಾತ ಕರ್ನಾಟಕ ಸಂಗೀತ ಗಾಯಕ ಟಿ.ಎಂ. ಕೃಷ್ಣ ಅವರು ಅರ್ಜಿ ಸಲ್ಲಿಸಿದ್ದು, ವಂದೇಮಾತರಂನ ಎಲ್ಲಾ ಆರು ಚರಣಗಳನ್ನು ಹಾಡುವಂತೆ ಮಾಡಿರುವ ನಿಯಮ ಹಾಗೂ ಹಾಡದಿದ್ದರೆ ದಂಡಾತ್ಮಕ ಕ್ರಮ ಕೈಗೊಳ್ಳುವ ಅವಕಾಶವನ್ನು ಪ್ರಶ್ನಿಸಿದ್ದಾರೆ.

ಅರ್ಜಿದಾರರ ಪರ ಹಿರಿಯ ವಕೀಲ ಎಸ್. ಮುರಳೀಧರ್, ದಂಡಾತ್ಮಕ ಕಾನೂನಿನಲ್ಲಿ ಅಪರಾಧಕ್ಕೆ ಕಾರಣವಾಗುವ ನಡವಳಿಕೆಯನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಬೇಕು. ಅಸ್ಪಷ್ಟ ನಿಯಮಗಳ ಆಧಾರದ ಮೇಲೆ ನಾಗರಿಕರ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳಲು ಅವಕಾಶ ಇರಬಾರದು ಎಂದು ವಾದಿಸಿದರು.

ವಿಚಾರಣೆ ವೇಳೆ ವಂದೇಮಾತರಂನ ಎರಡು ಅಥವಾ ಆರು ಚರಣಗಳ ಪೈಕಿ ಯಾವುದನ್ನು ಅಧಿಕೃತವಾಗಿ ಹಾಡಬೇಕು ಎಂಬ ಪ್ರಶ್ನೆಯನ್ನು ಈ ಹಂತದಲ್ಲಿ ನಿರ್ಧರಿಸಲು ಸುಪ್ರೀಂ ಕೋರ್ಟ್ ಮುಂದಾಗಲಿಲ್ಲ. ರಾಷ್ಟ್ರೀಯ ಸಂಕೇತಗಳಿಗೆ ಸಂಬಂಧಿಸಿದ ನೀತಿ ಮತ್ತು ಅದರ ರೂಪವನ್ನು ನಿರ್ಧರಿಸುವುದು ಸರ್ಕಾರದ ವ್ಯಾಪ್ತಿಯಲ್ಲಿದೆ ಎಂದು ಪೀಠ ಅಭಿಪ್ರಾಯಪಟ್ಟಿದೆ. ಆದರೆ, ಹಾಡಲು ನಿರಾಕರಿಸುವ ನಾಗರಿಕರ ವಿರುದ್ಧ ಕ್ರಿಮಿನಲ್ ದಂಡನೆ ವಿಧಿಸಬಹುದೇ ಎಂಬ ಕಾನೂನು ಪ್ರಶ್ನೆಯನ್ನು ಪರಿಶೀಲಿಸುವುದಾಗಿ ನ್ಯಾಯಾಲಯ ಸ್ಪಷ್ಟಪಡಿಸಿದೆ.

ಈ ಸಂದರ್ಭದಲ್ಲಿ 1986ರ ಬಿಜೋಯ್ ಎಮ್ಯಾನುಯೆಲ್ ಪ್ರಕರಣದ ತೀರ್ಪನ್ನೂ ಸುಪ್ರೀಂ ಕೋರ್ಟ್ ಉಲ್ಲೇಖಿಸಿದೆ. ಧಾರ್ಮಿಕ ಅಥವಾ ಆತ್ಮಸಾಕ್ಷಿಯ ಕಾರಣದಿಂದ ರಾಷ್ಟ್ರೀಯ ಗೀತೆಯನ್ನು ಹಾಡಲು ನಿರಾಕರಿಸುವ ವ್ಯಕ್ತಿಯ ವಿರುದ್ಧ ಕೇವಲ ಹಾಡದ ಕಾರಣಕ್ಕೆ ದಂಡಾತ್ಮಕ ಕ್ರಮ ಕೈಗೊಳ್ಳುವ ಪ್ರಶ್ನೆ ಈ ಹಿಂದೆಯೇ ನ್ಯಾಯಾಲಯದ ಪರಿಶೀಲನೆಗೆ ಒಳಪಟ್ಟಿತ್ತು. ಇದೇ ಕಾನೂನು ತತ್ವ ಪ್ರಸ್ತುತ ಪ್ರಕರಣಕ್ಕೂ ಅನ್ವಯಿಸಬಹುದೇ ಎಂಬುದು ವಿಚಾರಣೆಯ ಪ್ರಮುಖ ಅಂಶವಾಗಿದೆ.

ಕೇಂದ್ರ ಸರ್ಕಾರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿದರು. ವಿಚಾರಣೆ ವೇಳೆ ಅವರ ಹೇಳಿಕೆಗೆ ಸಂಬಂಧಿಸಿದಂತೆ ಹಿರಿಯ ವಕೀಲ ಎಸ್. ಮುರಳೀಧರ್ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ನ್ಯಾಯಾಲಯದಲ್ಲಿ ವಾಗ್ವಾದವೂ ನಡೆಯಿತು. ನೋಟಿಸ್ ನೀಡದಂತೆ ಕೋರ್ಟ್ ಗೆ ಅವರು ಮನವಿ ಮಾಡಿದರು, ಅದಾಗ್ಯೂ ನ್ಯಾಯಲಯ ನೋಟಿಸ್ ಜಾರಿ ಮಾಡಿತು.

# ಡೇಟಾ ಬೇಡದ ಗ್ರಾಹಕರಿಗೆ ವಾಯ್ಸ್–ಎಸ್‌ಎಂಎಸ್ ರೀಚಾರ್ಜ್ ಆಯ್ಕೆ ಹೆಚ್ಚಳ

**ನವದೆಹಲಿ, ಸೆ.22:** ಮೊಬೈಲ್ ಡೇಟಾ ಬಳಕೆ ಅಗತ್ಯವಿಲ್ಲದ ಗ್ರಾಹಕರಿಗೆ ಅನುಕೂಲವಾಗುವಂತೆ ಟೆಲಿಕಾಂ ಕಂಪನಿಗಳು ಹೆಚ್ಚಿನ ವಾಯ್ಸ್ ಮತ್ತು ಎಸ್‌ಎಂಎಸ್ ಮಾತ್ರದ ರೀಚಾರ್ಜ್ ಯೋಜನೆಗಳನ್ನು ಒದಗಿಸುವಂತೆ ಭಾರತೀಯ ದೂರಸಂಪರ್ಕ ನಿಯಂತ್ರಣ ಪ್ರಾಧಿಕಾರ ಹೊಸ ನಿಯಮಗಳನ್ನು ಜಾರಿಗೆ ತಂದಿದೆ.

TRAI ಬಿಡುಗಡೆ ಮಾಡಿರುವ ಟೆಲಿಕಾಂ ಗ್ರಾಹಕ ಸಂರಕ್ಷಣಾ (13ನೇ ತಿದ್ದುಪಡಿ) ನಿಯಮಾವಳಿ 2026ರ ಪ್ರಕಾರ, ಟೆಲಿಕಾಂ ಸೇವಾದಾರರು ವಾಯ್ಸ್ ಮತ್ತು ಎಸ್‌ಎಂಎಸ್ ಸೇವೆಗಳಿಗೆ ಮಾತ್ರ ಅನ್ವಯಿಸುವ ವಿಶೇಷ ರೀಚಾರ್ಜ್ ಯೋಜನೆಗಳನ್ನು ನೀಡಬೇಕು. 30 ದಿನ ಅಥವಾ ಅದಕ್ಕಿಂತ ಕಡಿಮೆ ಅವಧಿಯ ಯೋಜನೆಗಳನ್ನು ಗ್ರಾಹಕರಿಗೆ ಲಭ್ಯವಾಗುವಂತೆ ಮಾಡುವುದು ಕಡ್ಡಾಯವಾಗಿದೆ.

ಅಲ್ಲದೆ, ಪ್ರತಿ ತಿಂಗಳು ಒಂದೇ ದಿನಾಂಕದಂದು ನವೀಕರಿಸಿಕೊಳ್ಳಬಹುದಾದ ಮಾಸಿಕ ರೀಚಾರ್ಜ್ ಆಯ್ಕೆಯನ್ನೂ ನೀಡಬೇಕು. ನವೀಕರಣದ ದಿನಾಂಕವು ನಿರ್ದಿಷ್ಟ ತಿಂಗಳಲ್ಲಿ ಲಭ್ಯವಿಲ್ಲದಿದ್ದರೆ, ಆ ತಿಂಗಳ ಕೊನೆಯ ದಿನವನ್ನು ನವೀಕರಣ ದಿನಾಂಕವಾಗಿ ಪರಿಗಣಿಸಬೇಕು.

30 ದಿನಕ್ಕಿಂತ ಹೆಚ್ಚಿನ ಅವಧಿಯ ಕನಿಷ್ಠ ಒಂದು ವಾಯ್ಸ್ ಎಸ್‌ಎಂಎಸ್ ಮಾತ್ರದ ಯೋಜನೆಯನ್ನೂ ಒದಗಿಸಬೇಕು. ಇಂತಹ ಯೋಜನೆಗಳಿಗೆ ದರ ಕಡಿತ ಮಾಡುವಂತೆ TRAI ಸೂಚಿಸಿದೆ. ಇದರಿಂದ ಡೇಟಾ ಸೇವೆ ಅಗತ್ಯವಿಲ್ಲದ ಗ್ರಾಹಕರು ತಮ್ಮ ಅಗತ್ಯ ಮತ್ತು ಬಜೆಟ್ಗೆ ಅನುಗುಣವಾಗಿ ಕಡಿಮೆ ವೆಚ್ಚದ ರೀಚಾರ್ಜ್ ಆಯ್ಕೆ ಮಾಡಿಕೊಳ್ಳಲು ಅವಕಾಶ ಸಿಗಲಿದೆ. ಈ ನಿಯಮಾವಳಿ ರೂಪಿಸುವ ಮುನ್ನ TRAI ಕರಡು ತಿದ್ದುಪಡಿ ಕುರಿತು ಸಾರ್ವಜನಿಕರಿಂದ ಹಾಗೂ ವಿವಿಧ ಪಾಲುದಾರರಿಂದ ಅಭಿಪ್ರಾಯ ಸಂಗ್ರಹಿಸಿತ್ತು. ಒಟ್ಟು 1,132 ಪ್ರತಿಕ್ರಿಯೆಗಳು ಬಂದಿದ್ದು, ಜೂನ್ 15ರಂದು ಮುಕ್ತ ಚರ್ಚೆಯನ್ನೂ ನಡೆಸಲಾಗಿತ್ತು. ಬಂದ ಅಭಿಪ್ರಾಯಗಳು ಹಾಗೂ ತನ್ನದೇ ವಿಶ್ಲೇಷಣೆಯ ಆಧಾರದ ಮೇಲೆ TRAI ಅಂತಿಮ ನಿಯಮಾವಳಿಯನ್ನು ಪ್ರಕಟಿಸಿದೆ.

# ಎಲ್‌ಪಿಜಿ ಕೊರತೆ ಇಲ್ಲ: ಕೇಂದ್ರ ಸಚಿವ ಹರದೀಪ್ ಸಿಂಗ್ ಪುರಿ ಸ್ಪಷ್ಟನೆ





**ನವದೆಹಲಿ, ಸೆ.22:** ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಉದ್ವಿಗ್ನತೆಯಿಂದಾಗಿ ಭಾರತದಲ್ಲಿ ಅಡುಗೆ ಸಿಲಿಂಡರ್‌ಗಳ ತೀವ್ರ ಕೊರತೆ ಉಂಟಾಗಲಿದೆ ಎಂಬ ವದಂತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈ ಕುರಿತು ಸ್ಪಷ್ಟನೆ ನೀಡಿರುವ ಕೇಂದ್ರ ಪೆಟ್ರೋಲಿಯಂ ಸಚಿವ ಹರದೀಪ್ ಸಿಂಗ್ ಪುರಿ ದೇಶದಲ್ಲಿ ಯಾವುದೇ ರೀತಿಯ ಅಡುಗೆ ಅನಿಲದ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.


ರಾಷ್ಟ್ರೀಯ ಮಾಧ್ಯಮವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಪರಿಸ್ಥಿತಿಯನ್ನು ಎದುರಿಸಲು ಸರ್ಕಾರವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. ಹಾರ್ಮುಜ್ ಜಲಸಂಧಿಯ ಬಿಕ್ಕಟ್ಟು ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೆಲವು ಪರಿಣಾಮಗಳನ್ನು ಬೀರುವುದು ಸಹಜವಾದರೂ, ಸರ್ಕಾರವು ಯಾವುದೇ ಸವಾಲನ್ನು ಎದುರಿಸಲು ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು ಮುಂಚಿತವಾಗಿ ಪರಿಸ್ಥಿತಿಯನ್ನು ಅರಿತು ದೇಶೀಯ ಅನಿಲ ಉತ್ಪಾದನೆಯನ್ನು ಹೆಚ್ಚಿಸಲು ಆದೇಶಿಸಿದ್ದರು. ಹಿಂದೆ ದೇಶದಲ್ಲಿ ದಿನಕ್ಕೆ ಕೇವಲ 34,000 ಟನ್ ಎಲ್‌ಪಿಜಿ ಉತ್ಪಾದನೆಯಾಗುತ್ತಿತ್ತು, ಆದರೆ, ಪ್ರಧಾನಿಯವರ ವಿಶೇಷ ಕ್ರಮದಿಂದಾಗಿ ಈಗ ಉತ್ಪಾದನೆಯು 55,000 ರಿಂದ 56,000 ಟನ್‌ಗಳಿಗೆ ಏರಿಕೆಯಾಗಿದೆ ಎಂದು ಅವರು ವಿವರಿಸಿದ್ದಾರೆ.

ದೇಶದ ಎಲ್ಲಾ 1.07 ಲಕ್ಷ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನಕ್ಕೆ ಯಾವುದೇ ಕೊರತೆಯಿಲ್ಲದೆ ನಿರಂತರ ಸರಬರಾಜು ಮುಂದುವರಿದಿದೆ ಎಂದು ಸಚಿವರು ಖಚಿತಪಡಿಸಿದ್ದಾರೆ. ಸಾರ್ವಜನಿಕರು ಸಿಲಿಂಡರ್‌ಗಳಿಗಾಗಿ ಆತಂಕಗೊಂಡು ಸರತಿ ಸಾಲಿನಲ್ಲಿ ನಿಲ್ಲುವ ಅಗತ್ಯವಿಲ್ಲ. ಮೊಬೈಲ್ ಆ್ಯಪ್ ಮೂಲಕ ಮನೆಯಲ್ಲೇ ಕುಳಿತು ಡಿಜಿಟಲ್ ಬುಕಿಂಗ್ ಮಾಡಿದರೆ 24 ಗಂಟೆಗಳ ಒಳಗೆ ಮನೆ ಬಾಗಿಲಿಗೆ ಸಿಲಿಂಡರ್ ತಲುಪಲಿದೆ ಎಂದು ಅವರು ಭರವಸೆ ನೀಡಿದ್ದಾರೆ.

ಕೆಲವರು ಉದ್ದೇಶಪೂರ್ವಕವಾಗಿ ಅನಿಲ ಕೊರತೆಯ ಸುಳ್ಳು ಪ್ರಚಾರವನ್ನು ಹರಡುತ್ತಿರುವುದರಿಂದ ಜನರು ಅಗತ್ಯಕ್ಕಿಂತ ಹೆಚ್ಚು ಸಿಲಿಂಡರ್‌ಗಳನ್ನು ದಾಸ್ತಾನು ಮಾಡಲು ಮುಂದಾಗಿದ್ದಾರೆ. ಗುರುಗ್ರಾಮದಲ್ಲಿರುವ ತಮ್ಮ ಕುಟುಂಬದ ಸ್ನೇಹಿತರ ಉದಾಹರಣೆಯನ್ನು ನೀಡಿದ ಅವರು, ತಮ್ಮ ಮನೆಯಲ್ಲಿ ಪೈಪ್‌ಲೈನ್ ಗ್ಯಾಸ್ ಸಂಪರ್ಕವಿದ್ದರೂ ವದಂತಿಗಳನ್ನು ನಂಬಿ ಹೆಚ್ಚುವರಿ ಸಿಲಿಂಡರ್‌ಗಳನ್ನು ಖರೀದಿಸಿದ್ದಾರೆ ಎಂದು ತಿಳಿಸಿದ್ದಾರೆ. ದೇಶದಲ್ಲಿ ಸಾಮಾನ್ಯವಾಗಿ ದಿನಕ್ಕೆ 52 ಲಕ್ಷ ಸಿಲಿಂಡರ್‌ಗಳ ಬಳಕೆ ಇತ್ತು, ಆದರೆ ಈ ಸುಳ್ಳು ವದಂತಿಗಳಿಂದಾಗಿ ಆ ಸಂಖ್ಯೆಯು ಹಠಾತ್ತನೆ ದಿನಕ್ಕೆ 90 ಲಕ್ಷಕ್ಕೆ ಏರಿಕೆಯಾಗಿದೆ ಎಂದರು.

ಸರಾಸರಿ ಕುಟುಂಬಗಳು ತಮ್ಮ ವಾರ್ಷಿಕ ಬಳಕೆಗೆ ಮೀರಿ ಸಿಲಿಂಡರ್ ಖರೀದಿಸಿದರೆ ಅದು ವಿತರಣಾ ವ್ಯವಸ್ಥೆಯ ಮೇಲೆ ತೀವ್ರ ಒತ್ತಡವನ್ನು ಉಂಟುಮಾಡುತ್ತದೆ ಎಂದು ಸಚಿವರು ಎಚ್ಚರಿಸಿದ್ದಾರೆ. ಕಪ್ಪು ಮಾರುಕಟ್ಟೆ ಮತ್ತು ದಾಸ್ತಾನುಗಾರಿಕೆಯನ್ನು ತಡೆಯಲು ಸರ್ಕಾರವು ಅನಿಲ ಹಂಚಿಕೆಯಲ್ಲಿ ಕೆಲವು ತಾತ್ಕಾಲಿಕ ನಿಯಮಗಳನ್ನು ಜಾರಿಗೆ ತಂದಿದ್ದು, ಇಡೀ ಪೂರೈಕೆ ವ್ಯವಸ್ಥೆಯನ್ನು ಹೆಚ್ಚು ಸುಗಮಗೊಳಿಸಲಾಗಿದೆ ಎಂದು ಹರದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

# ದಿಗ್ಬಂಧನ ತೆರವಾದರೆ ಹಾರ್ಮುಜ್ ತೆರೆಯಲು ಸಿದ್ಧ– ಇರಾನ್ ಸ್ಪಷ್ಟನೆ




**ನವದೆಹಲಿ, ಸೆ.22:** ಅಮೆರಿಕವು ಮಿಲಿಟರಿ ಒತ್ತಡವನ್ನು ತಗ್ಗಿಸಿ, ಇರಾನ್‌ನ ಬಂದರುಗಳ ಮೇಲಿನ ದಿಗ್ಬಂಧನವನ್ನು ತೆರವುಗೊಳಿಸಿದರೆ, ಇರಾನ್ ಏಳು ದಿನಗಳ ಒಳಗಾಗಿ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಬಲ್ಲದು ಎಂದು ಇರಾನ್‌ನ ಹಿರಿಯ ಅಧಿಕಾರಿಯೊಬ್ಬರು ಮಂಗಳವಾರ ಸುದ್ದಿಸಂಸ್ಥೆಯೊಂದಕ್ಕೆ ತಿಳಿಸಿದ್ದಾರೆ.

"ಈ ಸಮಸ್ಯೆಯನ್ನು ರಾಜತಾಂತ್ರಿಕವಾಗಿ ಬಗೆಹರಿಸಿಕೊಳ್ಳುವ ಇಚ್ಛೆಯನ್ನು ಅಮೆರಿಕ ಘೋಷಿಸಬೇಕು, ಅದನ್ನು ಅಧಿಕೃತಗೊಳಿಸಬೇಕು ಮತ್ತು ಪ್ರಕ್ರಿಯೆಯು ಹೇಗೆ ಮುಂದುವರಿಯುತ್ತದೆ ಎಂಬುದರ ಕುರಿತು ಕಾಲಮಿತಿಯೊಂದನ್ನು ಒಪ್ಪಿಕೊಳ್ಳಬೇಕು" ಎಂದು ಆ ಅಧಿಕಾರಿ ಹೇಳಿದರು.

ವಿಶ್ವಸಂಸ್ಥೆಯ ಮಹಾಸಭೆಯಲ್ಲಿ ಭಾಗವಹಿಸಲು ಬಂದಿರುವ ಇರಾನ್‌ನ ನಿಯೋಗವು ನ್ಯೂಯಾರ್ಕ್‌ನಲ್ಲಿದೆ ಮತ್ತು ಅಮೆರಿಕದೊಂದಿಗೆ ರಾಜತಾಂತ್ರಿಕ ಸಂಬಂಧವನ್ನು ಪುನರುಜ್ಜೀವನಗೊಳಿಸಲು ಅದಕ್ಕೆ ಪೂರ್ಣ ಅಧಿಕಾರವಿದೆ ಎಂದು ಅವರು ತಿಳಿಸಿದರು. ಮಂಗಳವಾರ ಬೆಳಿಗ್ಗೆ ಟೆಹರಾನ್‌ನಿಂದ ನ್ಯೂಯಾರ್ಕ್‌ಗೆ ಪ್ರಯಾಣ ಬೆಳೆಸಿರುವ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಅವರು, ನ್ಯೂಯಾರ್ಕ್‌ನ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗುವುದಿಲ್ಲ ಎಂದು ಆ ಅಧಿಕಾರಿ ಸ್ಪಷ್ಟಪಡಿಸಿದ್ದಾರೆ.

ವಾಷಿಂಗ್ಟನ್ ಜತೆಗಿನ ಸಂಘರ್ಷವನ್ನು ಕೊನೆಗೊಳಿಸುವ ಒಪ್ಪಂದದ ವಿವರಗಳನ್ನು ನ್ಯೂಯಾರ್ಕ್‌ನಲ್ಲಿ ಮಧ್ಯವರ್ತಿಗಳ ಮೂಲಕ ಚರ್ಚಿಸಬಹುದು ಎಂದು ಹೇಳಿದ ಅವರು, ಸೆಪ್ಟೆಂಬರ್ 16 ರಂದೇ ಮಧ್ಯವರ್ತಿಗಳ ಮೂಲಕ ಇರಾನ್‌ನ ಪ್ರಸ್ತಾವನೆಯನ್ನು ಅಮೆರಿಕಕ್ಕೆ ತಲುಪಿಸಲಾಗಿದೆ ಎಂದು ವಿವರಿಸಿದರು.

# ಪ್ರಾಧ್ಯಾಪಕರ ಅಮಾನತು ಆದೇಶ ಮುಂದುವರಿಸಿದ ಸುಪ್ರೀಂ ಕೋರ್ಟ್

## ವೈದ್ಯಕೀಯ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳ ವಿರುದ್ಧದ ಇಲಾಖಾ ವಿಚಾರಣೆಗೆ ತಡೆ

**ನವದೆಹಲಿ, ಸೆ.22:** ಶಿವಮೊಗ್ಗ ವೈದ್ಯಕೀಯ ಶಿಕ್ಷಣ ಸಂಸ್ಥೆಯ ಪ್ರಾಧ್ಯಾಪಕರಾದ ಡಾ. ಅಶ್ವಿನ್ ಹೆಬ್ಬಾರ್ ಪ್ರಕರಣಕ್ಕೆ ಸಂಬಂಧಿಸಿದಂತೆ ವೈದ್ಯಕೀಯ ಶಿಕ್ಷಣ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹ್ಸಿನ್ ವಿರುದ್ಧದ ಇಲಾಖಾವಾರು ವಿಚಾರಣೆಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ. ಇಲಾಖಾವಾರು ವಿಚಾರಣೆಗೆ ಆಗಸ್ಟ್ 4 ರಂದು ಆದೇಶ ನೀಡಿದ್ದ ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ದೀಪಾಂಕರ್ ದತ್ತಾ ನೇತೃತ್ವದ ನ್ಯಾಯಪೀಠ, ಈ ತಡೆಯಾಜ್ಞೆ ನೀಡಿದೆ. ಸಿಮ್ಸ್‌ನ ಪ್ರಾಧ್ಯಾಪಕ ಡಾ. ಅಶ್ವಿನ್ ಹೆಬ್ಬಾರ್ ವಿರುದ್ಧ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಅವರನ್ನು ಅಮಾನತು ಮಾಡಿ ನಂತರ ಹಿಂಪಡೆದು ಹಾವೇರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ ವರ್ಗಾವಣೆ ಮಾಡಲಾಗಿತ್ತು. ಡಾ. ಹೆಬ್ಬಾರ್ ಈ ಸಂಬಂಧ ಹೈಕೋರ್ಟ್‌ನಲ್ಲಿ ದೂರು ಸಲ್ಲಿಸಿದರು. ಇದರ ವಿಚಾರಣೆ ನಡೆಸಿದ್ದ ಹೈಕೋರ್ಟ್ ನ್ಯಾಯಪೀಠ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ಸಿಮ್ಸ್ ನಿರ್ದೇಶಕ ಡಾ. ವಿರೂಪಾಕ್ಷಪ್ಪ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆದೇಶಿಸಿತ್ತು. ಇಲಾಖಾವಾರು ತನಿಖೆಗೆ ಆದೇಶ ನೀಡಿದ್ದ ಹೈಕೋರ್ಟ್ ತೀರ್ಪು ಪ್ರಶ್ನಿಸಿ ರಾಜ್ಯ ಸರ್ಕಾರ ಮತ್ತು ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಇದರ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ನ್ಯಾಯಪೀಠವು ಹೈಕೋರ್ಟ್ ಆದೇಶಕ್ಕೆ ತಡೆಯಾಜ್ಞೆ ನೀಡಿದೆ ಮತ್ತು ಡಾ. ಅಶ್ವಿನ್ ಹೆಬ್ಬಾರ್ ಅಮಾನತು ಆದೇಶವನ್ನು ಮುಂದಿನ ವಿಚಾರಣೆವರೆಗೆ ಮುಂದುವರಿಸಿದೆ.

# ಅಕ್ರಮ ಕಟ್ಟಡಗಳ ಸಕ್ರಮಕ್ಕೆ ಪ್ರೀಮಿಯಂ FAR ಬಳಸುವಂತಿಲ್ಲ

## ಸುಪ್ರೀಂ ಕೋರ್ಟ್ ಮಧ್ಯಂತರ ಆದೇಶ



**ನವದೆಹಲಿ, ಸೆ.22:** ಕರ್ನಾಟಕದ ಪ್ರೀಮಿಯಂ ಫ್ಲೋರ್ ಏರಿಯಾ ರೇಷಿಯೋ ಯೋಜನೆಯಡಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳನ್ನು ಸಕ್ರಮಗೊಳಿಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ಮಧ್ಯಂತರ ಆದೇಶ ನೀಡಿದೆ. ಪ್ರೀಮಿಯಂ FAR ಯೋಜನೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಾಲ್ಯ ಬಾಗ್ಚಿ ಹಾಗೂ ವಿ. ಮೋಹನಾ ಅವರ ಪೀಠ, ಕರ್ನಾಟಕ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ಅರ್ಜಿಗೆ ನಾಲ್ಕು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಿರುವ ನ್ಯಾಯಪೀಠ, ಪ್ರಕರಣದ ಅಂತಿಮ ತೀರ್ಪು ಬರುವವರೆಗೆ ಪ್ರೀಮಿಯಂ FAR ಮೂಲಕ ಯಾವುದೇ ಅನಧಿಕೃತ ನಿರ್ಮಾಣವನ್ನು ಸಕ್ರಮಗೊಳಿಸಬಾರದು ಎಂದು ಸ್ಪಷ್ಟಪಡಿಸಿದೆ. ಅಲ್ಲದೆ, ಪ್ರೀಮಿಯಂ FAR ಮಂಜೂರಾತಿಯು ಈ ಅರ್ಜಿಯ ಅಂತಿಮ ಫಲಿತಾಂಶಕ್ಕೆ ಒಳಪಟ್ಟಿರುತ್ತದೆ ಎಂದು ತಿಳಿಸಿದೆ.

ಕರ್ನಾಟಕ ಟೌನ್ ಆಂಡ್ ಕಂಟ್ರಿ ಪ್ಲಾನಿಂಗ್ (KTCP) ಕಾಯ್ದೆಯ ಸೆಕ್ಷನ್ 18-B ಅಡಿಯಲ್ಲಿ ಪ್ರೀಮಿಯಂ FAR ಯೋಜನೆಯನ್ನು ಜಾರಿಗೆ ತರಲಾಗಿದೆ. ನಿಗದಿತ ಶುಲ್ಕ ಪಾವತಿಸುವ ಮೂಲಕ ಸಾಮಾನ್ಯವಾಗಿ ಅನುಮತಿಸಲಾದ ಈಂಖಿಗಿಂತ ಹೆಚ್ಚುವರಿ ನಿರ್ಮಾಣದ ಅವಕಾಶ ಪಡೆಯಲು ಈ ಯೋಜನೆ ಅವಕಾಶ ನೀಡುತ್ತದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಆದಿತ್ಯ ಸೋಂಧಿ, ಕಟ್ಟಡಗಳಿಗೆ ಪ್ರೀಮಿಯಂ FAR ನೀಡುವಲ್ಲಿ ರಸ್ತೆಯ ಅಗಲವೇ ಪ್ರಮುಖ ಮಾನದಂಡವಾಗುತ್ತಿದೆ ಎಂದು ವಾದಿಸಿದರು. ಇದರಿಂದ ಈಗಾಗಲೇ ಮೂಲಸೌಕರ್ಯದ ಒತ್ತಡ ಎದುರಿಸುತ್ತಿರುವ ಬೆಂಗಳೂರಿನ ಮೇಲೆ ಮತ್ತಷ್ಟು ಹೊರೆ ಬೀಳಬಹುದು ಎಂದು ಅವರು ಆತಂಕ ವ್ಯಕ್ತಪಡಿಸಿದರು. ಪ್ರೀಮಿಯಂ ಈಂಖ ಯೋಜನೆಯನ್ನು ಬಳಸಿಕೊಂಡು ಗ್ರೇಟರ್ ಬೆಂಗಳೂರು ಅಥಾರಿಟಿ ವ್ಯಾಪ್ತಿಯಲ್ಲಿ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸುವ ಸಾಧ್ಯತೆಯೂ ಇದೆ ಎಂದು ಅವರು ವಾದಿಸಿದರು.

ಇದಕ್ಕೆ ಪ್ರತಿಯಾಗಿ ರಾಜ್ಯ ಸರ್ಕಾರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಪ್ರೀಮಿಯಂ FAR ಯೋಜನೆಯು ಅಕ್ರಮ–ಸಕ್ರಮ ಯೋಜನೆಯಲ್ಲ ಎಂದು ಸ್ಪಷ್ಟಪಡಿಸಿದರು. ಅಕ್ರಮ–ಸಕ್ರಮ ವ್ಯಾಪ್ತಿಗೆ ಬರುವ ಯಾವುದೇ ಅನಧಿಕೃತ ನಿರ್ಮಾಣವನ್ನು ಈ ಯೋಜನೆಯಡಿ ಸಕ್ರಮಗೊಳಿಸಲಾಗುವುದಿಲ್ಲ ಎಂದು ಅವರು ನ್ಯಾಯಾಲಯಕ್ಕೆ ತಿಳಿಸಿದರು. ತಮ್ಮ ಹೇಳಿಕೆಯನ್ನು ದಾಖಲಿಸಿ ಕೊಳ್ಳುವಂತೆಯೂ ಮನವಿ ಮಾಡಿದರು.

ರಾಜ್ಯ ಸರ್ಕಾರದ ಪ್ರಕಾರ, ಹೆಚ್ಚುವರಿ FAR ಅನ್ನು ಮೂಲ FARನ ಗರಿಷ್ಠ ಶೇ.60ರಷ್ಟಕ್ಕೆ ಮಿತಿಗೊಳಿಸಲಾಗಿದೆ. ಕಡ್ಡಾಯ ಪಾರ್ಕಿಂಗ್ ಮತ್ತು ಕಟ್ಟಡದ ಸೆಟ್ಬ್ಯಾಕ್ ನಿಯಮಗಳನ್ನು ಪ್ರೀಮಿಯಂ FAR ಮೂಲಕ ವಿನಾಯಿತಿ ನೀಡಲಾಗುವುದಿಲ್ಲ. ನಗರ ಪ್ರದೇಶಗಳಲ್ಲಿ ಲಭ್ಯವಿರುವ ಭೂಮಿಯ ಮಿತಿಯನ್ನು ಗಮನಿಸಿದರೆ ಲಂಬವಾಗಿ ನಿರ್ಮಾಣ ಮಾಡುವ ಅವಕಾಶ ಅಗತ್ಯವಾಗಿದ್ದು, ಯೋಜನೆಯಿಂದ ಸಂಗ್ರಹವಾಗುವ ಹಣವನ್ನು ಮೂಲಸೌಕರ್ಯ ಅಭಿವೃದ್ಧಿಗಾಗಿ ಬಳಸಲಾಗುತ್ತದೆ ಎಂದು ಸರ್ಕಾರ ವಾದಿಸಿದೆ.

ಇದಕ್ಕೂ ಮೊದಲು ಜೂನ್‌ನಲ್ಲಿ ಕರ್ನಾಟಕ ಹೈಕೋರ್ಟ್ ಪ್ರೀಮಿಯಂ FAR ಯೋಜನೆಯ ಸಾಂವಿಧಾನಿಕ ಮಾನ್ಯತೆಯನ್ನು ಎತ್ತಿಹಿಡಿದಿತ್ತು. ಆ ತೀರ್ಪನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ. ಹೈಕೋರ್ಟ್ ತೀರ್ಪಿನಲ್ಲಿ ಪ್ರೀಮಿಯಂ FAR ಯೋಜನೆ ಮತ್ತು ಅಕ್ರಮ ಕಟ್ಟಡಗಳ ಸಕ್ರಮಕ್ಕೆ ಸಂಬಂಧಿಸಿದ ಅಕ್ರಮ–ಸಕ್ರಮ ಯೋಜನೆ ಎರಡೂ ವಿಭಿನ್ನವಾಗಿವೆ ಎಂದು ಹೇಳಲಾಗಿತ್ತು.

# ಜಾಗತಿಕ ನಿರ್ಧಾರ ಪ್ರಕ್ರಿಯೆ ಪಾರದರ್ಶಕವಾಗಿಸುವ ಅಗತ್ಯ: ವಿಶ್ವಸಂಸ್ಥೆಯಲ್ಲಿ ಜೈಶಂಕರ್ ಪ್ರತಿಪಾದನೆ

**ವಿಶ್ವಸಂಸ್ಥೆ, ಸೆ.22:** ಜಾಗತಿಕ ವ್ಯವಸ್ಥೆ ಹಲವು ಸವಾಲುಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಬಹುಪಕ್ಷೀಯ ವ್ಯವಸ್ಥೆ ತನ್ನ ಪಾತ್ರವನ್ನು ಮತ್ತಷ್ಟು ಬಲಪಡಿಸಬೇಕು ಹಾಗೂ ಜಾಗತಿಕ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಸುಧಾರಣೆ ತರಬೇಕು ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಕರೆ ನೀಡಿದ್ದಾರೆ.




ವಿಶ್ವಸಂಸ್ಥೆಯಲ್ಲಿ ಸೋಮವಾರ ನಡೆದ ಪಾರ್ಟ್ನರ್ಸ್ ಫಾರ್ ಮಲ್ಟಿಲ್ಯಾಟರಲಿಸಂ, ಇಂಟರ್‌ನ್ಯಾಷನಲ್ ಲಾ, ಪೀಸ್ ಆಂಡ್ ಪ್ರಾಸ್ಪೆರಿಟಿ ಶೃಂಗಸಭೆಯ ಉದ್ಘಾಟನಾ ಸಭೆಗೆ ಜೈಶಂಕರ್ ಸಹ–ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಾಗತಿಕ ನಿರ್ಧಾರ ಪ್ರಕ್ರಿಯೆಯನ್ನು ಹೆಚ್ಚು ಪಾಲ್ಗೊಳ್ಳುವಂತೆಯೂ ಪಾರದರ್ಶಕವಾಗಿಯೂ ರೂಪಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಆಸ್ಟ್ರೇಲಿಯಾ, ಬಾರ್ಬಡೋಸ್, ಬ್ರೆಜಿಲ್, ಕೆನಡಾ, ಕೆನ್ಯಾ ಮತ್ತು ಯುರೋಪಿಯನ್ ಒಕ್ಕೂಟದೊಂದಿಗೆ ಭಾರತ ಈ ಶೃಂಗಸಭೆಯ ಸಹ–ಪ್ರಾಯೋಜಕ ರಾಷ್ಟ್ರವಾಗಿತ್ತು. ವಿಶ್ವಸಂಸ್ಥೆಯ 81ನೇ ಮಹಾಸಭೆಯ ಅಧಿವೇಶನದ ಹಿನ್ನೆಲೆಯಲ್ಲಿ ಈ ಸಭೆ ನಡೆಯಿತು.

ಜಾಗತಿಕ ವ್ಯವಸ್ಥೆ ಒತ್ತಡದಲ್ಲಿರುವ ಸಂದರ್ಭದಲ್ಲಿ ನಾವು ಇಲ್ಲಿ ಸೇರಿದ್ದೇವೆ ಎಂದು ಜೈಶಂಕರ್ ಹೇಳಿದರು. ಭೌಗೋಳಿಕ ರಾಜಕೀಯ ಉದ್ವಿಗ್ನತೆ, ಸ್ಪರ್ಧೆ ಮತ್ತು ಸಂಘರ್ಷಗಳ ನಡುವೆ ಬಹುಪಕ್ಷೀಯ ವ್ಯವಸ್ಥೆ ತನ್ನ ಪ್ರಸ್ತುತತೆಯನ್ನು ಬಲವಾಗಿ ಪ್ರತಿಪಾದಿಸಬೇಕಿದೆ ಎಂದು ಅವರು ತಿಳಿಸಿದರು.

ಕಳೆದ ಹಲವು ದಶಕಗಳಲ್ಲಿ ಜಾಗತಿಕ ಶಕ್ತಿಸಮತೋಲನದಲ್ಲಿ ನಿರಂತರ ಬದಲಾವಣೆ ಕಂಡುಬಂದಿದೆ. ಆದರೆ ಭೌಗೋಳಿಕ ರಾಜಕೀಯ ಉದ್ವಿಗ್ನತೆ ಮತ್ತು ಸಂಘರ್ಷಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಬದಲಾವಣೆ ಇದೀಗ ಮತ್ತೊಂದು ತಿರುವು ಪಡೆದುಕೊಂಡಿದೆ ಎಂದು ಜೈಶಂಕರ್ ಹೇಳಿದರು.

ಇದನ್ನು ನಿಯಂತ್ರಿಸದೆ ಬಿಟ್ಟರೆ, ಅಂತಾರಾಷ್ಟ್ರೀಯ ಸಹಕಾರದ ಮೂಲ ಆಶಯವೇ ಪ್ರಶ್ನಾರ್ಹವಾಗಬಹುದು. ಹೀಗಾಗಿ ಸುಧಾರಿತ ಬಹುಪಕ್ಷೀಯ ವ್ಯವಸ್ಥೆ ಅತ್ಯಗತ್ಯ ಎಂದು ಹೇಳಿದರು.

ಜಾಗತಿಕ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಹೆಚ್ಚು ಪಾಲ್ಗೊಳ್ಳುವ ಅವಕಾಶ ಮತ್ತು ಹೆಚ್ಚಿನ ಪಾರದರ್ಶಕತೆ ಬಹಳ ಹಿಂದೆಯೇ ಅಗತ್ಯವಾಗಿತ್ತು ಎಂದು ಜೈಶಂಕರ್ ಪ್ರತಿಪಾದಿಸಿದರು. ಸಂಘರ್ಷಗಳು ಮತ್ತು ಜಾಗತಿಕ ಅಡೆತಡೆಗಳಿಂದ ಉಂಟಾಗುತ್ತಿರುವ ಪರಿಣಾಮಗಳ ಬಗ್ಗೆಯೂ ಅವರು ಗಮನ ಸೆಳೆದರು. ಇಂಧನ, ಆಹಾರ, ರಸಗೊಬ್ಬರ ಮತ್ತು ಹಣಕಾಸು ಕ್ಷೇತ್ರಗಳಲ್ಲಿನ 4ಎಫ್ ಬಿಕ್ಕಟ್ಟನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದರು. ಹೊಸ ತಂತ್ರಜ್ಞಾನಗಳಿಂದ ಎದುರಾಗಬಹುದಾದ ಅಪಾಯಗಳನ್ನು ನಿರ್ವಹಿಸಲು ಸೂಕ್ತ ಚೌಕಟ್ಟು ಮತ್ತು ಸುರಕ್ಷತಾ ಕ್ರಮಗಳನ್ನು ರೂಪಿಸಬೇಕು. ಪೂರೈಕೆ ಸರಪಳಿಗಳಲ್ಲಿ ಸಂಭವಿಸಬಹುದಾದ ಪ್ರಮುಖ ಅಡಚಣೆಗಳನ್ನು ಎದುರಿಸಲು ಅವುಗಳನ್ನು ವಿವಿಧ ಮೂಲಗಳಿಗೆ ವಿಸ್ತರಿಸುವ ಅಗತ್ಯವಿದೆ ಎಂದು ಅವರು ಹೇಳಿದರು.

ಅಂತಾರಾಷ್ಟ್ರೀಯ ಕಾನೂನು, ನಿಯಮಗಳು ಮತ್ತು ಮಾನದಂಡಗಳನ್ನು ಎಲ್ಲರೂ ನಿರಂತರವಾಗಿ ಪಾಲಿಸಿದಾಗ ಮಾತ್ರ ಬಹುಪಕ್ಷೀಯ ವ್ಯವಸ್ಥೆ ಮತ್ತಷ್ಟು ಬಲಿಷ್ಠವಾಗಲಿದೆ. ಶಾಂತಿ ಮತ್ತು ಅಂತಾರಾಷ್ಟ್ರೀಯ ಭದ್ರತೆ, ಹವಾಮಾನ ಕ್ರಮಗಳು, ಹೊಸ ತಂತ್ರಜ್ಞಾನಗಳು, ಅಭಿವೃದ್ಧಿ ಹಣಕಾಸು, ಭಯೋತ್ಪಾದನೆ ನಿಗ್ರಹ, ಪೂರೈಕೆ ಸರಪಳಿ, ವಿಪತ್ತು ನಿರ್ವಹಣೆ ಮತ್ತು ಸಾಂಕ್ರಾಮಿಕ ರೋಗಗಳ ಸಿದ್ಧತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಹೆಚ್ಚಿನ ಅಂತಾರಾಷ್ಟ್ರೀಯ ಸಹಕಾರ ಅಗತ್ಯವಿದೆ ಎಂದು ಜೈಶಂಕರ್ ಹೇಳಿದರು. 15 ಸದಸ್ಯರ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಪ್ರಮುಖ ಜಾಗತಿಕ ಸಂಘರ್ಷಗಳ ವಿಚಾರದಲ್ಲಿ ಭಿನ್ನಾಭಿಪ್ರಾಯಗಳು ಮುಂದುವರಿದಿರುವ ಸಂದರ್ಭದಲ್ಲೇ ಈ ಮೊದಲ P4M ಶೃಂಗಸಭೆ ನಡೆದಿದೆ. ವಿಶೇಷವಾಗಿ ವೀಟೊ ಅಧಿಕಾರ ಹೊಂದಿರುವ ಐದು ಶಾಶ್ವತ ಸದಸ್ಯ ರಾಷ್ಟ್ರಗಳಾದ ಚೀನಾ, ಫ್ರಾನ್ಸ್, ರಷ್ಯಾ, ಬ್ರಿಟನ್ ಮತ್ತು ಅಮೆರಿಕ ನಡುವೆ ಹಲವು ಪ್ರಮುಖ ಜಾಗತಿಕ ಸಂಘರ್ಷಗಳ ಕುರಿತು ಭಿನ್ನ ನಿಲುವುಗಳು ಮುಂದುವರಿದಿವೆ.

# 2 ತಿಂಗಳಲ್ಲಿ ವಾಯುಪಡೆಗೆ ಸ್ವದೇಶಿ ನಿರ್ಮಿತ ತೇಜಸ್ ಎಂಕೆ–1ಎ

**ನವದೆಹಲಿ, ಸೆ.22:** ಭಾರತೀಯ ವಾಯುಪಡೆಯ ಉಪ ಮುಖ್ಯಸ್ಥ ಏರ್ ಮಾರ್ಷಲ್ ಅಶುತೋಷ್ ದೀಕ್ಷಿತ್ ಅವರು ಸ್ವದೇಶಿ ನಿರ್ಮಿತ ಯುದ್ಧ ವಿಮಾನ ಎಲ್‌ಸಿಎ ತೇಜಸ್ ಎಂಕೆ–1ಎ ಪ್ರಸ್ತುತ ಸ್ಥಿತಿಯ ಕುರಿತು ಪ್ರಮುಖ ಮಾಹಿತಿಯನ್ನು ಒದಗಿಸಿದ್ದಾರೆ. ಆರಂಭಿಕ ವಿಳಂಬಕ್ಕೆ ಪ್ರಾಥಮಿಕ ಕಾರಣ ಅಮೆರಿಕದಿಂದ ಆಮದು ವ'ಎಾಡಿಕ'ಊಂಡ' ಎಂಜಿನ್‌ಗಳು ಎಂದು ಹಿಂದೂಸ್ತಾನ್ ಏರೋನಾಟಿಕ್ಸ್ ದೃಢಪಡಿಸಿದೆ ಎಂದು ಹೇಳಿದರು.



ಎಂಜಿನ್‌ಗಳ ಕೊರತೆಯಿಂದಾಗಿ ಕಾರ್ಯಕ್ರಮ ವಿಳಂಬವಾಯಿತು. ಈಗ, ಎಂಜಿನ್‌ಗಳನ್ನು ಸ್ವೀಕರಿಸಲಾಗಿದ್ದು ಜೆಟ್‌ಗಳಲ್ಲಿ ಅಳವಡಿಸಲಾಗಿದೆ. ಜೆಟ್‌ಗಳನ್ನು ವಾಯುಪಡೆಗೆ ಸೇರಿಸುವ ಮೊದಲು ಸರಿಯಾದ ಮತ್ತು ಸಂಪೂರ್ಣ ಪರೀಕ್ಷೆ ನಡೆಯುತ್ತಿದೆ. ನನ್ನ ಪ್ರಕಾರ ಎರಡು ಅಥವಾ ಮೂರು ಅಂಶಗಳು ಪೂರ್ಣಗೊಳ್ಳಬೇಕಾಗಿದೆ ಎಂದು ಏರ್ ಮಾರ್ಷಲ್ ದೀಕ್ಷಿತ್ ಹೇಳಿದರು.

ಈ ಸಮಸ್ಯೆಗಳನ್ನು ಒಂದು ಅಥವಾ ಎರಡು ತಿಂಗಳೊಳಗೆ ಪರಿಹರಿಸಲಾಗುತ್ತದೆ. ಇದು ಜೆಟ್‌ನ ಸೇರ್ಪಡೆಗೆ ದಾರಿ ಮಾಡಿಕೊಡುತ್ತದೆ. ಐಅಂ ತೇಜಸ್ ಮಾರ್ಕ್ 1ಂ ನ ಸೇರ್ಪಡೆಗಾಗಿ ಭಾರತವು ಕುತೂಹಲದಿಂದ ಕಾಯುತ್ತಿದೆ. ಈ ಹೇಳಿಕೆಯು ವಾಯುಪಡೆಯ ಸನ್ನದ್ಧತೆ ಮತ್ತು ಸ್ಥಳೀಯ ಕಾರ್ಯಕ್ರಮದ ಪ್ರಗತಿಯನ್ನು ಒತ್ತಿಹೇಳುತ್ತದೆ.

ತೇಜಸ್ ಮಾರ್ಕ್ 1ಎ ಭಾರತೀಯ ವಾಯುಪಡೆಗೆ ಪ್ರಮುಖ ಅಸ್ತ್ರವಾಗಲಿದೆ. ಇದು ತೇಜಸ್ ಕುಟುಂಬದ ಮುಂದುವರಿದ ಆವೃತ್ತಿಯಾಗಿದ್ದು, ಹಲವಾರು ಸುಧಾರಣೆಗಳನ್ನು ಒಳಗೊಂಡಿದೆ. ಮೊದಲ ಹಂತದಲ್ಲಿ, ಎಂಜಿನ್ ವಿತರಣೆಗಳು ವಿಳಂಬವಾದವು. ಇದು ತಯಾರಿಕೆ ಮತ್ತು ಪರೀಕ್ಷೆಯ ವ್ೕಲ್ ಪರಿಣಾವು ಬೀರಿತು. ಈ ಸಮಸ್ಯೆಯನ್ನು ಈಗ ಪರಿಹರಿಸಲಾಗಿದೆ.

ಎಂಜಿನ್ ಸ್ಥಾಪನೆಯ ನಂತರ, ಜೆಟ್‌ಗಳು ಪರೀಕ್ಷೆಗೆ ಒಳಗಾಗುತ್ತಿವೆ. ಜೆಟ್ ಎಲ್ಲಾ ಕಾರ್ಯಾಚರಣೆಯ ಅವಶ್ಯಕತೆಗಳನ್ನು ಪೂರೈಸುತ್ತದೆ ಎಂದು ಖಚಿತಪಡಿಸಿಕೊಳ್ಳುವುದು ಈ ಪರೀಕ್ಷೆಗಳ ಉದ್ದೇಶವಾಗಿದೆ. ಸುರಕ್ಷತೆ ಮತ್ತು ವಿಶ್ವಾಸಾರ್ಹತೆಗೆ ಆದ್ಯತೆ ನೀಡಲಾಗುತ್ತಿದೆ. ವಾಯುಪಡೆಯ ಉಪ ಮುಖ್ಯಸ್ಥರ ಹೇಳಿಕೆಯು ತಾಂತ್ರಿಕ ಸವಾಲುಗಳು ಈಗ ಅಂತಿಮ ಹಂತದಲ್ಲಿವೆ ಎಂದು ಸೂಚಿಸುತ್ತದೆ. ಉಳಿದ ಸಮಸ್ಯೆಗಳನ್ನು ಶೀಘ್ರದಲ್ಲೇ ಪರಿಹರಿಸಲಾಗುವುದು.

# ಲಿಖಿತ ಕಾರಣವಿಲ್ಲದ ಬಂಧನ ಅಕ್ರಮ: ಸುಪ್ರೀಂ


**ನವದೆಹಲಿ, ಸೆ. 22:** ಭಯೋತ್ಪಾದನೆ ತಡೆ ಕಾಯ್ದೆ ಸೇರಿದಂತೆ ಯಾವುದೇ ಕಾಯ್ದೆಯಡಿ ಆರೋಪಿಯನ್ನು ಬಂಧಿಸಿದರೂ, ಆತನಿಗೆ ಬಂಧನದ ಕಾರಣಗಳನ್ನು ಲಿಖಿತವಾಗಿ ನೀಡುವುದು ಕಡ್ಡಾಯ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಈ ನಿಯಮವನ್ನು ಉಲ್ಲಂಘಿಸುವ ಪೊಲೀಸ್ ಅಧಿಕಾರಿಗಳ ವಿರುದ್ಧ ಕಡ್ಡಾಯವಾಗಿ ಇಲಾಖಾ ತನಿಖೆ ನಡೆಸಿ, ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಸರ್ವೋಚ್ಚ ನ್ಯಾಯಾಲಯವು ಬಿಗಿ ನಿರ್ದೇಶನ ನೀಡಿದೆ. ಪಂಜಾಬ್ ಸರ್ಕಾರದ ವಿರುದ್ಧದ ಜಸ್ಕರನ್ ಜೀತ್ ಸಿಂಗ್ ದೇವಲ್ (ಕ್ರಿಮಿನಲ್ ಮೇಲ್ಮನವಿ 4234/2026) ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಉಜ್ಜಲ್ ಭುಯಾನ್ ಮತ್ತು ಅತುಲ್ ಎಸ್. ಚಾಂದುರ್ಕರ್ ಅವರಿದ್ದ ದ್ವಿಸದಸ್ಯ ಪೀಠವು ಈ ಐತಿಹಾಸಿಕ ತೀರ್ಪು ಪ್ರಕಟಿಸಿದೆ. ಮೂಲತಃ ಈ ಪ್ರಕರಣವು ಬಿಎನ್‌ಎಸ್ ಮತ್ತು ಪೋಕ್ಸೊ ಕಾಯ್ದೆಗಳ ಅಡಿಯಲ್ಲಿ ದಾಖಲಾಗಿತ್ತು. ಆದರೂ, ನ್ಯಾಯಾಲಯವು ನೀಡಿದ ಈ ತೀರ್ಪಿನ ನಿಯಮಗಳು ಯುಎಪಿಎ ಸೇರಿದಂತೆ ದೇಶದ ಎಲ್ಲ ಸಾಮಾನ್ಯ ಹಾಗೂ ವಿಶೇಷ ಕಾನೂನುಗಳಿಗೂ ಕಡ್ಡಾಯವಾಗಿ ಅನ್ವಯಿಸುತ್ತದೆ ಎಂದು ಪೀಠ ಸ್ಪಷ್ಟಪಡಿಸಿದೆ.

ಆರೋಪಿಯನ್ನು ಬಂಧಿಸುವಾಗ ಕೇವಲ ಬಾಯ್ಮಾತಿನಲ್ಲಿ ಕಾರಣಗಳನ್ನು ತಿಳಿಸಿದರೆ ಸಾಲದು. ಬಂಧಿತನಿಗೆ ಸ್ಪಷ್ಟವಾಗಿ ಓದಲು ಮತ್ತು ಅರ್ಥವಾಗುವ ಭಾಷೆಯಲ್ಲಿಯೇ ಲಿಖಿತವಾಗಿ ಕಾರಣಗಳನ್ನು ಒದಗಿಸಬೇಕು. ಒಂದು ವೇಳೆ ಪೊಲೀಸ್ ಅಧಿಕಾರಿಗಳು ಬಂಧನದ ಕಾರಣಗಳನ್ನು ಲಿಖಿತ ರೂಪದಲ್ಲಿ ನೀಡಲು ವಿಫಲವಾದರೆ, ಅದು ಸಂವಿಧಾನದ 22(1)ನೇ ವಿಧಿಯಡಿ ಪ್ರತಿಯೊಬ್ಬ ನಾಗರಿಕನಿಗೂ ನೀಡಲಾಗಿರುವ ಮೂಲಭೂತ ಹಕ್ಕಿನ ನೇರ ಉಲ್ಲಂಘನೆಯಾಗುತ್ತದೆ. ಅಂತಹ ಬಂಧನವನ್ನು ಅಕ್ರಮ ಬಂಧನ ಎಂದೇ ಪರಿಗಣಿಸಲಾಗುತ್ತದೆ.

ಬಂಧನ ನಿಯಮಗಳನ್ನು ಉಲ್ಲಂಘಿಸಿದ ಪೊಲೀಸರಿಗೆ ಶಿಕ್ಷೆ ಎಂದರೆ ನೇರವಾಗಿ ಜೈಲು ಶಿಕ್ಷೆ ವಿಧಿಸುವುದಲ್ಲ ಎಂಬುದನ್ನು ನ್ಯಾಯಾಲಯ ಸ್ಪಷ್ಟಪಡಿಸಿದೆ. ಬದಲಾಗಿ, ಲಿಖಿತ ಕಾರಣ ನೀಡದೆ ಬಂಧಿಸುವ ಅಧಿಕಾರಿಗಳ ವಿರುದ್ಧ ಕಡ್ಡಾಯವಾಗಿ ಇಲಾಖಾ ತನಿಖೆ (Departmental Enquiry) ನಡೆಸಬೇಕು. ತನಿಖೆಯಲ್ಲಿ ತಪ್ಪು ಸಾಬೀತಾದರೆ ಆ ಅಧಿಕಾರಿಯ ಸೇವಾ ದಾಖಲೆಯಲ್ಲಿ ಪ್ರತಿಕೂಲ ನಮೂದು (**Adverse Entry**) ಮಾಡಬೇಕು. ಇದರ ಜೊತೆಗೆ ಕಠಿಣ ಇಲಾಖಾ ಕ್ರಮಗಳನ್ನು ಜರುಗಿಸಬೇಕು ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಾಗಿ ಎಚ್ಚರಿಸಿದೆ.

ಇದೇ ವೇಳೆ, ಆರೋಪಿಯ ಮರುಬಂಧನದ ಕುರಿತಾಗಿಯೂ ಸುಪ್ರೀಂ ಕೋರ್ಟ್ ತನ್ನ 69 ಪುಟಗಳ ವಿಸ್ತೃತ ತೀರ್ಪಿನಲ್ಲಿ ಸ್ಪಷ್ಟ ಮಾರ್ಗಸೂಚಿಯನ್ನು ನೀಡಿದೆ. ಒಮ್ಮೆ ಜಾಮೀನಿನ ಮೇಲೆ ಬಿಡುಗಡೆಯಾದ ಅಥವಾ ಬಿಡುಗಡೆಗೆ ಅರ್ಹನಾದ ಆರೋಪಿಯನ್ನು ಮತ್ತೊಂದು ಪ್ರಕರಣದಲ್ಲಿ ಮರುಬಂಧನ ಮಾಡಬೇಕಾದರೆ, ಮ್ಯಾಜಿಸ್ಟ್ರೇಟ್ ಅವರ ಪೂರ್ವಾನುಮತಿ ಪಡೆಯುವುದು ಕಡ್ಡಾಯ ಎಂದು ನ್ಯಾಯಪೀಠವು ಆದೇಶದಲ್ಲಿ ವಿವರಿಸಿದೆ. ಈ ಮಹತ್ವದ ತೀರ್ಪು ಪೊಲೀಸ್ ದೌರ್ಜನ್ಯ ಮತ್ತು ಅಕ್ರಮ ಬಂಧನಗಳಿಗೆ ಬಲವಾದ ಬ್ರೇಕ್ ಹಾಕಲಿದೆ. ನಾಗರಿಕರ ಮೂಲಭೂತ ಹಕ್ಕುಗಳ ರಕ್ಷಣೆಯಲ್ಲಿ ಇದೊಂದು ದೊಡ್ಡ ಮೈಲಿಗಲ್ಲಾಗಿದೆ. ಪೊಲೀಸ್ ಅಧಿಕಾರಿಗಳು ಮತ್ತು ತನಿಖಾ ಸಂಸ್ಥೆಗಳು ಯಾವುದೇ ವ್ಯಕ್ತಿಯನ್ನು ಬಂಧಿಸುವಾಗ ಪಾರದರ್ಶಕತೆಯನ್ನು ಕಾಯ್ದುಕೊಳ್ಳಬೇಕು ಹಾಗೂ ಕಾನೂನು ಪ್ರಕ್ರಿಯೆಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂಬುದನ್ನು ಸುಪ್ರೀಂ ಕೋರ್ಟ್ ಈ ಮೂಲಕ ಖಚಿತಪಡಿಸಿದೆ.

# ರಷ್ಯಾ ಸಂಸತ್ ಚುನಾವಣೆ: 355ಕ್ಕೂ ಹೆಚ್ಚು ಸ್ಥಾನ ಗೆದ್ದು ಇತಿಹಾಸ ಸೃಷ್ಟಿಸಿದ ವ್ಲಾದಿಮಿರ್ ಪುಟಿನ್



**ಮಾಸ್ಕೋ, ಸೆ.22:** ಉಕ್ರೇನ್ ವಿರುದ್ಧ ಪೂರ್ಣ ಪ್ರಮಾಣದ ಯುದ್ಧ ಪ್ರಾರಂಭವಾದ ನಂತರ ನಡೆದ ಮೊದಲ ಸಂಸತ್ ಚುನಾವಣೆಯಲ್ಲಿ ರಷ್ಯಾದ ಆಡಳಿತಾರೂಢ ಯುನೈಟೆಡ್ ರಷ್ಯಾ ಪಕ್ಷ ಭರ್ಜರಿ ಗೆಲುವು ಸಾಧಿಸಿದೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಯುನೈಟೆಡ್ ರಷ್ಯಾ ಪಕ್ಷ ಶೇ.57.83 ರಷ್ಟು ಮತಗಳನ್ನು ಪಡೆದುಕೊಂಡಿದೆ ಎಂದು ರಷ್ಯಾ ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಇದುವರೆಗೆ ಶೇ.90 ರಷ್ಟು ಮತಗಳ ಎಣಿಕೆಯಾಗಿದ್ದು, ಆಡಳಿತರೂಢ ಪಕ್ಷವು ಶೇ. 58 ರಷ್ಟು ಬೆಂಬಲ ಪಡೆದಿದೆ ಎಂದು ರಷ್ಯಾ ಕೇಂದ್ರ ಚುನಾವಣಾ ಆಯೋಗವನ್ನು ಉಲ್ಲೇಖಿಸಿ ರಾಜ್ಯ ಸುದ್ದಿವಾಹಿನಿಗಳು ವರದಿ ಮಾಡಿವೆ. ಕಮ್ಯುನಿಸ್ಟ್ ಪಕ್ಷವು ಶೇ. 13.84 ನೊಂದಿಗೆ ಎರಡನೇ ಸ್ಥಾನದಲ್ಲಿದ್ದು, ನಂತರ ರಾಷ್ಟ್ರೀಯವಾದಿ ಲಿಬರಲ್ ಡೆಮಾಕ್ರಟಿಕ್ ಪಕ್ಷವು ಶೇ. 8.9 ರಷ್ಟು ಮತಗಳೊಂದಿಗೆ ಮೂರನೇ ಸ್ಥಾನದಲ್ಲಿದೆ. ಪುಟಿನ್ ಅವರು ಈ ಚುನಾವಣೆಯನ್ನು ರಷ್ಯಾದಲ್ಲಿ ಕರೆಯಲಾಗುವ ವಿಶೇಷ ಮಿಲಿಟರಿ ಕಾರ್ಯಾಚರಣೆಗೆ ಸಾರ್ವಜನಿಕರ ಬೆಂಬಲವನ್ನು ಅಳೆಯುವ ಜನಾಭಿಪ್ರಾಯ ಸಂಗ್ರಹದಂತೆ ಬಿಂಬಿಸಿದ್ದರು. ಪುಟಿನ್ ಮತ್ತು ಕ್ರೆಮ್ಲಿನ್‌ನ ಯುದ್ಧ ನೀತಿಯನ್ನು ಬೆಂಬಲಿಸುವ ಪಕ್ಷಗಳಿಗೆ ಮಾತ್ರ ಸ್ಪರ್ಧಿಸಲು ಅನುಮತಿ ನೀಡಲಾಗಿತ್ತು ಹಾಗೂ ಪ್ರಮುಖ ವಿರೋಧ ಪಕ್ಷಗಳನ್ನು ಚುನಾವಣೆಯಿಂದ ದೂರವಿಡಲಾಗಿತ್ತು. ಪ್ರಾಥಮಿಕ ಫಲಿತಾಂಶಗಳ ಪ್ರಕಾರ, 450 ಸ್ಥಾನಗಳಿರುವ ಡುಮಾ(ರಷ್ಯಾದ ಸಂಸತ್ತಿನ ಕೆಳಮನೆ) ಸಭೆಯಲ್ಲಿ ಯುನೈಟೆಡ್ ರಷ್ಯಾ ಪಕ್ಷವು 355 ಸ್ಥಾನಗಳನ್ನು ಪಡೆಯಲಿದೆ ಎಂದು ಚುನಾವಣಾ ಆಯೋಗದ ಮುಖ್ಯಸ್ಥೆ ಎಲ್ಲಾ ಪಂಫಿಲೋವಾ ತಿಳಿಸಿದ್ದಾರೆ. ಇದು ಪಕ್ಷವು ಪ್ರಸ್ತುತ ಹೊಂದಿರುವ ಸ್ಥಾನಗಳಿಗಿಂತ ಸುಮಾರು 20 ಸ್ಥಾನಗಳು ಹೆಚ್ಚಾಗಿದ್ದು, ತನ್ನ ಇತಿಹಾಸದಲ್ಲೇ ಅತ್ಯಂತ ದೊಡ್ಡ ಜಯವನ್ನು ದಾಖಲಿಸಿದೆ.

ಇದಕ್ಕೂ ಮುನ್ನ 2024 ರ ಮಾರ್ಚ್‌ನಲ್ಲಿ ನಡೆದಿದ್ದ ರಷ್ಯಾ ಅಧ್ಯಕ್ಷೀಯ ಚುನಾವಣೆಯಲ್ಲಿ ವ್ಲಾಡಿಮಿರ್ ಪುಟಿನ್ ಅವರು ಶೇ.87.17 ರಷ್ಟು ದಾಖಲೆ ಮತಗಳನ್ನು ಪಡೆದು ಭರ್ಜರಿ ಜಯ ದಾಖಲಿಸಿದ್ದರು. ಆ ಮೂಲಕ ಅವರು ಐದನೇ ಅವಧಿಗೆ ರಷ್ಯಾದ ಅಧ್ಯಕ್ಷರಾಗಿ ಅಧಿಕಾರ ಚುಕ್ಕಾಣಿ ಹಿಡಿದಿದ್ದರು.




ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು "ಅತ್ಯುತ್ತಮ ಫೀಚರ್ ಫಿಲ್ಮ್ ಆರ್ಟಿಕಲ್ 370 (ಹಿಂದಿ) ನಿರ್ಮಾಪಕ: ಜಿಯೋ ಸ್ಟುಡಿಯೋಸ್ ಮತ್ತು B62 ಸ್ಟುಡಿಯೋಸ್ ಪ್ರತಿನಿಧಿ ಆದಿತ್ಯ ಧರ್ ಸ್ವರ್ಣ ಅವರಿಗೆ ಗುಜರಾತ್‌ನ ಏಕತಾ ನಗರದಲ್ಲಿ (ಕೆವಾಡಿಯಾ), 72 ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡಿದರು.

# ಉಮರ್ ಖಾಲಿದ್ ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ಯತ್ನ: ವಿದ್ಯಾರ್ಥಿಗಳಿಗೆ ನೋಟಿಸ್

**ಹೈದರಾಬಾದ್, ಸೆ. 22:** ದೆಹಲಿ ಗಲಭೆ ಪ್ರಕರಣದ ಆರೋಪಿ ಉಮರ್ ಖಾಲಿದ್ ಕುರಿತಾದ ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ಯತ್ನಿಸಿದ ಹೈದರಾಬಾದ್ನ ಇಂಟರ್ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇನ್ಫಾರ್ಮೇಷನ್ ಟೆಕ್ನಾಲಜಿ ತನ್ನ ಎಂಟು ವಿದ್ಯಾರ್ಥಿಗಳಿಗೆ ಕಠಿಣ ಶಿಸ್ತುಕ್ರಮದ ನೋಟಿಸ್ ಜಾರಿ ಮಾಡಿದೆ. ನಿಯಮಗಳನ್ನು ಪಾಲಿಸದಿದ್ದರೆ ರಸ್ಟಿಕೇಷನ್ (ಸಂಸ್ಥೆಯಿಂದ ಉಚ್ಚಾಟನೆ) ಮಾಡಲಾಗುವುದು ಎಂಬ ಎಚ್ಚರಿಕೆಯನ್ನೂ ನೀಡಲಾಗಿದೆ.

ವಿದ್ಯಾರ್ಥಿಗಳಿಗೆ ನೋಟಿಸ್ ನೀಡಲು ಕೇವಲ ಸಾಕ್ಷ್ಯಚಿತ್ರ ಪ್ರದರ್ಶನ ಮಾತ್ರವೇ ಕಾರಣವಲ್ಲ ಎಂದು ಸಂಸ್ಥೆ ಸ್ಪಷ್ಟಪಡಿಸಿದೆ. ಕ್ಯಾಂಪಸ್‌ನಲ್ಲಿ ಮಾನ್ಯತೆ ಪಡೆಯದ "ನೋ ಟೈರೆಂಟ್ಸ್, ನೋ ಸೈಲೆನ್ಸ್" ಎಂಬ ವೇದಿಕೆ ರಚಿಸಿ, ಅದರೊಂದಿಗೆ ಐಐಐಟಿ–ಎಚ್ ಹೆಸರನ್ನು ಅನಧಿಕೃತವಾಗಿ ಬಳಸಿಕೊಂಡಿರುವುದು ನೋಟಿಸ್ಗೆ ಪ್ರಮುಖ ಕಾರಣವಾಗಿದೆ. ಇದರ ಜೊತೆಗೆ, ಸಂಸ್ಥೆಯ ಆಂತರಿಕ ಸಭೆಯ ಗೌಪ್ಯ ವಿವರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಿದ ಆರೋಪವನ್ನು ವಿದ್ಯಾರ್ಥಿಗಳ ಮೇಲೆ ಹೊರಿಸಲಾಗಿದೆ.

ಸೆಪ್ಟೆಂಬರ್ 18ರಂದು ತಕ್ಷಣದ ಪಾಲನೆ ಮತ್ತು ಶಿಸ್ತುಕ್ರಮದ ಎಚ್ಚರಿಕೆ ಎಂಬ ತಲೆಬರಹದಡಿ ಈ ನೋಟಿಸ್ ನೀಡಲಾಗಿದ್ದು, ನೋಟಿಸ್ಗೆ ಉತ್ತರಿಸಲು ವಿದ್ಯಾರ್ಥಿಗಳಿಗೆ ಕೇವಲ 4 ಗಂಟೆಗಳ ಗಡುವು ನೀಡಲಾಗಿತ್ತು. ಆದಾಗ್ಯೂ, ವಿದ್ಯಾರ್ಥಿಗಳನ್ನು ಇನ್ನೂ ಸಂಸ್ಥೆಯಿಂದ ಅಮಾನತು ಅಥವಾ ಉಚ್ಚಾಟನೆ ಮಾಡಿಲ್ಲ. ಕೇವಲ ಕಟ್ಟುನಿಟ್ಟಿನ ಎಚ್ಚರಿಕೆ ಮಾತ್ರ ನೀಡಲಾಗಿದೆ ಎಂದು ಮೂಲಗಳು ಸ್ಪಷ್ಟಪಡಿಸಿವೆ. ಆದರೆ, ವಿದ್ಯಾರ್ಥಿಗಳು ಆಡಳಿತ ಮಂಡಳಿಯ ಈ ಎಲ್ಲ ಆರೋಪಗಳನ್ನು ಬಲವಾಗಿ ಪ್ರಶ್ನಿಸಿದ್ದಾರೆ.

ಈ ಶಿಸ್ತುಕ್ರಮದ ತಕ್ಷಣದ ಹಿನ್ನೆಲೆಯೆಂದರೆ, ಕ್ಯಾಂಪಸ್ನಲ್ಲಿ ಉಮರ್ ಖಾಲಿದ್ ಕುರಿತ ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ವಿದ್ಯಾರ್ಥಿಗಳ ಗುಂಪೊಂದು ಯತ್ನಿಸಿತ್ತು. ಆದರೆ, ಈ ಪ್ರದರ್ಶನಕ್ಕೆ ಆಡಳಿತ ಮಂಡಳಿಯಿಂದ ಯಾವುದೇ ಅಧಿಕೃತ ಅನುಮತಿ ಪಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದ ಐಐಐಟಿ ಹೈದರಾಬಾದ್, ಆ ಕಾರ್ಯಕ್ರಮವನ್ನು ರದ್ದುಗೊಳಿಸಿತ್ತು.

ಈ ಸಾಕ್ಷ್ಯಚಿತ್ರ ಪ್ರದರ್ಶನಕ್ಕೆ ಸೆಂಟ್ರಲ್ ಬೋರ್ಡ್ ಆಫ್ ಫಿಲ್ಮ್ ಸರ್ಟಿಫಿಕೇಷನ್ ಕೂಡ ಆಕ್ಷೇಪ ವ್ಯಕ್ತಪಡಿಸಿತ್ತು. ಸಿಬಿಎಫ್‌ಸಿ ಮಧ್ಯಪ್ರವೇಶಿಸಿ ಪ್ರದರ್ಶನಕ್ಕೆ ತಡೆವೊಡ್ಡಿದ್ದನ್ನು ಪುಣೆಯ ಫಿಲ್ಮ್ ಅಂಡ್ ಟೆಲಿವಿಷನ್ ಇನ್ಸ್ಟಿಟ್ಯೂಟ್ ಆಫ್ ಇಂಡಿಯಾ ವಿದ್ಯಾರ್ಥಿ ಸಂಘವು ತೀವ್ರವಾಗಿ ಟೀಕಿಸಿತ್ತು. ಸಾಕ್ಷ್ಯಚಿತ್ರ ಪ್ರದರ್ಶನದ ವಿವಾದದಿಂದ ಶುರುವಾದ ಈ ಬಿಕ್ಕಟ್ಟು ಇದೀಗ ವಿದ್ಯಾರ್ಥಿಗಳಿಗೆ ಉಚ್ಚಾಟನೆಯ ಎಚ್ಚರಿಕೆ ನೀಡುವ ಹಂತಕ್ಕೆ ತಲುಪಿದೆ.

## ತ.ನಾಡಿನಲ್ಲಿ 6ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೂ ಉಚಿತ ಉಪಾಹಾರ

# ಕಾಮರಾಜರ್ ಉಚಿತ ಬೆಳಗಿನ ಉಪಾಹಾರ ಯೋಜನೆ ವಿಸ್ತರಣೆ; 15.30 ಲಕ್ಷ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಲಾಭ

**ಚೆನ್ನೈ:** ತಮಿಳುನಾಡು ಸರ್ಕಾರವು ಪೆರುಂತಲೈವರ್ ಕಾಮರಾಜರ್ ಉಚಿತ ಬೆಳಗಿನ ಉಪಾಹಾರ ಯೋಜನೆಯನ್ನು 6ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೂ ವಿಸ್ತರಿಸಿದೆ. ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು ಚೆನ್ನೈನ ತಿರುವಾನ್ಮಿಯೂರ್ನ ಗಾಂಧಿ ಗ್ರಾಮಂನ ಸರ್ಕಾರಿ ಮಧ್ಯಮ ಶಾಲೆಯಲ್ಲಿ ಯೋಜನೆಯ ವಿಸ್ತರಣೆಗೆ ಅಧಿಕೃತ ಚಾಲನೆ ನೀಡಿದರು. ಈವರೆಗೆ 1ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗಿದ್ದ ಯೋಜನೆಯ ವ್ಯಾಪ್ತಿಯನ್ನು ಇದೀಗ 6ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ. ಇದರಿಂದ ರಾಜ್ಯದ 15,454 ಸರ್ಕಾರಿ ಹಾಗೂ ಸರ್ಕಾರಿ ಅನುದಾನಿತ ಶಾಲೆಗಳ ಸುಮಾರು 15.30 ಲಕ್ಷ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಉಚಿತ ಬೆಳಗಿನ ಉಪಾಹಾರ ದೊರೆಯಲಿದೆ.




ಯೋಜನೆಯ ವಿಸ್ತರಣೆಗೆ ತಮಿಳುನಾಡು ಸರ್ಕಾರ ಹೆಚ್ಚುವರಿಯಾಗಿ 217.63 ಕೋಟಿ ಅನುದಾನ ಮೀಸಲಿಟ್ಟಿದೆ. ವಿಸ್ತರಣೆಯ ಬಳಿಕ ರಾಜ್ಯದ ಒಟ್ಟು 44,984 ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಸುಮಾರು 34.64 ಲಕ್ಷ ವಿದ್ಯಾರ್ಥಿಗಳು ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ. 2022ರಲ್ಲಿ ಅಂದಿನ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ಸರ್ಕಾರಿ ಪ್ರಾಥಮಿಕ ಶಾಲೆಗಳ ಮಕ್ಕಳಿಗಾಗಿ ಈ ಉಪಾಹಾರ ಯೋಜನೆಯನ್ನು ಆರಂಭಿಸಿದ್ದರು. ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆ, ಶಾಲಾ ಹಾಜರಾತಿ ಹೆಚ್ಚಳ ಹಾಗೂ ಶಾಲೆ ತೊರೆಯುವ ಪ್ರಮಾಣ ಕಡಿಮೆ ಮಾಡುವುದು ಯೋಜನೆಯ ಪ್ರಮುಖ ಉದ್ದೇಶಗಳಾಗಿವೆ. ನಂತರ ಸರ್ಕಾರಿ ಅನುದಾನಿತ ಶಾಲೆಗಳಿಗೂ ಯೋಜನೆಯನ್ನು ವಿಸ್ತರಿಸಲಾಗಿತ್ತು. ಇತ್ತೀಚಿನ ವಿಸ್ತರಣೆಗೆ ಮುನ್ನ 37,447 ಶಾಲೆಗಳ 19.34 ಲಕ್ಷ ಮಕ್ಕಳು ಇದರ ಪ್ರಯೋಜನ ಪಡೆಯುತ್ತಿದ್ದರು.

ಯೋಜನೆಯಡಿ ವಿದ್ಯಾರ್ಥಿಗಳಿಗೆ ವಾರದ ಪ್ರತಿ ದಿನ ವಿಭಿನ್ನ ಉಪಾಹಾರ ನೀಡಲು ಮೆನು ನಿಗದಿಪಡಿಸಲಾಗಿದೆ. ಸೋಮವಾರ ಉಪ್ಮಾ, ಮಂಗಳವಾರ ಖಿಚಡಿ, ಬುಧವಾರ ಪೊಂಗಲ್, ಗುರುವಾರ ಮತ್ತೆ ಉಪ್ಮಾ ನೀಡಲಾಗುತ್ತದೆ. ಶುಕ್ರವಾರ ಸಿಹಿ ತಿಂಡಿಯನ್ನು ನೀಡಲಾಗುತ್ತದೆ. ಯೋಜನೆಯ ವಿಸ್ತರಣೆಯು ಆರ್ಥಿಕವಾಗಿ ದುರ್ಬಲ ವರ್ಗದ ಮಕ್ಕಳ ಪೌಷ್ಟಿಕತೆ, ಶಾಲಾ ಹಾಜರಾತಿ ಹಾಗೂ ಕಲಿಕೆಯ ಸಾಮರ್ಥ್ಯ ಸುಧಾರಣೆಗೆ ನೆರವಾಗಲಿದೆ ಎಂದು ಅಧಿಕಾರಿಗಳು ನಿರೀಕ್ಷಿಸಿದ್ದಾರೆ. ಈ ವಿಸ್ತರಣೆಯನ್ನು ಸೆಪ್ಟೆಂಬರ್ 17ರಂದು ಆರಂಭಿಸಲು ಉದ್ದೇಶಿಸಲಾಗಿತ್ತು. ಆದರೆ ಮುಖ್ಯಮಂತ್ರಿ ವಿಜಯ್ ಅವರು ಹೂಡಿಕೆ ಆಕರ್ಷಿಸುವ ಕಾರ್ಯಕ್ರಮಕ್ಕಾಗಿ ಲಂಡನ್‌ನಲ್ಲಿದ್ದ ಕಾರಣ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು. ಪ್ರಸ್ತುತ ಚೆಂಗಲ್ಪಟ್ಟು ಮತ್ತು ತಿರುಪ್ಪೂರ್ ಜಿಲ್ಲೆಗಳನ್ನು ಹೊರತುಪಡಿಸಿ ರಾಜ್ಯದಲ್ಲಿ ಯೋಜನೆ ಜಾರಿಯಾಗಿದೆ. ಈ ಎರಡು ಜಿಲ್ಲೆಗಳಲ್ಲಿ ಮದುರಾಂತಕಂ ಮತ್ತು ಧಾರಾಪುರಂ ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಯೋಜನೆ ಜಾರಿಯಾಗಿಲ್ಲ.

# ಯುಪಿ ಚುನಾವಣೆಯಲ್ಲಿ ಎಸ್ಪಿ ಗೆಲುವು ಶತಃಸಿದ್ಧ: ಅಖಿಲೇಶ್ ಯಾದವ್

**ಲಕ್ನೋ, ಸೆ. 22:** 2027ರ ಉತ್ತರ ಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ಸಮಾಜವಾದಿ ಪಕ್ಷವೂ ದಾಖಲೆ ಸ್ಥಾನಗಳಲ್ಲಿ ಗೆದ್ದು ಅಧಿಕಾರಕ್ಕೇರಲಿದೆ ಎಂದು ಎಸ್ಪಿ ಮುಖ್ಯಸ್ಥ ಮತ್ತು ಮಾಜಿ ಸಿಎಂ ಅಖಿಲೇಶ್ ಯಾದವ್ ಎಂದು ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪಕ್ಷದ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಣದುಬ್ಬರ ಮತ್ತು ನಿರುದ್ಯೋಗ ಸಮಸ್ಯೆಗೆ ಬಿಜೆಪಿ ಬಳಿ ಯಾವುದೇ ಪರಿಹಾರವಿಲ್ಲ. ಕಾನೂನು ಸುವ್ಯವಸ್ಥೆ ಕುಸಿದಿದೆ ಮತ್ತು ಭ್ರಷ್ಟಾಚಾರ ಉತ್ತುಂಗದಲ್ಲಿದೆ. ಸಾರ್ವಜನಿಕರು ಬಿಜೆಪಿ ವಿರುದ್ಧ ಇದ್ದಾರೆ, ಅದಕ್ಕಾಗಿಯೇ ಅದು ನಕಾರಾತ್ಮಕ ಪ್ರಚಾರಕ್ಕೆ ಇಳಿದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ಸರ್ಕಾರವು ಪಿಡಿಎ ವರ್ಗದವರನ್ನು ಅವರ ಹಕ್ಕುಗಳಿಂದ ವಂಚಿತರನ್ನಾಗಿಸಿದೆ. 11,000ಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿದ್ದಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಸಮಾಜವಾದಿ ಪಕ್ಷವು ಲೆಕ್ಕಪರಿಶೋಧನಾ ವರದಿಯನ್ನು ಬಿಡುಗಡೆ ಮಾಡಿದ್ದರೂ, ಸರ್ಕಾರವು ಅದಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಹೇಳಿದ್ದಾರೆ. ರಾಜ್ಯದಲ್ಲಿ 20ಕ್ಕೂ ಹೆಚ್ಚು ನೇಮಕಾತಿ ಪರೀಕ್ಷಾ ಪ್ರಶ್ನೆಪತ್ರಿಕೆಗಳು ಸೋರಿಕೆಯಾಗಿವೆ. ಹೊರಗುತ್ತಿಗೆ ಪದ್ಧತಿಯನ್ನು ಉತ್ತೇಜಿಸುವ ಉದ್ದೇಶದಿಂದಲೇ ಇದನ್ನು ಮಾಡಲಾಗುತ್ತಿದೆ ಎಂದು ಪ್ರತಿಪಾದಿಸಿದ್ದಾರೆ. ಸರ್ಕಾರಿ ನೇಮಕಾತಿಗಳಲ್ಲಿ ಮೀಸಲಾತಿ ಮತ್ತು ನಿಯಮಿತ ವೇತನವನ್ನು ಕಲ್ಪಿಸಬೇಕಾಗುತ್ತದೆ. ಆದರೆ ಹೊರಗುತ್ತಿಗೆ ಪದ್ಧತಿಯಲ್ಲಿ ನೇಮಕಾತಿ ಮತ್ತು ವೇತನ ಪಾವತಿಯ ಜವಾಬ್ದಾರಿಯನ್ನು ಏಜೆನ್ಸಿಗಳು ನಿರ್ವಹಿಸುತ್ತವೆ ಎಂದಿದ್ದಾರೆ. ಸರ್ಕಾರವು ಪಿಡಿಎ ಸಮುದಾಯಗಳನ್ನು ಉದ್ದೇಶಪೂರ್ವಕವಾಗಿ ಅವಮಾನಿಸುತ್ತಿದೆ. ರಾಜ್ಯದ ಹಲವೆಡೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗಳಿಗೆ ಹಾನಿ ಮಾಡಲಾಗಿದೆ. ಪರಿಣಾಮಕಾರಿ ಕ್ರಮ ಕೈಗೊಳ್ಳದೆ, ಗುರುತು ಪತ್ತೆಯಾಗದ ವ್ಯಕ್ತಿಗಳ ವಿರುದ್ಧ ಆಗಾಗ್ಗೆ ಎಫ್‌ಐಆರ್ ದಾಖಲಿಸಲಾಗುತ್ತಿದೆ ಎಂದು ದೂರಿದ್ದಾರೆ.



# ಕೆಪಿಎಸ್‌ಸಿ ನೇಮಕಾತಿ ಪ್ರಕರಣ: ಬಸವರಾಜ್ ಕನ್ನಾಳೆ ಜಾಮೀನು ಅರ್ಜಿ ವಜಾ

**ಬೆಂಗಳೂರು, ಸೆ.22:** ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ್ದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತ ಬಸವರಾಜ್ ಕನ್ನಾಳೆ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಬೆಂಗಳೂರಿನ 52ನೇ ಸಿಟಿ ಸಿವಿಲ್ ಅಂಡ್ ಸೇಷನ್ಸ್ ನ್ಯಾಯಾಲಯ ವಜಾಗೊಳಿಸಿ ಆದೇಶಿಸಿದೆ.

ಪ್ರಕರಣದ ಗಂಭೀರತೆ ಹಾಗೂ ಸಿಐಡಿ ಮತ್ತು ಜಾರಿ ನಿರ್ದೇಶನಾಲಯ ನಡೆಸಿರುವ ಸುದೀರ್ಘ ತನಿಖೆಯ ಸಾಕ್ಷ್ಯಾಧಾರಗಳನ್ನು ಪರಿಗಣಿಸಿದ ನ್ಯಾಯಾಲಯವು, ಈ ಹಂತದಲ್ಲಿ ಆರೋಪಿಗೆ ಜಾಮೀನು ನೀಡುವುದು ಸೂಕ್ತವಲ್ಲವೆಂದು ಅಭಿಪ್ರಾಯಪಟ್ಟು ಅರ್ಜಿಯನ್ನು ವಜಾ ಮಾಡಿದೆ.

ಕೋಟಿ ಕೋಟಿ ಡೀಲ್ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಜಾಲ –ಬೀದರ್ ಜಿಲ್ಲೆಯ ಭಾಲ್ಕಿ ಮೂಲದ ಬಸವರಾಜ್ ಕನ್ನಾಳೆ, ಈ ನೇಮಕಾತಿ ಹಗರಣದ ಮುಖ್ಯ ಸೂತ್ರಧಾರರಲ್ಲಿ ಒಬ್ಬನೆಂದು ತನಿಖೆಯಿಂದ ತಿಳಿದುಬಂದಿದೆ.

ಕೆಪಿಎಸ್‌ಸಿಯ ಮಾಜಿ ಪರೀಕ್ಷಾ ನಿಯಂತ್ರಕ ಹಾಗೂ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಜೊತೆ ನಿಕಟ ಸಂಪರ್ಕ ಹೊಂದಿದ್ದ ಕನ್ನಾಳೆ, ಪರೀಕ್ಷೆಗೂ ಮುನ್ನವೇ ಪ್ರಶ್ನೆಪತ್ರಿಕೆಗಳನ್ನು ಸೋರಿಕೆ ಮಾಡಿಸಿ ಅಭ್ಯರ್ಥಿಗಳಿಗೆ ಒದಗಿಸಿದ್ದ ಎನ್ನಲಾಗಿದೆ.

ಒಬ್ಬೊಬ್ಬ ಅಭ್ಯರ್ಥಿಯಿಂದ 35 ಲಕ್ಷದಿಂದ 80 ಲಕ್ಷದವರೆಗೆ ಒಟ್ಟು ಕೋಟ್ಯಂತರ ರೂಪಾಯಿ ಲಂಚದ ಹಣ ವಸೂಲಿ ಮಾಡಲಾಗಿತ್ತು ಎಂಬ ಆರೋಪವಿದೆ. ದೇವನಹಳ್ಳಿ ಬಳಿಯ ರೆಸಾರ್ಟ್‌ಗಳು ಹಾಗೂ ವಿಲ್ಲಾಗಳಲ್ಲಿ ಅಭ್ಯರ್ಥಿಗಳನ್ನು ತಂಗಿಸಿ, ಪರೀಕ್ಷೆಗೆ ಮುನ್ನವೇ ಸೋರಿಕೆಯಾದ ಪ್ರಶ್ನೆಪತ್ರಿಕೆಗಳಿಗೆ ಉತ್ತರ ಅಭ್ಯಾಸ ಮಾಡಿಸಲಾಗಿತ್ತು ಎಂಬ ಭೀಕರ ಸತ್ಯ ಸಿಐಡಿ ತನಿಖೆಯಿಂದ ಬಯಲಾಗಿದೆ.

ಇಡಿ ಕಾರ್ಯಾಚರಣೆ ಹಾಗೂ ಬ್ಯಾಂಕ್ ಖಾತೆಗಳು ಸೀಜ್– ಪ್ರಕರಣಕ್ಕೆ ಸಂಬಂಧಿಸಿದಂತೆ ಕನ್ನಾಳೆ ಹಾಗೂ ಆತನ ಸಂಬಂಧಿಕರ ಹೆಸರಿನಲ್ಲಿದ್ದ 70 ಲಕ್ಷಕ್ಕೂ ಹೆಚ್ಚು ಹಣ ಹೊಂದಿರುವ ಬ್ಯಾಂಕ್ ಖಾತೆಗಳನ್ನು ಮತ್ತು ಕೋಟ್ಯಂತರ ರೂ. ಮೌಲ್ಯದ ಸ್ಥಿರಾಸ್ತಿಗಳನ್ನು ತನಿಖಾಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ಜೊತೆಗೆ ಜಾರಿ ನಿರ್ದೇಶನಾಲಯವೂ ಸಹ ಕನ್ನಾಳೆ ಹಾಗೂ ಐಎಎಸ್ ಅಧಿಕಾರಿ ಗಂಗ್ವಾರ್ ಅವರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದೆ.





ಲೀಟರ್‌ಗೆ ರೂ.8 ರಷ್ಟು ಖರೀದಿ ದರವನ್ನು ಹೆಚ್ಚಿಸುವಂತೆ ಒತ್ತಾಯಿಸಿ, ಕರ್ನಾಟಕ ಹಾಲು ಉತ್ಪಾದಕರ ಸಂಘದ ಸದಸ್ಯರು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಕೇಂದ್ರ್ರದ ಮಾನದಂಡ ಆಧರಿಸಿ ಬರಪೀಡಿತ ಪ್ರದೇಶ ಘೋಷಣೆ: ದಿನೇಶ್ ಗೂಳಿಗೌಡ



**ಬೆಂಗಳೂರು,ಸೆ.22:** ಯಾವುದೇ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಬೇಕಾದರೆ ಕೇಂದ್ರ್ರದ ಮಾನದಂಡಗಳು ಆಧಾರವಾಗಿರುತ್ತವೆಯೇ ಹೊರತು ಆಡಳಿತ ಪಕ್ಷದ ಕ್ಷೇತ್ರ ವಿರೋಧ ಪಕ್ಷದ ಕ್ಷೇತ್ರ ಎಂದು ತಾರತಮ್ಯ ಮಾಡಲು ಸಾಧ್ಯವಿಲ್ಲ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಶಾಸಕರಾದ ದಿನೇಶ್ ಗೂಳಿಗೌಡ ಅವರು ಹೇಳಿದರು.

ವಿಧಾನಪರಿಷತ್ ನಲ್ಲಿ ಬರ ಕುರಿತ ಚರ್ಚೆ ವೇಳೆ ಮಾತನಾಡಿದ ಅವರು, ಮಳೆ ಪ್ರಮಾಣ ಶೇಕಡಾವಾರು ಮಳೆ ಕೊರತೆ, ಹವಾಮಾನ ವೈಪರೀತ್ಯ, ಉಪಗ್ರಹ ಚಿತ್ರಗಳು ಹೀಗೆ ನಾನಾ ಮಾನದಂಡಗಳ ಆಧಾರದ ಮೇಲೆ ಬರಪೀಡಿತ ಜಿಲ್ಲೆಗಳನ್ನು ಘೋಷಣೆ ಮಾಡಲಾಗುತ್ತದೆಯೇ ವಿನಃ ಕಾಂಗ್ರೆಸ್, ಬಿಜೆಪಿ ಅಥವಾ ಜೆಡಿಎಸ್ ನವರ ಕ್ಷೇತ್ರ ಎಂದು ಬರ ಘೋಷಣೆ ಮಾಡಲು ಬರುವುದಿಲ್ಲ ಎಂದರು. ಮಂಡ್ಯ ಜಿಲ್ಲೆಯಲ್ಲಿ ಕಳೆದ ವರ್ಷ 1,87,456 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಆಗಿತ್ತು. 44 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿತ್ತು. ಆದರೆ ಈ ವರ್ಷ 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಕಬ್ಬು ಬೆಳೆಯಲಾಗಿದೆ. ಕಳೆದ ವರ್ಷ ಕಾವೇರಿ ಜಲಾನಯನ ಪ್ರದೇಶದ 4 ಜಲಾಶಯಗಳಿಂದ 341 ಟಿಎಂಸಿ ನೀರು ಹೋಗಿತ್ತು. ಈ ವರ್ಷ ಮಳೆ ಕೊರತೆ ತೀವ್ರವಾಗಿದ್ದು, ಕೇಂದ್ರ ಸರ್ಕಾರದ ಮಾನದಂಡಗಳ ಆಧಾರದ ಮೇಲೆ ಮಂಡ್ಯ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿದೆ ಎಂದರು.

# ವಂದೇಮಾತರಂ ಗಾಯನ ಎರಡು ಚರಣಗಳಿಗೆ ಸೀಮಿತಗೊಳಿಸಿದ ಪ್ರಕರಣ: ವಿಚಾರಣೆ ಮುಂದೂಡಿದ ಹೈಕೋರ್ಟ್

**ಬೆಂಗಳೂರು, ಸೆ.22:** ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಮಂತ್ರಿ ಮತ್ತು ರಾಜ್ಯಪಾಲರು ಭಾಗವಹಿಸುವ ಕಾರ್ಯಕ್ರಮ ಹೊರತುಪಡಿಸಿ ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ ವಂದೇಮಾತರಂ ಗೀತೆಯ ಎರಡು ಚರಣಗಳನ್ನು ಮಾತ್ರ ಹಾಡುವುದನ್ನು ಕಡ್ಡಾಯಗೊಳಿಸಿ ಸೆಪ್ಟೆಂಬರ್ 8ರಂದು ಸರ್ಕಾರ ಹೊರಡಿಸಿರುವ ಆದೇಶ ರದ್ದು ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಮುಂದೂಡಿದೆ.

ವಕೀಲ ಗಿರೀಶ್ ಭಾರದ್ವಾಜ್ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಟಿ.ಪಿ. ವಿವೇಕಾನಂದ ಅವರ ವಿಭಾಗೀಯ ಪೀಠ ನಡೆಸಿತು.

ವಂದೇಮಾತರಂ ಸಂಪೂರ್ಣ ಗೀತೆ ಹಾಡುವ ಸಂಬಂಧಿತ ಕಾಯಿದೆ ಹಾಗೂ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ. ಈ ಅರ್ಜಿಯ ವಿಚಾರಣೆಯನ್ನು ಎರಡು ವಾರ ಮುಂದೂಡಿ, ಸರ್ವೋಚ್ಚ ನ್ಯಾಯಾಲಯ ಆದೇಶಿಸಿದೆ. ಸುಪ್ರೀಂ ಕೋರ್ಟ್ ಆದೇಶಕ್ಕಾಗಿ ಕಾದು, ವಿಚಾರಣೆಯನ್ನು ಹೈಕೋರ್ಟ್ ಅಕ್ಟೋಬರ್ 15ಕ್ಕೆ ಮುಂದೂಡಿತು.

ಇದಕ್ಕೂ ಮುನ್ನ, ಅರ್ಜಿದಾರರ ಪರ ವಕೀಲ ಅನಗದ್ ಕಾಮತ್ ಅವರು ಎರಡು ಚರಣ ಮಾತ್ರ ಹಾಡಬೇಕು ಎಂದು ರಾಜ್ಯ ಸಂಪುಟದ ನಿರ್ಧಾರ ಆಧರಿಸಿ ಸರ್ಕಾರ ಆದೇಶ ಮಾಡಿದೆ. ಆದರೆ, ಸಂಪುಟದ ನಿರ್ಧಾರಕ್ಕೆ ಯಾವುದೇ ಪ್ರಸ್ತಾವವು ಸಂಬಂಧಿತ ಇಲಾಖೆಯಿಂದ ಸಲ್ಲಿಕೆಯಾಗಿರಲಿಲ್ಲ. ಕಾನೂನು ಸಲಹೆ ಪಡೆಯದೇ 32ಕ್ಕೂ ಹೆಚ್ಚು ಸಚಿವರು ಸಂಪುಟದಲ್ಲಿ ನಿರ್ಧಾರ ಮಾಡಿದ್ದಾರೆ. ಆದರೆ, ಇದಕ್ಕೆ ಅವಕಾಶವಿಲ್ಲ. ಹೀಗಾಗಿ, ಸರ್ಕಾರದ ಆದೇಶಕ್ಕೆ ತಡೆ ನೀಡಬೇಕು ಎಂದರು.




ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಸಂವಿಧಾನದ ವಿಧಿ 51ಎ ಪ್ರಕಾರ ರಾಷ್ಟ್ರಧ್ವಜ ಮತ್ತು ರಾಷ್ಟ್ರಗೀತೆಯ ಗೌರವದ ಬಗ್ಗೆ ಸ್ಪಷ್ಟವಾಗಿ ಉಲ್ಲೇಖಿಸುತ್ತದೆ. ಆದರೆ 'ರಾಷ್ಟ್ರೀಯ ಗೀತೆ'ಗೆ ಸಂಬಂಧಿಸಿದಂತೆ ಯಾವುದೇ ಪ್ರತ್ಯೇಕ ಶಾಸನಬದ್ಧ ವಿಧಿವಿಧಾನಗಳಿಲ್ಲ. ಕೇಂದ್ರ ಗೃಹ ಸಚಿವಾಲಯದ ಸುತ್ತೋಲೆಯಲ್ಲೇ ಗೀತೆಯನ್ನು ಇತರ ಸಂದರ್ಭಗಳಲ್ಲಿ ಹಾಡಬಹುದು ಎಂದು ಹೇಳಲಾಗಿದೆಯೇ ಹೊರತು, ಎಲ್ಲರೂ ಕಡ್ಡಾಯವಾಗಿ ಹಾಡಲೇಬೇಕು ಎಂದಿಲ್ಲ. ಆದ್ದರಿಂದ ರಾಜ್ಯ ಸರ್ಕಾರವು ಕೇವಲ ಮೊದಲ ಎರಡು ಚರಣಗಳನ್ನು ನಿಗದಿಪಡಿಸಿರುವುದು ನಿಯಮಬಾಹಿರವಲ್ಲ ಎಂದರು.

ಆದೇಶದಲ್ಲಿ ವಂದೇಮಾತರಂ ಗೀತೆಯನ್ನು ಇತರ ಸಂದರ್ಭಗಳಲ್ಲಿ ಹಾಡಬಹುದು ಎಂದು ಉಲ್ಲೇಖಿಸಲಾಗಿದೆ. ಇದರರ್ಥ ಗೀತೆಯನ್ನು ಕಡ್ಡಾಯವಾಗಿ ಹಾಡಲೇಬೇಕು ಅಥವಾ ಮೌನವಾಗಿ ನಿಲ್ಲಬೇಕು ಎಂಬುದೇ ಹೊರತು, ಎಷ್ಟು ಚರಣಗಳನ್ನು ಹಾಡಬೇಕು ಎಂದಲ್ಲ. ಅಲ್ಲದೆ, ಅರ್ಜಿದಾರರು ಸೆಪ್ಟೆಂಬರ್ 14ರ ಸರ್ಕಾರಿ ರಜಾದಿನದಂದು ಮನವಿ ಸಲ್ಲಿಸಿ, ತಕ್ಷಣವೇ ಮರುದಿನ (ಸೆಪ್ಟೆಂಬರ್ 15) ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರಕ್ಕೆ ಪರಿಶೀಲಿಸಲು ಸಮಯವನ್ನೇ ನೀಡದೆ ಅವಸರದಲ್ಲಿ ಅರ್ಜಿ ಸಲ್ಲಿಸಿದ್ದಾರೆ ಎಂದು ವಾದಿಸಿದರು.

ಕೇಂದ್ರ ಸರ್ಕಾರ ಪ್ರತಿನಿಧಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಅರವಿಂದ್ ಕಾಮತ್ ಅವರು ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ (ತಿದ್ದುಪಡಿ) ಕಾಯಿದೆಯ ಸೆಕ್ಷನ್ 3ಕ್ಕೆ ತಿದ್ದುಪಡಿ ತರಲಾಗಿದ್ದು, ರಾಷ್ಟ್ರಗೀತೆಯ ಜೊತೆಗೆ ವಂದೇ ಮಾತರಂ ಗೀತೆಯನ್ನು ಸೇರಿಸಲಾಗಿದೆ. ರಾಷ್ಟ್ರೀಯ ಗೀತೆಯ ಗಾಯನಕ್ಕೆ ಉದ್ದೇಶಪೂರ್ವಕವಾಗಿ ಅಡ್ಡಿಪಡಿಸುವುದು ಅಥವಾ ಗಾಯನ ನಡೆಯುವ ಸಭೆಯಲ್ಲಿ ಗೊಂದಲ ಉಂಟುಮಾಡುವುದು ಅಪರಾಧವಾಗಿದೆ. ರಾಷ್ಟ್ರೀಯ ಗೀತೆಯ ಅಧಿಕೃತ ಆವೃತ್ತಿ ಯಾವುದು ಎಂಬುದನ್ನು ನಿರ್ಧರಿಸುವ ಸಂಪೂರ್ಣ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಕೇಂದ್ರ ಸರ್ಕಾರದ ಆಜ್ಞೆಯ ಪ್ರಕಾರ 'ವಂದೇಮಾತರಂ' ಗೀತೆಯು ಸಂಪೂರ್ಣ ಆರು ಚರಣಗಳನ್ನು ಹಾಡಬೇಕಾಗಿದೆ ಎಂದರು.

ಸಂವಿಧಾನದ 256 ಮತ್ತು 257(1) ರ ಅಡಿಯಲ್ಲಿ ಕೇಂದ್ರ ಸರ್ಕಾರವು ನೀಡುವ ನಿರ್ದೇಶನ ಹಾಗೂ ಕಾಯಿದೆಗಳಿಗೆ ಬದ್ಧವಾಗಿ ನಡೆದುಕೊಳ್ಳುವುದು ರಾಜ್ಯ ಸರ್ಕಾರಗಳ ಜವಾಬ್ದಾರಿಯಾಗಿದೆ. ಕೇಂದ್ರದ ಗೃಹ ಸಚಿವಾಲಯ ಹೊರಡಿಸಿರುವ ಸುತ್ತೋಲೆಯು ಕೇವಲ 'ಮಾಹಿತಿ'ಗಾಗಿ ಅಲ್ಲ, ಬದಲಾಗಿ 'ಕಡ್ಡಾಯ ಪಾಲನೆ'ಗಾಗಿ ನೀಡಲಾಗಿದೆ. ಕೇಂದ್ರದ ಆದೇಶದ ಪ್ರಕಾರ, ಗೀತೆಯನ್ನು ಕಡ್ಡಾಯವಾಗಿ ಹಾಡಬೇಕಾದ 5 ಪ್ರಮುಖ ಸಂದರ್ಭಗಳನ್ನು ಗುರುತಿಸಲಾಗಿದೆ. ಸಾಮೂಹಿಕ ಗಾಯನ ಸೇರಿದಂತೆ ಇತರ ಸಂದರ್ಭಗಳಲ್ಲಿ ಹಾಡುವುದಾದರೆ, ಅದು ಕೇಂದ್ರ ನಿಗದಿಪಡಿಸಿದ ಪೂರ್ಣ 6 ಚರಣಗಳ ಅಧಿಕೃತ ಆವೃತ್ತಿಯಲ್ಲೇ ಇರಬೇಕು ಎಂದರು. ಎಲ್ಲರ ವಾದ ಆಲಿಸಿದ ಪೀಠವು ವಿಚಾರಣೆಯನ್ನು ಅಕ್ಟೋಬರ್ 15ಕ್ಕೆ ಮುಂದೂಡಿತು.

# ಕಾಂಗ್ರೆಸ್ ಸರ್ಕಾರದ ಭೀಕರ ದಿವಾಳಿತನ ಜಗಜ್ಜಾಹೀರು: ರವಿಕುಮಾರ್ ಕಿಡಿ

**ಸಾಲ ಪಡೆಯುವ ಕ್ಷಮತೆಯೂ ಕ್ಷೀಣ, ಕರ್ನಾಟಕದ ಆರ್ಥಿಕತೆಯನ್ನು ವೆಂಟಿಲೇಟರ್‌ಗೆ ತಳ್ಳಿದ ಸಿದ್ದರಾಮಯ್ಯ-ಡಿ.ಕೆ. ಶಿವಕುಮಾರ್ ಜೋಡಿ**

**ಬೆಂಗಳೂರು, ಸೆ.22:** ಖಾಲಿ ಬೊಕ್ಕಸ, ವಿಪರೀತ ಸಾಲದ ಹೊರೆ ಮತ್ತು ಕೇವಲ ಪ್ರಚಾರಪ್ರಿಯತೆಯಿಂದ ರಾಜ್ಯವನ್ನು ಸಂಪೂರ್ಣ ಆರ್ಥಿಕ ಕಸಾಯಿಖಾನೆಗೆ ತಳ್ಳಿರುವ ಕಾಂಗ್ರೆಸ್ ಸರ್ಕಾರದ ನಿಜಬಣ್ಣ ಈಗ ಸ್ವತಃ ಹಣಕಾಸು ಇಲಾಖೆಯ ಆಂತರಿಕ ಟಿಪ್ಪಣಿಯಿಂದಲೇ ಬಯಲಾಗಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜವಾಬ್ದಾರಿ ರಹಿತ ಆಡಳಿತ ವೈಫಲ್ಯ ಮತ್ತು ರಾಜಕೀಯ ಗಿಮಿಕ್‌ಗಳಿಗೆ ಹಣಕಾಸು ಇಲಾಖೆಯು "ವಾಸ್ತವಕ್ಕೆ ಬನ್ನಿ, ಹೊಸ ಯೋಜನೆಗಳನ್ನು ಕೈಬಿಡಿ" ಎಂದು ಕಪಾಳಮೋಕ್ಷ ಮಾಡಿದೆ ಎಂದು ವಿಧಾನ'ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿದ್ದಾರೆ.

ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಜೋಡಿಯು ಕರ್ನಾಟಕವನ್ನು ಅಭಿವೃದ್ಧಿಯ ಹಾದಿಯಿಂದ ಎಳೆದು ಆರ್ಥಿಕ ವೆಂಟಿಲೇಟರ್ ಮೇಲೆ ಮಲಗಿಸಿದೆ. ಹಣಕಾಸು



ಇಲಾಖೆಯು ನೀಡಿರುವ ಆಂತರಿಕ ಎಚ್ಚರಿಕೆಯು ಕಾಂಗ್ರೆಸ್ ಸರ್ಕಾರದ ಲೂಟಿ ಮತ್ತು ದಿವಾಳಿತನಕ್ಕೆ ಸಾಕ್ಷಿಯಾಗಿದೆ. ಸಾಲ ಪಡೆಯುವ ಕ್ಷಮತೆಯೂ ಭಸ್ಮವಾಗಿದೆ. 2026–27ನೇ ಸಾಲಿನ ಆಯವ್ಯಯದ ಅಗತ್ಯಗಳನ್ನು ಪೂರೈಸಲು ಕರ್ನಾ ಟಕವು ಈಗಾಗಲೇ ತನ್ನ ಸಂಪೂರ್ಣ ಸಾಲ ಪಡೆಯುವ ಕಾನೂನುಬದ್ಧ ಮಿತಿಯನ್ನು ಬಳಸಿಕೊಂಡಿದೆ. ಈ ಭ್ರಷ್ಟ ಸರ್ಕಾರಕ್ಕೆ ಇನ್ನು ಮುಂದೆ ಒಂದು ರೂಪಾಯಿ ಸಾಲ ಎತ್ತಲೂ ಕಾನೂನಿನಲ್ಲಿ ಅವಕಾಶವಿಲ್ಲ. ಯಾವುದೇ ಆರ್ಥಿಕ ಬಫರ್ ಇಲ್ಲದೆ ರಾಜ್ಯದ ಖಜಾನೆಯನ್ನು ಸಂಪೂರ್ಣವಾಗಿ ಖಾಲಿ ಮಾಡಲಾಗಿದೆ ಎಂದು ದೂರಿದ್ದಾರೆ.

## ಹಣಕಾಸು ಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಿ

**ಗ್ಯಾರಂಟಿಗಾಗಿ ಕರ್ನಾಟಕದ ಭವಿಷ್ಯವನ್ನು ಅಡಮಾನವಿಟ್ಟು, ಖಜಾನೆ ಖಾಲಿಯಾಗಿ ಈಗ ಹಣಕಾಸು ಇಲಾಖೆಯಿಂದಲೇ 'ಬುದ್ಧಿಮಾತು' ಹೇಳಿಸಿಕೊಂಡಿರುವುದು ಈ ಸರ್ಕಾರಕ್ಕೆ ಬಿದ್ದ ದೊಡ್ಡ ಚಾಟಿಯೇಟು. ಡಿ.ಕೆ. ಶಿವಕುಮಾರ್ ಅವರೇ, ನಿಮ್ಮ ಕುರ್ಚಿ ಕಸರತ್ತು ಮತ್ತು ಗಿಮಿಕ್ ರಾಜಕಾರಣಕ್ಕೆ ರಾಜ್ಯದ ಆರೂವರೆ ಕೋಟಿ ಜನರನ್ನು ಬಲಿ ಕೊಡಬೇಡಿ. ತಕ್ಷಣವೇ ರಾಜ್ಯದ ನೈಜ ಹಣಕಾಸು ಪರಿಸ್ಥಿತಿಯ ಕುರಿತು ಶ್ವೇತಪತ್ರ ಹೊರಡಿಸಿ, ಗುತ್ತಿಗೆದಾರರ 36,136 ಕೋಟಿ ರೂ. ಬಾಕಿ ಬಿಲ್ ಬಿಡುಗಡೆ ಮಾಡಿ. ಇಲ್ಲವಾದರೆ ಬಿಜೆಪಿ ರಾಜ್ಯಾದ್ಯಂತ ಬೀದಿಗಿಳಿದು ನಿಮ್ಮ ಭ್ರಷ್ಟ ಸರ್ಕಾರದ ವಿರುದ್ಧ ಉಗ್ರ ಹೋರಾಟ ನಡೆಸಲಿದೆ ಎಂದು ರವಿಕುಮಾರ್ ಎಚ್ಚರಿಕೆ ನೀಡಿದ್ದಾರೆ.**

## ರಸ್ತೆ ಯೋಜನೆಗೆ ಹಣ ಇಲ್ಲ ಎಂದ ಆರ್ಥಿಕ ಇಲಾಖೆ

**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಚಾರ ಗಿಟ್ಟಿಸಿಕೊಳ್ಳಲು 10,000 ಕೋಟಿ ವೆಚ್ಚದ "ಗ್ರಾಮೀಣ ರಸ್ತೆ ಸಂಪರ್ಕ ಯೋಜನೆ"ಯ ಪ್ರಸ್ತಾಪವನ್ನು ಹಣಕಾಸು ಇಲಾಖೆಗೆ ಕಳುಹಿಸಿದಾಗ, ಇಲಾಖೆಯು ಈ ಯೋಜನೆಗೆ ಹಣ ಇಲ್ಲ ಎಂದು ತಡೆಹಿಡಿದಿದೆ. ಖಜಾನೆಯಲ್ಲಿ ಬಿಡಿಗಾಸೂ ಇಲ್ಲದಿರುವಾಗ ಇಂತಹ ಭಾರಿ ಮೊತ್ತದ ಸುಳ್ಳು ಭರವಸೆಗಳನ್ನು ನೀಡಿ ಜನರನ್ನು ಮರುಳು ಮಾಡುತ್ತಿರುವುದು ಅಕ್ಷಮ್ಯ ಅಪರಾಧ ಎಂದು ಎನ್. ರವಿಕುಮಾರ್ ಹೇಳಿದ್ದಾರೆ.**

## ಹೊಸ ಯೋಜನೆಗೆ ಹಣ ಹೊಂದಿಸಲು ಇತರ ಇಲಾಖೆಗಳ ಅನುದಾನಕ್ಕೆ ಕತ್ತರಿ ಹಾಕಲೇಬೇಕು

**ಹಣಕಾಸು ಕಾರ್ಯದರ್ಶಿಗಳ ಟಿಪ್ಪಣಿಯ ಪ್ರಕಾರ, ಹೊಸ ಯೋಜನೆಗೆ ಹಣ ಹೊಂದಿಸಬೇಕಾದರೆ ಇತರ ಇಲಾಖೆಗಳ ಅನುದಾನಕ್ಕೆ ನೇರ ಕತ್ತರಿ ಹಾಕಲೇಬೇಕು. ರಾಜಕೀಯ ಪ್ರಚಾರದ 1,000 ಕೋಟಿಯ "ಭಾರತ ಜೋಡೋ ಯೂತ್‌ಕ್ಲಬ್" ನಂತಹ ತಲೆಬುಡವಿಲ್ಲದ ಯೋಜನೆಗಳಿಗೆ ಹಣ ಹೊಂದಿಸಲು ಬಡವರ, ರೈತರ ಮತ್ತು ಹಿಂದಿನ ಸರ್ಕಾರದ ಜನಪರ ಯೋಜನೆಗಳನ್ನು ಬಂದ್ ಮಾಡಲು ಈ ಸರ್ಕಾರ ಸಂಚು ರೂಪಿಸಿದೆ ಎಂದು ರವಿಕುಮಾರ್ ಆರೋಪಿಸಿದ್ದಾರೆ.**

# ಅಧಿಕಾರಿಗಳಿಗೆ ಗೌರವಯುತವಾಗಿ ಲಂಚದ ವಿಶೇಷ ಅಂಚೆಚೀಟಿ ಬಿಡುಗಡೆ ಮಾಡಿದ ಬಿಜೆಪಿ

**ವಿವಾದಕ್ಕೆ ಕಾರಣವಾದ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿಕೆ**

**ಬೆಂಗಳೂರು, ಸೆ.22:** ಲಂಚದ ವಿಷಯವಾಗಿ ಅಧಿಕಾರಿಗಳಿಗೆ ಗೌರವಯುತವಾಗಿ ಕೊಡೋದು ನಿಮ್ಮ ಧರ್ಮ ಎಂಬ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರ ಹೇಳಿಕೆ ಇದೀಗ ತೀವ್ರ ವಿವಾದಕ್ಕೆ ಕಾರಣವಾಗಿದೆ.

ಶಿವಲಿಂಗೇಗೌಡ ಅವರ ಹೇಳಿಕೆಯನ್ನೇ ಅಸ್ತ್ರವಾಗಿಸಿಕೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿರುವ ಪ್ರತಿಪಕ್ಷ ಬಿಜೆಪಿ, 'ಗೌರವಯುತ ಲಂಚದ ವಿಶೇಷ ಅಂಚೆ ಚೀಟಿಯನ್ನು ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ.

ಶಿವಲಿಂಗೇಗೌಡ ಅವರ ಫೋಟೋ ಇರುವ ಅಂಚೆ ಚೀಟಿಯನ್ನು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಕರ್ನಾಟಕ ಬಿಜೆಪಿ, "ಲಂಚವನ್ನು ಗೌರವಯುತ"ವಾಗಿ ಕೊಡಬೇಕು ಎಂದು ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಲಿಖಿತ ನಿಯಮ ಜಾರಿಗೊಳಿಸಿದೆ.

ಹಾಗೇ ಸರ್ಕಾರ ನೂರು ದಿನ ಪೂರೈಸಿದ ಸಂದರ್ಭ ವಿಶೇಷ ಅಂಚೆ ಚೀಟಿ ಬಿಡುಗಡೆ ಮಾಡಿ, ಲಂಚಾವತಾರಕ್ಕೆ ಪ್ರೋತ್ಸಾಹ ನೀಡಬಹುದು! ಎಂದು ಕಿಡಿ ಕಾರಿದೆ.

ಹಾಸನ ಜಿಲ್ಲೆಯ ಪ್ರಜಾ ಸೇವಾ ಕಾರ್ಯಕ್ರಮದಲ್ಲಿ ಸಚಿವ ಶಿವಲಿಂಗೇಗೌಡ ಅವರು ಲಂಚದ ವಿಚಾರಕ್ಕೆ ಎಡವಟ್ಟು ಹೇಳಿಕೆ ನೀಡಿ ವಿವಾದವನ್ನು ಮೈ ಮೇಲೆ ಎಳೆದುಕೊಂಡಿದ್ದಾರೆ. ವಿಪಕ್ಷಗಳಿಗೆ ಇದೇ ಅಸ್ತ್ರವಾಗಿದೆ. ಇನ್ನು ಮೈಸೂರಿನ ವಾಯ್ಸ್ ಆಫ್ ಪೀಪಲ್ ಸಂಸ್ಥೆಯಿಂದ ಸಚಿವ ಶಿವಲಿಂಗೇಗೌಡ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಹ ನೀಡಿದೆ.

# ಪ್ರದೋಷ್ ಮಾಫಿಸಾಕ್ಷಿ ಪ್ರಶ್ನಿಸಿ ಹೈಕೋರ್ಟ್ ಮೊರೆಹೋದ ವಿಜಯಲಕ್ಷ್ಮೀ ದರ್ಶನ್

**ಬೆಂಗಳೂರು, ಸೆ.22:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರದೋಷ್ ಮಾಫಿ ಸಾಕ್ಷಿ ಆದೇಶವನ್ನು ಪ್ರಶ್ನಿಸಿ ನಟ ದರ್ಶನ್ ತೂಗುದೀಪ ಪರವಾಗಿ ಅವರ ಪತ್ನಿ ವಿಜಯಲಕ್ಷ್ಮೀ ಇಂದು ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ. ಪ್ರಕರಣದಲ್ಲಿ 14ನೇ ಆರೋಪಿ ಯಾಗಿರುವ ಪ್ರದೋಷ್ ಮಾಫಿ ಸಾಕ್ಷಿಯಾಗಲು ವಿಚಾರಣಾ ನ್ಯಾಯಾಲಯವು ಅನುಮತಿ ನೀಡಿ ಆದೇಶ ಹೊರಡಿಸಿತ್ತು. ಈ ಆದೇಶವನ್ನು ರದ್ದುಪಡಿಸಬೇಕೆಂದು ದರ್ಶನ್ ಪರವಾಗಿ ಇದೀಗ ಮತ್ತೊಮ್ಮೆ ಹೈಕೋರ್ಟ್‌ಗೆ ಮನವಿ ಮಾಡಲಾಗಿದೆ.

ನಟ ದರ್ಶನ್ ವಿರೋಧಿಗಳ ಪ್ರಭಾವ ಮತ್ತು ಚಿತಾವಣೆಗೆ ಒಳಗಾಗಿ, ಪ್ರದೋಷ್ ತಮ್ಮ ಸ್ವಾರ್ಥಕ್ಕಾಗಿ ಮಾಫಿಸಾಕ್ಷಿಯಾಗಲು ಅರ್ಜಿ ಸಲ್ಲಿಸಿದ್ದಾರೆ. ಕಳೆದ 2 ವರ್ಷಗಳಿಂದ ಯಾವುದೇ ಅರ್ಜಿ ಸಲ್ಲಿಸದೆ, ಈಗ ದಿಢೀರನೆ ಮಾಫಿ ಸಾಕ್ಷಿಯಾಗಲು ಮುಂದಾಗಿರುವುದು ಅನುಮಾನಾಸ್ಪದವಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.



ಸದ್ಯ ಜೈಲಿನಲ್ಲಿರುವ ಪ್ರದೋಷ್ ಅನಧಿಕೃತವಾಗಿ ಮೊಬೈಲ್ ಬಳಸಿ ತಮ್ಮ ಪತ್ನಿಯೊಂದಿಗೆ ಸಂಪರ್ಕದಲ್ಲಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಅವರ ವಿರುದ್ಧ ಎನ್‌ಸಿಆರ್ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಕೂಡ ಅರ್ಜಿಯಲ್ಲಿ ತಿಳಿಸಲಾಗಿದೆ.

ಈ ಅನಧಿಕೃತ ಮೊಬೈಲ್ ಅನ್ನೇ ಬಳಸಿ ಮಾಫಿ ಸಾಕ್ಷಿಯಾಗಲು ಒಪ್ಪಿದ್ದಾರೆ ಎಂಬ ಶಂಕೆ ವ್ಯಕ್ತವಾಗಿದೆ. ಈ ವಿಚಾರವಾಗಿ ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಮೆಮೊವನ್ನು ಪರಿಗಣಿಸದೆ ಆದೇಶ ಹೊರಡಿಸಲಾಗಿದ್ದು, ಮಾಫಿಸಾಕ್ಷಿಗೆ ಒಪ್ಪಿಗೆ ನೀಡಿರುವ ಆದೇಶವನ್ನು ರದ್ದುಗೊಳಿಸಬೇಕು ಎಂದು ಮನವಿ ಮಾಡಲಾಗಿದೆ.

ಪವಿತ್ರಾಗೌಡ ಅವರಿಗೆ ಇನ್‌ಸ್ಟಾಗ್ರಾಂನಲ್ಲಿ ಅಶ್ಲೀಲ ಸಂದೇಶ ಕಳುಹಿಸಿದ ಆರೋಪದಲ್ಲಿ 2024ರ ಜೂನ್‌ನಲ್ಲಿ ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಬೆಂಗಳೂರಿನ ಪಟ್ಟಣಗೆರೆ ಶೆಡ್‌ಗೆ ಕರೆತಂದು ಬರ್ಬರವಾಗಿ ಹಲ್ಲೆ ನಡೆಸಿ, ಹತ್ಯೆ ಮಾಡಲಾಗಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಒಟ್ಟು 17 ಆರೋಪಿಗಳನ್ನು ಪೊಲೀಸರು ಬಂಧಿಸಿ ತನಿಖೆ ನಡೆಸಿದ್ದರು.

ಸಾಕ್ಷ್ಯ ನಾಶ ಹಾಗೂ ಹಣಕಾಸಿನ ವ್ಯವಹಾರಕ್ಕೆ ನೆರವಾಗಿದ್ದ ಆರೋಪ ಎದುರಿಸುತ್ತಿರುವ ಪ್ರಕರಣದ 14ನೇ ಆರೋಪಿ ಪ್ರದೋಷ್, ಇತ್ತೀಚೆಗಷ್ಟೇ ತಾವು ಪ್ರಕರಣದ ಸಂಪೂರ್ಣ ಸತ್ಯಾಸತ್ಯತೆಯನ್ನು ಕೋರ್ಟ್ ಮುಂದೆ ಬಹಿರಂಗಪಡಿಸುವುದಾಗಿ ಹೇಳಿ ಮಾಫಿಸಾಕ್ಷಿಯಾಗಲು ಅರ್ಜಿ ಸಲ್ಲಿಸಿದ್ದರು. ಇದನ್ನು ಬೆಂಗಳೂರಿನ ಸಿಸಿಎಚ್ ನ್ಯಾಯಾಲಯ ಪುರಸ್ಕರಿಸಿತ್ತು.

# ಕಾರು ತೆರವುಗೊಳಿಸಿದ ಡಿಸಿಪಿ ವಿರುದ್ಧ ಕಿಡಿಕಾರಿದ ಸಿದ್ದರಾಮಯ್ಯ

**ಬೆಂಗಳೂರು, ಸೆ.22:** ವಿಧಾನಸೌಧದ ಪಶ್ಚಿಮದ್ವಾರದ ಕೆಂಗಲ್ ಗೇಟ್ ಬಳಿ ನಿಲ್ಲಿಸಿದ್ದ ತಮ್ಮ ಕಾರನ್ನು ಅಲ್ಲಿಂದ ತೆಗೆಸಿ ಪಾರ್ಕಿಂಗ್ ಸ್ಥಳಕ್ಕೆ ಕಳುಹಿಸಿದ್ದಕ್ಕೆ ತೀವ್ರ ಆಕ್ರೋಶಗೊಂಡ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ಡಿಸಿಪಿ ಯೋಗೇಶ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ವಿಧಾನಸೌಧದಲ್ಲಿ ನಡೆಯುತ್ತಿರುವ ವಿಶೇಷ ಅಧಿವೇಶನದಲ್ಲಿ ಭಾಗವಹಿಸಿದ ನಂತರ, ಮಧ್ಯಾಹ್ನದ ಊಟಕ್ಕಾಗಿ ತಮ್ಮ ಅಧಿಕೃತ ನಿವಾಸವಾದ 'ಕಾವೇರಿ'ಗೆ ತೆರಳಲು ಸಿದ್ದರಾಮಯ್ಯ ಹೊರಟಿದ್ದರು. ಈ ವೇಳೆ ಕೆಂಗಲ್ ಗೇಟ್ ಬಳಿ ನಿಲ್ಲಿಸಲಾಗಿದ್ದ ಅವರ ಕಾರನ್ನು ಡಿಸಿಪಿ ಸೂಚನೆಯ ಮೇರೆಗೆ ಸ್ಥಳಾಂತರಿಸಲಾಗಿತ್ತು. ಹೀಗಾಗಿ ಕಾರು ವಾಪಸ್ ಬರುವವರೆಗೆ ಸಿದ್ದರಾಮಯ್ಯ ಗೇಟ್ ಬಳಿ ಕಾದು ನಿಂತರು. ನಂತರ ಸಿದ್ದರಾಮಯ್ಯ ಅವರು, ಡಿಸಿಪಿ ಯೋಗೇಶ್ ಅವರನ್ನು ಕರೆಸಿ, ವಾಹನವನ್ನು ಸ್ಥಳಾಂತರಿಸಿದ ನಿರ್ಧಾರದ ಬಗ್ಗೆ



ಪ್ರಶ್ನಿಸಿದರು. ಮೂಲಗಳ ಪ್ರಕಾರ, ಸಿದ್ದರಾಮಯ್ಯ ಅವರು ಪೊಲೀಸ್ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡು, ಅನಗತ್ಯವಾಗಿ ಸಮಸ್ಯೆಗಳನ್ನು ಸೃಷ್ಟಿಸದಂತೆ ಸೂಚಿಸಿದರು. 'ನಿಮ್ಮ ವಿರುದ್ಧ ಪ್ರಕರಣವೊಂದು ಇದೆ ಎಂಬುದು ನಿಮಗೆ ತಿಳಿದಿದೆಯಾ' ಎಂದು ಹೇಳಿದರಲ್ಲದೇ, 'ಅನಗತ್ಯ ಕೆಲಸಗಳನ್ನು ಮಾಡಬೇಡಿ. ಎಚ್ಚರಿಕೆಯಿಂದಿರಿ' ಎಂದು ಅವರು ಡಿಸಿಪಿಗೆ ಎಚ್ಚರಿಸಿದ್ದಾಗಿ ವರದಿಯಾಗಿದೆ.

ಇದಕ್ಕೆ ಪ್ರತಿಕ್ರಿಯೆಯಾಗಿ ಡಿಸಿಪಿ "ಕ್ಷಮಿಸಿ ಸರ್" ಎಂದು ಕ್ಷಮೆಯಾಚಿಸಿದರು. ಹೀಗಾಗಿ ವಿಷಯವು ಅಲ್ಲಿಗೆ ಮುಕ್ತಾಯಗೊಂಡಿತು. ಈ ಮಧ್ಯೆ ಗೃಹಸಚಿವ ಪ್ರಿಯಾಂಕ್ ಖರ್ಗೆ ಸಹ ಸಿದ್ದರಾಮಯ್ಯ ಅವರಿದ್ದ ವಿಧಾನಸೌಧದ ಗೇಟ್ ಬಳಿಗೆ ಧಾವಿಸಿ ಭೇಟಿಮಾಡಿ ಸಮಾಧಾನಪಡಿಸಿದರು.

ನಂತರ ಪಶ್ಚಿಮ ದ್ವಾರದ ಹತ್ತಿರವೇ ವಾಹನ ನಿಲುಗಡೆಗೆ ಅವಕಾಶ ನೀಡಲಾಗುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಕೆಐಎಯಲ್ಲಿ ಕಸ್ಟಮ್ಸ್ ಅಧಿಕಾರಿಗಳ ಕಾರ್ಯಾಚರಣೆ: ಆರು ಪ್ರಯಾಣಿಕರ ಸೆರೆ

**28 ಕೋಟಿ ರೂ. ಮೌಲ್ಯದ ಹೈಡ್ರೋಫೋನಿಕ್ ಗಾಂಜಾ, 1.75 ಕೋಟಿ ರೂ. ಮೌಲ್ಯದ ಚಿನ್ನಾಭರಣ ವಶ**

**ಬೆಂಗಳೂರು, ಸೆ.22:** ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸುಮಾರು 28 ಕೋಟಿ ರೂ. ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಹಾಗೂ 1.75 ಕೋಟಿ ರೂ. ಮೌಲ್ಯದ ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ.

ಬ್ಯಾಂಕಾಕ್ ಮತ್ತು ವಿಯೆಟ್ನಾಂ ನಿಂದ ಬಂದ ಪ್ರಯಾಣಿಕರಿಂದ 80.11 ಕೆಜಿ ಹೈಡ್ರೋಪೋನಿಕ್ ಗಾಂಜಾ ಜಪ್ತಿ ಮಾಡಲಾಗಿದೆ. ಈ ಸಂಬಂಧ ಒಟ್ಟು ನಾಲ್ಕು ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದು, ವಶಪಡಿಸಿಕೊಂಡ ಮಾದಕ ವಸ್ತುವಿನ ಮಾರುಕಟ್ಟೆ ಮೌಲ್ಯ ಸುಮಾರು 28 ಕೋಟಿ ರೂ. ಎಂದು ಅಂದಾಜಿಸಲಾಗಿದೆ.

ಇದೇ ವೇಳೆ ಅಬುಧಾಬಿ ಹಾಗೂ ಕೌಲಾಲಂಪುರ ದಿಂದ ಆಗಮಿಸಿದ್ದ ಪ್ರಯಾಣಿಕರಿಂದ 1.2 ಕೆಜಿ ಚಿನ್ನ ವಶಪಡಿಸಿಕೊಳ್ಳಲಾಗಿದೆ.


ಜಪ್ತಿ ಮಾಡಿದ ಚಿನ್ನದ ಮೌಲ್ಯ ಸುಮಾರು 1.75 ಕೋಟಿ ರೂ. ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಎರಡೂ ಕಾರ್ಯಾಚರಣೆಗಳಿಗೆ ಸಂಬಂಧಿಸಿದಂತೆ ಒಟ್ಟು ಆರು ಪ್ರಯಾಣಿಕರನ್ನು ಬಂಧಿಸಲಾಗಿದ್ದು, ಕಸ್ಟಮ್ಸ್ ಅಧಿಕಾರಿಗಳು ಮುಂದಿನ ತನಿಖೆ ಮುಂದುವರೆಸಿದ್ದಾರೆ.

# ಬೆಂಗಳೂರಿನಲ್ಲಿ ಜಿಟಿಜಿಟಿ ಮಳೆ

**ಬೆಂಗಳೂರು, ಸೆ.22:** ರಾಜಧಾನಿ ಬೆಂಗಳೂರಿನ ವಿವಿಧೆಡೆ ಸೋಮವಾರ ಸಂಜೆ ಏಕಾಏಕಿ ಹಠಾತ್ ಧಾರಾಕಾರ ಮಳೆಯಾಗಿದ್ದು, ಪ್ರಮುಖ ರಸ್ತೆಗಳಲ್ಲಿ ಭಾರಿ ಮಳೆ ನೀರು ನಿಂತು ಎಲ್ಲಾ ವಾಹನ ಸವಾರರು ತೀವ್ರವಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಯಿತು. ಮುಂಜಾನೆಯಿಂದಲೇ ಬಿಸಿಲಿನ ತಾಪಕ್ಕೆ ಹಾಗೂ ಸೆಕೆಗೆ ತೀವ್ರವಾಗಿ ತತ್ತರಿಸಿದ್ದ ಸಿಲಿಕಾನ್ ಸಿಟಿಯ ಜನತೆಗೆ ಸಂಜೆಯಾಗುತ್ತಿದ್ದಂತೆ ದಿಢೀರನೆ ಸುರಿದ ತುಂತುರು ಮಳೆಯ ಸಿಂಚನವು ತಂಪೆರೆದಿದೆ. ಆ ಮೂಲಕ ಉಷ್ಣಾಂಶದಿಂದ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.ಮಳೆಯಿಂದಾಗಿ ವಾಹನ ದಟ್ಟಣೆ ಹೆಚ್ಚಾಗಿ, ಸವಾರರು ಪರದಾಡುವಂತಾಗಿತ್ತು.

ದ್ವಿಚಕ್ರ ವಾಹನ ಸವಾರರು ಅನಿವಾರ್ಯವಾಗಿ ಮೇಲ್ಸೇತುವೆ ಕೆಳಗೆ, ಮರದ ಕೆಳಗೆ ಹಾಗೂ ಬಸ್ ನಿಲ್ದಾಣಗಳ ಮೊರೆ ಹೋದ ದೃಶ್ಯಗಳು ಕಂಡುಬಂದವು.





ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ಗುಜರಾತ್‌ನ ಕೆವಾಡಿಯಾದಲ್ಲಿ ನಡೆದ ಸಮಾರಂಭದಲ್ಲಿ ಹಿರಿಯ ನಟ ಅನಂತನಾಗ್ ಅವರಿಗೆ 2024ನೇ ಸಾಲಿನ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

### ಶರಣ ತತ್ವ ಚಿಂತನಾ ಸಮಾವೇಶ,

## ಶರಣರ ಕಾಯಕ ತತ್ವಗಳು ಸರ್ವಕಾಲಿಕ ದಾರಿದೀಪ: ಡಾ.ಕೆ.ಎಸ್. ನಾಯಕ

**ಕಲಬುರಗಿ, ಸೆ. 22 :** ಹನ್ನೆರಡನೆಯ ಶತಮಾನದಲ್ಲಿ ವಿಶ್ವಗುರು ಬಸವಣ್ಣ ನವರ ನೇತೃತ್ವದಲ್ಲಿ ನಡೆದ ಕಲ್ಯಾಣ ಕ್ರಾಂತಿ ಮತ್ತು ಶರಣರ ವೈಚಾರಿಕತೆ ಕೇವಲ ಆ ಕಾಲಕ್ಕೆ ಸೀಮಿತವಾಗಿರದೆ, ಸರ್ವಕಾಲಿಕ ದಾರಿದೀಪವಾಗಿದೆ. ಯಾವುದೇ ಕೆಲಸ ಕೀಳಲ್ಲ. ಪ್ರತಿಯೊಬ್ಬರೂ ಶ್ರಮ ವಹಿಸಿ ದುಡಿಯಬೇಕು. ಕಾಯಕವೇ ಕೈಲಾಸ ಎಂಬುದು ಶರಣರ ತತ್ವ ಆಗಿತ್ತು. ಅವರು ಅದರಂತೆಯೇ ನಡೆದುಕೊಂಡರು. ಅವರೆಂದೂ ತಮ್ಮ ವೃತ್ತಿಯನ್ನು ಬಿಟ್ಟುಕೊಡಲಿಲ್ಲ. ವೃತ್ತಿಯೊಂದಿಗೆ ವಚನ ಪ್ರವೃತ್ತಿಯ ಮೂಲಕ ಸಮಾಜಕ್ಕೆ ಮಾರ್ಗದರ್ಶನ ಮಾಡಿದರು ಎಂದು ಹಿರಿಯ ಸಾಹಿತಿ ಡಾ.ಕೆ.ಎಸ್.ನಾಯಕ ಹೇಳಿದರು.



ನಗರದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಕರ್ನಾಟಕ ವಚನ ಸಾಹಿತ್ಯ ಅಕಾಡೆಮಿಯ 13ನೇ ವರ್ಷಾಚರಣೆ ನಿಮಿತ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ ವಿಶ್ವ ವೈಚಾರಿಕ ದರ್ಶನದಂತಿರುವ ಶರಣತತ್ವ ಚಿಂತನಾ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮಲ್ಲಿನ ಸ್ವಾರ್ಥವನ್ನು ಬಿಟ್ಟು ಸಾಮಾಜಿಕ ಜವಾಬ್ದಾರಿಯ ಅರಿವನ್ನು ಮೂಡಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ರಚನಾತ್ಮಕ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಅವರು ಸಮ್ಮೇಳನಗಳ ಸರದಾರರೆಂದು ಎನಿಸಿಕೊಂಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಬಸವಾದಿ ಶರಣರು ಯಾವುದೇ ಒಂದು ಜಾತಿ-ಸಮುದಾಯಕ್ಕೆ ಸೀಮಿತ ವಾದವರಲ್ಲ. ಅವರು ಎಲ್ಲವನ್ನೂ ಮೀರಿದವರಾಗಿದ್ದಾರೆ. ಸಮಾಜದ ಪರಿವರ್ತನೆಗೆ ಅವರ ವಚನಗಳು ದಿವ್ಯ ಔಷಧಿಯಾಗಿವೆ. ಇದನ್ನು ಅರಿಯಬೇಕಾದರೆ ಎಲ್ಲ ಶರಣರ ವಚನಗಳನ್ನು ಅಧ್ಯಯನ ಮಾಡಿ ಅವುಗಳಲ್ಲಿನ ಮೌಲ್ಯಗಳನ್ನು ಜೀವನದಲ್ಲಿ ದಾರಿದೀಪವಾಗಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದ ಅವರು, ವಚನಗಳು ಕಂಠಪಾಠವಾಗಿ ಹೇಳುವುದರ ಜತೆಗೆ ವಚನಗಳಂತೆ ನಮ್ಮ ಬದುಕನ್ನು ಕಟ್ಟಿಕೊಳ್ಳಬೇಕೆಂದರು.

### ಡಿಎಚ್‌ಓ ಡಾ.ಧ್ಯಾನೇಶ್ವರ ನಿರಗುಡೆ ಮೇಲೆ ಒತ್ತಡ ಹೇರಿಕೆ

## ಟಿಎಚ್‌ಓ ಡಾ.ಅಶೋಕ ಮೈಲಾರೆ ಅಮಾನತು ಹಿಂಪಡೆಯಲು ಆಗ್ರಹ

**ಭಾಲ್ಕಿ, ಸೆ. 22:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಧ್ಯಾನೇಶ್ವರ ನಿರಗುಡೆ, ಬಸವಕಲ್ಯಾಣ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಶೋಕ ಮೈಲಾರೆ ಅವರ ಅಮಾನತು ಆದೇಶ ಹಿಂಪಡೆದು, ಅವರನ್ನು ಕರ್ತವ್ಯಕ್ಕೆ ಮರು ನಿಯೋಜಿಸುವಂತೆ ಸಕಲ ಮರಾಠಾ ಸಮಾಜದ ಮುಖಂಡರು ಪ್ರತಿಭಟನೆ ನಡೆಸಿದರು.

ಆರೋಗ್ಯ ಸಚಿವ ಯುಟಿ ಖಾದರ ಅವರು ಜಿಲ್ಲೆಗೆ ಆಗಮಿಸಿದಾಗ ಪೋಸ್ಟರ್‌ನಲ್ಲಿ ಚಿತ್ರ ಹಾಕುವ ಕುರಿತು ಶಿಷ್ಟಾಚಾರ ಉಲ್ಲಂಘಿಸಿದ್ದಾರೆಂದು ಈ ಇಬ್ಬರೂ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು. ಹಿರಿಯ ಅಧಿಕಾರಿಗಳ ಅನುಮತಿಸಿದ ನಂತರವೇ ಈ ಎಲ್ಲ ಸಿದ್ಧತೆ ನಡೆಯುತ್ತದೆ. ಇವರನ್ನು ಬಲಿಪಶು ಮಾಡಲಗಿದೆ ಎಂದು ಪಟ್ಟಣದ ಶಿವಾಜಿ ವೃತ್ತದಲ್ಲಿ ಮುಖಂಡರಾದ




ಕಿರಣ ಬಿರಾದಾರ ರಾಮತೀರ್ಥವಾಡಿ, ಜನಾರ್ದನ ಬಿರಾದಾರ, ದಿಗಂಬರರಾವ್ ಮಾನಕಾರಿ ಅವರ ನೇತೃತ್ವದಲ್ಲಿ ಸಕಲ ಮರಾಠಾ ಸಮಾಜದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮರಾಠಾ ಸಮಾಜದ ನೌಕರರಿಗೆ ತುಂಬಾ ತೊಂದರೆ ಯಾಗುತ್ತಿದೆ. ಕಾರ್ಯಕ್ರಮದಲ್ಲಿ ರಾಜಕೀಯ ನಾಯಕರ ಭಾವಚಿತ್ರ ಬ್ಯಾನರ್‌ನಲ್ಲಿ ಅಳವಡಿಸಿಲ್ಲ ಎನ್ನುವ ಕ್ಷುಲ್ಲಕ ಕಾರಣಕ್ಕೆ ಮರಾಠಾ ಸಮಾಜದ ದಕ್ಷ ಅಧಿಕಾರಿಗಳನ್ನು ಅಮಾನತು ಮಾಡಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಡಿಎಚ್‌ಒ ಡಾ.ಧ್ಯಾನೇಶ್ವರ ನಿರಗುಡೆ ಪ್ರಾಮಾಣಿಕ ಹಾಗೂ ದಕ್ಷ ಅಧಿಕಾರಿ. ಜಿಲ್ಲೆಯ ಆರೋಗ್ಯ ವ್ಯವಸ್ಥೆಯನ್ನು ಉತ್ತಮ ವಾಗಿ ನಿರ್ವಹಿಸುತ್ತಿದ್ದಾರೆ. ಬಸವಕಲ್ಯಾಣ ತಾಲ್ಲೂಕಿನಲ್ಲಿ ನಡೆದ ಕಾರ್ಯಕ್ರಮದ ಬ್ಯಾನರ್‌ನಲ್ಲಿ ರಾಜಕೀಯ ಮುಖಂಡರ ಭಾವಚಿತ್ರ ಅಳವಡಿಕೆಗೆ ಸಂಬಂಧಿಸಿದ ವಿಷಯದ ಹಿನ್ನಲೆ ಇಬ್ಬರು ವೈದ್ಯ ಅಧಿಕಾರಿ ಗಳನ್ನು ಅಮಾನತುಗೊಳಿಸಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

## ಬರಗಾಲ ಬೆಳೆ ಸಮೀಕ್ಷೆ, ಸಮರ್ಪಕವಾಗಿ ನಡೆಸಿ, ರೈತರಿಗೆ ಪರಿಹಾರಕ್ಕೆ ಜಿಇಪಂ ಸಿಇಓ ಸೂಚನೆ



**ರಾಯಚೂರು, ಸೆ. 22:** ಜಿಲ್ಲೆಯಲ್ಲಿ ತೀವ್ರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಬೆಳೆ ಸಮೀಕ್ಷೆಯನ್ನು ಸಮರ್ಪಕ ಹಾಗೂ ನಿಗದಿತ ಕಾಲಮಿತಿಯೊಳಗೆ ನಡೆಸಿ, ಅರ್ಹ ರೈತರಿಗೆ ಸರ್ಕಾರದ ಪರಿಹಾರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅಧಿಕಾರಿಗಳಿಗೆ ಸೂಚಿಸಿದರು.

ಮಳೆ ಕೊರತೆಯಿಂದ ಬಿತ್ತನೆ ಮಾಡಿರುವ ಬೆಳೆಗಳು ಒಣಗಿದ್ದು, ರೈತರು ತೀವ್ರ ನಷ್ಟ ಅನುಭವಿಸುತ್ತಿದ್ದಾರೆ. ಹೀಗಾಗಿ ಸರ್ಕಾರ ನಿಗದಿಪಡಿಸಿರುವ ಕಾಲಮಿತಿಯೊಳಗೆ ಬೆಳೆಸಮೀಕ್ಷೆ ಪೂರ್ಣಗೊಳಿಸಿ ದಾಖಲಿಸಬೇಕು. ವಿಳಂಬವಾದರೆ ರೈತರು ಉಳಿದ ಬೆಳೆಯನ್ನು ರಾಶಿ ಮಾಡುವ ಸಾಧ್ಯತೆಯಿದ್ದು, ನಂತರ ಸಮೀಕ್ಷೆ ನಡೆಸಲು ಸಾಧ್ಯವಾಗುವುದಿಲ್ಲ. ಅಧಿಕಾರಿಗಳು ತಕ್ಷಣ ಕಾರ್ಯ ಪ್ರವೃತ್ತರಾಗಬೇಕು ಎಂದರು.

ಬೆಳೆಸಮೀಕ್ಷೆ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಪಂ ಸಿಬ್ಬಂದಿಯನ್ನು ನಿಯೋಜಿಸುವ ಬದಲು ಕಂದಾಯ ಇಲಾಖೆ ಹಾಗೂ ಬೆಳೆವಿಮೆ ಏಜೆನ್ಸಿಯ ಸಿಬ್ಬಂದಿಯೊಂದಿಗೆ 4–5 ಜಮೀನುಗಳಿಗೆ ತೆರಳಿ ಪರಿಶೀಲನೆ ನಡೆಸಬೇಕು. ರೈತರು ಯಾವುದೇ ಬೆಳೆಬಿತ್ತನೆ ಮಾಡದಿದ್ದಲ್ಲಿ ಅಂತಹ ಪ್ರದೇಶವನ್ನು 'ಬಿತ್ತನೆ ಇಲ್ಲದ ಪ್ರದೇಶ' ಎಂದು ದಾಖಲಿಸಿ ರೈತರಿಗೆ ಪ್ರಮಾಣಪತ್ರ ವಿತರಿಸಬೇಕು. ಬರದಿಂದ ಬೆಳೆ ನಷ್ಟ ಅನುಭವಿಸುತ್ತಿರುವ ರೈತರಿಗೆ ಸಾಧ್ಯವಾದಷ್ಟು ನೆರವು ದೊರೆಯುವಂತೆ ಅಧಿಕಾರಿಗಳು ಸಹಕರಿಸಬೇಕು ಎಂದರು.

ಜಿಲ್ಲೆಯಾದ್ಯಂತ 15 ದಿನಗಳೊಳಗೆ ಮನೆ ಮನೆಗೆ ತೆರಳಿ ಶೌಚಾಲಯ ಸಮೀಕ್ಷೆ ನಡೆಸಬೇಕು. ಜಿಲ್ಲಾ ಪಂಚಾಯಿತಿಯಿಂದ ನೀಡಲಾಗುವ ಪ್ರಶ್ನಾವಳಿಯ ಮೂಲಕ ಸಾರ್ವಜನಿಕರಿಂದ ಅಗತ್ಯ ಮಾಹಿತಿ ಸಂಗ್ರಹಿಸಬೇಕು. ಅಕ್ಟೋಬರ್ 2ರೊಳಗೆ ಸಮೀಕ್ಷೆ ಪೂರ್ಣಗೊಳಿಸಬೇಕು. 'ಸ್ವಚ್ಛತಾ ಹೀ ಸೇವಾ' ಘೋಷವಾಕ್ಯದಡಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು

ಸಭೆಯಲ್ಲಿ ಬೆಂಕಿ ಅವಘಡ, ಪ್ರವಾಹ ಸೇರಿದಂತೆ ಪ್ರಾಕೃತಿಕ ವಿಕೋಪಗಳ ಸಂದರ್ಭದಲ್ಲಿ ಜನರ ರಕ್ಷಣೆಗೆ ಬಳಸುವ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಕಿಟ್‌ಗಳನ್ನು ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ ಸಾಂಕೇತಿಕವಾಗಿ ವಿತರಿಸಲಾಯಿತು.

## ನೈಸ್ ಯೋಜನೆಯ ರೈತರ ಭೂಮಿ ಮರಳಿಸಲು ಕೊಡಲು ಆಗ್ರಹಿಸಿ ಸಿಪಿಎಂ ಹೋರಾಟ




**ರಾಯಚೂರು, ಸೆ. 22:** ನೈಸ್ ಯೋಜನೆಗೆ ಸಂಬಂಧಿಸಿದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ಜಾರಿಗೊಳಿಸಬೇಕು, ಭೂಮಿ ಕಳೆದುಕೊಂಡ ರೈತರಿಗೆ ಜಮೀನು ವಾಪಸ್ ನೀಡಬೇಕು ಹಾಗೂ ನೈಸ್ ಸಂಸ್ಥೆಯ ಟೋಲ್ ಸಂಗ್ರಹವನ್ನು ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿ ಸಿಪಿಐಎಂ ರಾಯಚೂರು ತಾಲೂಕು ಸಮಿತಿ ವತಿಯಿಂದ ಪ್ರತಿಭಟನೆ ನಡೆಯಿತು.

ನಗರದ ಗಾಂಧಿ ವೃತ್ತದಲ್ಲಿ ಮಧ್ಯಾಹ್ನ ನಡೆದ ಪ್ರತಿಭಟನೆಯಲ್ಲಿ ಸಿಪಿಐಎಂ ಕಾರ್ಯಕರ್ತರು ಹಾಗೂ ರೈತರು ಪಾಲ್ಗೊಂಡು ಸರ್ಕಾರದ ಕ್ರಮದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವೀರೇಶ, ಜುಲೈ 29ರಂದು ಕರ್ನಾಟಕ ಹೈಕೋರ್ಟ್ ನೀಡಿರುವ ತೀರ್ಪಿನ ಅನ್ವಯ ನೈಸ್ ಯೋಜನೆಗೆ ಸಂಬಂಧಿಸಿದ ಭೂಮಿಯನ್ನು ರೈತರಿಗೆ ಮರಳಿಸುವ ಹಾಗೂ ಅಕ್ರಮ ಟೋಲ್ ಸಂಗ್ರಹವನ್ನು ನಿಲ್ಲಿಸುವ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ನೈಸ್ ವಿರುದ್ಧ ಹೋರಾಟ ನಡೆಸುತ್ತಿರುವ ರೈತರು ಮತ್ತು ಕಾರ್ಮಿಕ ಸಂಘಟನೆಗಳ ಮುಖಂಡರನ್ನು ಬಂಧಿಸುವ ಮೂಲಕ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಆರೋಪಿಸಿದರು. ಕರ್ನಾಟಕ ಪ್ರಾಂತ ರೈತಸಂಘದ ರಾಜ್ಯ ಅಧ್ಯಕ್ಷ ಯು. ಬಸವರಾಜ, ಪ್ರಧಾನ ಕಾರ್ಯದರ್ಶಿ ಯಶವಂತ ಹಾಗೂ ಮುಖಂಡರಾದ ವೆಂಕಟಚಲಯ್ಯ, ಮಹಾಂತೇಶ ಸೇರಿದಂತೆ ಇತರರನ್ನು ಬಂಧಿಸಿರುವುದನ್ನು ಖಂಡಿಸಿದರು.

ಹೈಕೋರ್ಟ್ ತೀರ್ಪು ಜಾರಿಗೊಳಿಸಲು ವಿಳಂಬ ಮಾಡುತ್ತಿರುವ ಸರ್ಕಾರ, ಪ್ರಜಾಸತ್ತಾತ್ಮಕವಾಗಿ ಪ್ರತಿಭಟನೆ ನಡೆಸುವ ಹಕ್ಕಿಗೂ ನಿರ್ಬಂಧ ಹೇರುತ್ತಿದೆ. ಬಂಧಿತರನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ರೈತರ ಹೋರಾಟಕ್ಕೆ ಅವಕಾಶ ನೀಡಬೇಕು ಎಂದು ವೀರೇಶ ಆಗ್ರಹಿಸಿದರು.

ನೈಸ್ ಕಂಪನಿಗೆ ಸಂಬಂಧಿಸಿದ ಹೈಕೋರ್ಟ್ ತೀರ್ಪನ್ನು ಶೀಘ್ರ ಜಾರಿಗೊಳಿಸಿ ರೈತರ ಭೂಮಿಯನ್ನು ವಾಪಸ್ ನೀಡಬೇಕು, ಟೋಲ್ ಸಂಗ್ರಹ ನಿಲ್ಲಿಸಬೇಕು ಮತ್ತು ಬಂಧಿತರನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಪ್ರತಿಭಟನಾಕಾರರು ಸರ್ಕಾರವನ್ನು ಒತ್ತಾಯಿಸಿದರು.

## ಪಿಎಸ್‌ಐಗೆ ಕಪಾಳಮೋಕ್ಷ ಕ್ಷಮೆಯಾಚಿಸಿದ ಶಾಸಕರ ಪುತ್ರಿ

**ಮಂಡ್ಯ, ಸೆ.22:** ಪಿಎಸ್‌ಐಗೆ ಕಪಾಳಮೋಕ್ಷ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಅವರ ಪುತ್ರಿ ಐಶ್ವರ್ಯಗೌಡ ಅವರು ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ವೀಡಿಯೋ ಮೂಲಕ ಬೇಷರತ್ ಕ್ಷಮೆಯಾಚಿಸಿದ್ದಾರೆ.

ಭೀಮನ ಅಮಾವಾಸ್ಯೆಯಂದು ನಾನು ಮತ್ತು ನನ್ನ ಇಬ್ಬರು ಮಕ್ಕಳೊಂದಿಗೆ ಪಾಂಡವಪುರದ ಆರತಿ ಉಕ್ಕಡ ದೇವಸ್ಥಾನಕ್ಕೆ ತೆರಳಿದ್ದೆ. ಅಂದು ದೇವಸ್ಥಾನದಲ್ಲಿ ಹೆಚ್ಚಿನ ಜನಸಂದಣಿ ಇದ್ದಿದ್ದರಿಂದ ಹಾಗೂ ನಾನು ಮಕ್ಕಳ ತಾಯಿಯಾಗಿರುವ ಕಾರಣ ದೇವರ ದರ್ಶನ ಪಡೆಯುವ



ಶ್ರೀರಂಗಪಟ್ಟಣ ತಾಲೂಕಿನ ಆರತಿ ಉಕ್ಕಡ ದೇವರ ದರ್ಶನಕ್ಕೆ ತೆರಳಿದ್ದ ಸಂದರ್ಭದಲ್ಲಿ ಗರ್ಭಗುಡಿಗೆ ಪ್ರವೇಶಿಸುವ ವಿಚಾರವಾಗಿ ಐಶ್ವರ್ಯ ಗೌಡ ಮತ್ತು ಭದ್ರತೆಗೆ ನಿಯೋಜನೆ ಗೊಂಡಿದ್ದ ಪಿಎಸ್‌ಐ ಸವಿತಾ ಪಾಟೀಲ್ ನಡುವೆ ವಾಗ್ವಾದ ನಡೆದಿತ್ತು. ಈ ವೇಳೆ ಐಶ್ವರ್ಯಗೌಡ ಅವರು ಪಿಎಸ್‌ಐಗೆ ಕಪಾಳಮೋಕ್ಷ ಮಾಡಿದ್ದು ಸುದ್ದಿಯಾಗಿತ್ತು. ಘಟನೆಗೆ ಸಂಬಂಧಿಸಿ ದಂತೆ ಕ್ಯಾತನಹಳ್ಳಿ ಪೊಲೀಸ್ ಠಾಣೆ ಯಲ್ಲಿ ಪ್ರಕರಣ ಕೂಡ ದಾಖಲಾಗಿತ್ತು.

ಪ್ರಕರಣದ ಹಿನ್ನೆಲೆಯಲ್ಲಿ ಕ್ಷಮೆಯಾಚಿಸುವಂತೆ ನ್ಯಾಯಾಲಯ ತಾಕೀತು ಮಾಡಿದ ಹಿನ್ನೆಲೆಯಲ್ಲಿ ಐಶ್ವರ್ಯಗೌಡ ಅವರು ಇದೀಗ ಬಹಿರಂಗವಾಗಿ ಕ್ಷಮೆ ಕೇಳಿದ್ದಾರೆ. ವಿಡಿಯೋದಲ್ಲಿ "ಆಗಸ್ಟ್ 12ರಂದು ಸಂದರ್ಭದಲ್ಲಿ ನನ್ನ ಮತ್ತು ಮಹಿಳಾ ಪಿಎಸ್‌ಐ ನಡುವೆ ಸಣ್ಣ ಮಾತಿನ ಚಕಮಕಿ ನಡೆಯಿತು" ಎಂದು ಐಶ್ವರ್ಯಗೌಡ ಹೇಳಿದ್ದಾರೆ.

"ಉದ್ವೇಗದಿಂದ ಅಹಿತಕರ ಘಟನೆ ನಡೆದಿದೆ. ಈ ಘಟನೆ ನಡೆಯಬಾರದಿತ್ತು. ಈ ಘಟನೆಯ ಬಗ್ಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ಇದರಿಂದ ನೋವಾಗಿದ್ದರೆ, ನಾನು ಬೇಷರತ್ ಆಗಿ ಕ್ಷಮೆಯಾಚಿಸುತ್ತೇನೆ" ಎಂದು ವೀಡಿಯೋ ಮೂಲಕ ತಿಳಿಸಿದ್ದಾರೆ. ಈ ಮೂಲಕ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಸೂಚನೆಯಂತೆ ಐಶ್ವರ್ಯಗೌಡ ಅವರು ಸಾರ್ವಜನಿಕವಾಗಿ ಕ್ಷಮೆ ಯಾಚಿಸಿದ್ದಾರೆ.

## ಬರಗಾಲ ಪರಿಸ್ಥಿತಿ: ಮಳೆಗಾಲದಲ್ಲೇ ಮಳೆಯಿಲ್ಲದೇ ಸೊರಗಿದ ಮಾಂಜ್ರಾ ನದಿ

**ಬೀದರ್, ಸೆ. 22:** ಪ್ರಸಕ್ತ ಸಾಲಿನ ಮಳೆಗಾಲದ ಋತು ಕೊನೆಗೊಳ್ಳಲು ಇನ್ನೇನು ಕೆಲವೇ ದಿನಗಳು ಬಾಕಿ ಉಳಿದಿದ್ದು, ಈ ಅವಧಿಯಲ್ಲೇ ನೀರಿಲ್ಲದೇ ಜಿಲ್ಲೆಯ ಪ್ರಮುಖ ಜಲಮೂಲಗಳು ಬಿಕೋ ಎನ್ನುತ್ತಿವೆ. ಮಳೆಗಾಲದಲ್ಲಿ ಮೈದುಂಬಿಕೊಂಡು ಹರಿಯುತ್ತಿದ್ದ ಮಾಂಜ್ರಾ ನದಿ ನೋಡುವುದೇ ಕಣ್ಣಿಗೆ ಸೊಗಸು. ಆದರೆ, ಈ ಸಲ ಅದರ ಒಡಲು ಬರಿದಾಗಿದೆ.



ಈಗಾಗಲೇ ನದಿ ಪಾತ್ರದ ಬಹುತೇಕ ಭಾಗ ಮರಳು ಹಸಿಗೆಯಂತೆ ಕಣುತ್ತಿದೆ. ನದಿಯಲ್ಲಿನ ಜಲಚರಗಳು ಸಾವನ್ನಪ್ಪುತ್ತಿವೆ. ನೀರಿಲ್ಲದ ಕಾರಣ ಈ ಸಲ ಗಣಪನ ಮೂರ್ತಿಗಳ ವಿಸರ್ಜನೆಯೂ ಸಾಧ್ಯವಾಗಲಿಲ್ಲ. ಹಾಗಾಗಿ ಜಿಲ್ಲಾಡಳಿತ ಕೃತಕ ಹೊಂಡವೊಂದನ್ನು ನಿರ್ಮಿಸಿ ಗಣೇಶ ವಿಸರ್ಜನೆಗೆ ವ್ಯವಸ್ಥೆ ಮಾಡಿತು.

ಜಿಲ್ಲೆಯ ಹುಲಸೂರ, ಭಾಲ್ಕಿ, ಕಮಲನಗರ, ಔರಾದ್ ಹಾಗೂ ಬೀದರ್ ತಾಲ್ಲೂಕುಗಳಿಗೆ ಕುಡಿಯುವ ನೀರಿನ ಪ್ರಮುಖ ಮೂಲವೇ ಈ ಮಾಂಜ್ರಾ ಜೀವ ನದಿ. ಈ ತಾಲ್ಲೂಕುಗಳ ವ್ಯಾಪ್ತಿಯಲ್ಲಿರುವ ಗ್ರಾಮಗಳ ಜನ ಈ ನದಿಯನ್ನೇ ನೆಚ್ಚಿಕೊಂಡು ಒಕ್ಕಲುತನ ಮಾಡುತ್ತಾರೆ. ಈ ನದಿ ಮೈದುಂಬಿಕೊಂಡು ಹರಿದರಷ್ಟೇ ನದಿ ಅಕ್ಕಪಕ್ಕದ ಗ್ರಾಮಗಳ ಹೊಲಗಳಲ್ಲಿ ಅಂತರ್ಜಲ ಹೆಚ್ಚಿರುತ್ತದೆ. ಈ ಸಲ ನದಿ ಬರಿದಾಗಿರುವುದರಿಂದ ಹೊಲಗಳಲ್ಲಿ ಅಂತರ್ಜಲ ಈಗಾಗಲೇ ಪಾತಾಳ ಕಂಡಿದೆ. ಗ್ರಾಮಗಳ ಕುಡಿಯುವ ನೀರಿನ ಬಾವಿಗಳೂ ಬತ್ತಿವೆ. ಸಮರ್ಪಕವಾಗಿ ಮಳೆಯಾಗದ ಕಾರಣ ಕೆರೆ, ಕಟ್ಟೆಗಳ ಒಡಲು ಕೂಡ ತುಂಬಿಲ್ಲ. ದಿನೇ ದಿನೇ ಬಾವಿ, ಕೊಳವೆ ಬಾವಿಗಳಲ್ಲಿ ನೀರು ಪಾತಾಳಕ್ಕಿಳಿಯುತ್ತಿದೆ. ಇದು ರೈತರ ಕಳವಳಕ್ಕೆ ಕಾರಣವಾಗಿದೆ.

ಜಿಲ್ಲೆಯ ಎಂಟು ತಾಲ್ಲೂಕುಗಳ ಪೈಕಿ ಏಳು ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದೆ. ಆರಂಭದಲ್ಲಿ ನಾಲ್ಕು ತಾಲ್ಲೂಕು, ಆನಂತರ ಒಂದು, ಬಳಿಕ ಇನ್ನೆರಡು ತಾಲ್ಲೂಕುಗಳ ನೈಜ ಸ್ಥಿತಿ ಆಧರಿಸಿ ಬರಪೀಡಿತ ಪಟ್ಟಿಯಲ್ಲಿ ಸೇರಿಸಲಾಗಿದ್ದು, ಅಂತಿಮ ಮುದ್ರೆ ಬೀಳಬೇಕಿದೆ. ಈ ತಿಂಗಳಾಂತ್ಯಕ್ಕೆ ಔರಾದ್ ತಾಲ್ಲೂಕು ಬರಪೀಡಿತ ಘೋಷಣೆಗೆ ಸಂಬಂಧಿಸಿದಂತೆ ನಿರ್ಧಾರ ಹೊರಬೀಳಲಿದೆ. ಇತರ ತಾಲ್ಲೂಕುಗಳಂತೆ ಔರಾದ್‌ನಲ್ಲೂ ನೀರಿನ ಸಮಸ್ಯೆ ತೀವ್ರವಾಗಿರುವುದರಿಂದ ಬರ ಪೀಡಿತ ಘೋಷಿಸಬೇಕೆನ್ನುವುದು ಸ್ಥಳೀಯರ ಒತ್ತಾಸೆಯಾಗಿದೆ.

ಔರಾದ್ ತಾಲ್ಲೂಕಿನಲ್ಲಿ ನದಿ ಇರುವ ಪ್ರದೇಶದಲ್ಲಿ ರೈತರು ಉತ್ತಮ ಸ್ಥಿತಿಯಲ್ಲಿದ್ದಾರೆ. ಆದರೆ, ಈ ಸಲ ಮಳೆಯಾಗದ ಕಾರಣ ನದಿಯಲ್ಲಿ ನೀರಿಲ್ಲ. ತಾಲ್ಲೂಕಿನ ಇತರ ಭಾಗಗಳಲ್ಲಿ ಒಂದೇ ಬೆಳೆ ಬೆಳೆಸಲಾಗುತ್ತದೆ.

ಈ ಸಲ ಮುಂಗಾರು ಹಾಗೂ ಹಿಂಗಾರಿನಲ್ಲಿ ಬೆಳೆ ಬೆಳೆದಿಲ್ಲ. ಆದಕಾರಣ ಔರಾದ್ ಕೂಡ ಬರಪೀಡಿತ ತಾಲ್ಲೂಕು' ಎಂದು ಘೋಷಿಸಬೇಕು ಎನ್ನುತ್ತಾರೆ ರೈತ ಸಂಘದ ಜಿಲ್ಲಾಧ್ಯಕ್ಷ ಶ್ರೀಮಂತ ಬಿರಾದಾರ.

**ಕಣ್ಣೆದುರೇ ಹಾಳಾಗುತ್ತಿದೆ ಬೆಳೆ**

: ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ಒಟ್ಟಾರೆ 4.22 ಲಕ್ಷ ಹೆಕ್ಟೇರ್ ಪೈಕಿ 4.12 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಮಾಡಲಾಗಿತ್ತು. ಇದರಲ್ಲಿ ಪ್ರಮುಖವಾಗಿ ಸೋಯಾ ಅವರೆ, ತೊಗರಿ ಹೆಚ್ಚಿನ ವ್ಯಾಪ್ತಿಯಲ್ಲಿ ಬೆಳೆಸಲಾಗಿದೆ. ಸಕಾಲಕ್ಕೆ ಮಳೆಯಾಗದ ಕಾರಣ ಬೆಳೆಗಳಲ್ಲಿ ಕಾಯಿ ಗಟ್ಟಿಯಾಗದೇ ಹಾಳಾಗುತ್ತಿದೆ. ಕಣ್ಣೆದುರೇ ಬೆಳೆ ಹಾಳಾಗುತ್ತಿದ್ದರೂ ರೈತರು ಅಸಹಾಯಕ ರಾಗಿದ್ದಾರೆ. ಕಾರಂಜಾ ಅಣೆಕಟ್ಟೆಯಲ್ಲಿ 4.23 ಟಿಎಂಸಿ ನೀರು: ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿ–ಬ್ಯಾಲಹಳ್ಳಿ ಸಮೀಪದ ಕಾರಂಜಾ ಜಲಾಶಯದಲ್ಲಿ ಭಾನುವಾರಕ್ಕೆ (ಸೆ.20) 4.23 ಟಿಎಂಸಿ ಅಡಿ ನೀರಿನ ಸಂಗ್ರಹವಿದೆ. 7.65 ಟಿಎಂಸಿ ಅಡಿ ಜಲಾಶಯದ ಒಟ್ಟು ನೀರಿನ ಸಂಗ್ರಹ ಸಾಮರ್ಥ್ಯವಿದೆ. ಹೋದ ವರ್ಷ ಜಿಲ್ಲೆಯಾದ್ಯಂತ ಭಾರಿ ಮಳೆಯಾಗಿದ್ದರಿಂದ ಜಲಾಶಯ ಭರ್ತಿಯಾಗಿತ್ತು. ಈ ಸಲ ಹೇಳಿ ಕೊಳ್ಳುವಂತಹ ಮಳೆಯಾಗದಿದ್ದರೂ ಒಟ್ಟು ನೀರಿನ ಸಂಗ್ರಹ ಸಾಮರ್ಥ್ಯದ ಪೈಕಿ ಅರ್ಧಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ನೀರಿದೆ.

## ಅ.13ರಂದು ಚಿತ್ರದುರ್ಗದಲ್ಲಿ ಮದಕರಿ ನಾಯಕ ಜಯಂತಿ

**ಚಿತ್ರದುರ್ಗ, ಸೆ.22:** ನಾಡಿನ ಶೌರ್ಯ, ಸಾಹಸ ಮತ್ತು ತ್ಯಾಗದ ಪ್ರತೀಕವಾಗಿರುವ ರಾಜವೀರ ಮದಕರಿ ನಾಯಕ ಜಯಂತೋತ್ಸವ ವನ್ನು ಚಿತ್ರದುರ್ಗದಲ್ಲಿ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದೆ. ಜಗದ್ಗುರು ಶ್ರೀ ವಾಲ್ಮೀಕಿ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಯವರ ಸಾನಿಧ್ಯದಲ್ಲಿ ನಡೆಯಲಿರುವ ಈ ಮಹತ್ವದ ಕಾರ್ಯಕ್ರಮದ ಕುರಿತು ಪತ್ರಿಕಾ ಗೋಷ್ಠಿಯಲ್ಲಿ ಆಯೋಜಕರು ಮಾಹಿತಿ ನೀಡಿದರು.

ಕೋಟೆನಾಡು ಹಾಗೂ ನೆಲದ ರಕ್ಷಣೆಗೆ ತಮ್ಮ ಶೌರ್ಯವನ್ನು ಸಮರ್ಪಿಸಿದ ಮದಕರಿ ನಾಯಕನ ಸ್ಮರಣಾರ್ಥವಾಗಿ ಹಮ್ಮಿಕೊಳ್ಳಲಾಗಿರುವ ಈ ಜಯಂತೋತ್ಸವವು ಯುವಪೀಳಿಗೆಗೆ ಅವರ ಆದರ್ಶಗಳನ್ನು ಪರಿಚಯಿಸುವ ಮಹತ್ವದ ವೇದಿಕೆಯಾಗಲಿದೆ ಎಂದು ಪತ್ರಿಕಾಗೋಷ್ಠಿಯಲ್ಲಿಆಯೋಜಕರು ತಿಳಿಸಿದರು. ಕೋಟೆನಾಡು ಹಾಗೂ ನೆಲದ ರಕ್ಷಣೆಗೆ ತಮ್ಮ ಶೌರ್ಯ, ಸಾಹಸ ಮತ್ತು ಪರಾಕ್ರಮವನ್ನು ಸಮರ್ಪಿಸಿದ ಮದಕರಿ ನಾಯಕನ ಸ್ಮರಣಾರ್ಥವಾಗಿ ಈ ಜಯಂತೋತ್ಸವವು ನಾಡಿನ ಜನತೆಗೆ ಶೌರ್ಯ ಮತ್ತು ತ್ಯಾಗದ ಪರಂಪರೆಯನ್ನು ಪರಿಚಯಿಸುವ ಮಹತ್ವದ ವೇದಿಕೆಯಾಗಲಿದೆ.



ಬೆಳಗ್ಗೆ 11.30ಕ್ಕೆ ಮದಕರಿ ನಾಯಕ, ಒನಕೆ ಓಬವ್ವ, ಅಂಬೇಡ್ಕರ್, ಕನಕದಾಸ, ಸಂಗೊಳ್ಳಿ ರಾಯಣ್ಣ, ಬಸವೇಶ್ವರ ಹಾಗೂ ಶ್ರೀಕೃಷ್ಣ ಪ್ರತಿಮೆಗಳಿಗೆ ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ ನಡೆಯಲಿದೆ.

ಮಧ್ಯಾಹ್ನ 1.30ಕ್ಕೆ ಕನಕ ಸರ್ಕಲ್ ಹೊಳಲ್ಕೆರೆ ರಸ್ತೆಯಲ್ಲಿ ವೇದಿಕೆ ಕಾರ್ಯಕ್ರಮ ಹಾಗೂ ಮೆರವಣಿಗೆ ನಡೆಯಲಿದ್ದು, ವಿವಿಧ ಸಾಂಸ್ಕೃತಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿವೆ.

ಬರಗೇರಮ್ಮ ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆ ನಡೆಯಲಿದ್ದು, ರಾತ್ರಿ 7.30ಕ್ಕೆ ಮದಕರಿ ಸರ್ಕಲ್‌ನಲ್ಲಿ ಧ್ವನಿ ಬೆಳಕಿನ ಪ್ರದರ್ಶನ ಹಾಗೂ ಪಟಾಕಿ ಸಿಡಿತ ಕಾರ್ಯಕ್ರಮ ನಡೆಯಲಿದೆ. 'ಒಗ್ಗಟ್ಟಿನಲ್ಲಿ ಶಕ್ತಿ' ಸಹಭಾಗಿತ್ವದಲ್ಲಿ ಯಶಸ್ಸು' ಎಂಬ ಘೋಷವಾಕ್ಯದೊಂದಿಗೆ ಈ ಜಯಂತೋತ್ಸವವು ಯುವಪೀಳಿಗೆಗೆ ಮದಕರಿ ನಾಯಕನ ಆದರ್ಶಗಳನ್ನು ಪರಿಚಯಿಸುವ ಮಹತ್ವದ ಉತ್ಸವವಾಗಲಿದೆ ಎಂದು ಆಯೋಜಕರು ತಿಳಿಸಿದ್ದಾರೆ.

ಚಿತ್ರದುರ್ಗದ ಕೊನೆಯ ನಾಯಕನಾಗಿ ನಾಡಿನ ಶೌರ್ಯ, ಸಾಹಸ ಮತ್ತು ತ್ಯಾಗದ ಪ್ರತೀಕವಾಗಿ ಹೆಸರು ಪಡೆದ ರಾಜವೀರ ಮದಕರಿ ನಾಯಕರು 1758ರಿಂದ 1779ರವರೆಗೆ ಆಡಳಿತ ನಡೆಸಿದರು. 1742ರಲ್ಲಿ ಜನಕಲ್, ಹೊಸದುರ್ಗದಲ್ಲಿ ಜನಿಸಿದ ಅವರು ಕಸ್ತೂರಿ ರಂಗಪ್ಪ ನಾಯಕ II ಅವರ ನಂತರ ಸಿಂಹಾಸನಾರೂಢರಾದರು.

ಪೇಶ್ವಾ ಮಧವರಾವರಿಂದ ನಿದಗಲ್ಲು ಕೋಟೆ ಗೆಲ್ಲಲು ಸಹಾಯ ಮಾಡಿದ ಕಾರಣ '77 ಪಾಳೇಗಾರರ ಗಂಡ' ಎಂಬ ಬಿರುದನ್ನು ಪಡೆದರು. ಹೈದರಾಲಿ ಮತ್ತು ಮರವಾಠರ ವಿರುದ್ಧ ಧೈರ್ಯದಿಂದ ಹೋರಾಡಿ, ಚಿತ್ರದುರ್ಗ ಕೋಟೆಯ ಬಲಿಷ್ಠ ರಕ್ಷಣಾ ವ್ಯವಸ್ಥೆಯ ಮೂಲಕ ಹಲವು ದಾಳಿಗಳನ್ನು ತಡೆದರು.

ಹೈದರಾಲಿ ವಿರುದ್ಧ ಧೈರ್ಯದಿಂದ ಹೋರಾಡಿದರು.'ಎಪ್ಪತ್ತೇಳು ಪಾಳೇಗಾರರ ಗಂಡ' ಎಂಬ ಬಿರುದನ್ನು ಪಡೆದ ಅವರು ಕೋಟೆ ನಾಡಿನ ರಕ್ಷಣೆಗೆ ತಮ್ಮ ಶೌರ್ಯವನ್ನು ಸಮರ್ಪಿಸಿದರು.

ಹೈದರಾಲಿ ಸೇನೆಯ ದಾಳಿಯ ಸಮಯದಲ್ಲಿ ಒನಕೆ ಓಬವ್ವ ತೋರಿದ ಸಾಹಸ ಮದಕರಿ ನಾಯಕರ ಕಾಲದ ಅತ್ಯಂತ ಪ್ರಸಿದ್ಧ ಶೌರ್ಯಗಾಥೆಯಾಗಿ ಉಳಿಯಿತು. 1779ರಲ್ಲಿ ಹೈದರಾಲಿ ಚಿತ್ರದುರ್ಗ ಕೋಟೆಯನ್ನು ವಶಪಡಿಸಿಕೊಂಡು, ಮದಕರಿ ನಾಯಕರನ್ನು ಬಂಧಿಸಿ ಶ್ರೀರಂಗಪಟ್ಟಣಕ್ಕೆ ಕರೆದೊಯ್ದನು. ಅಲ್ಲಿ ಬಂಧನದಲ್ಲೇ ಅವರು ನಿಧನರಾದರು. 'ದುರ್ಗದ ಹುಲಿ' ಎಂದು ಕರೆಯಲ್ಪಟ್ಟ ಮದಕರಿ ನಾಯಕರ ತ್ಯಾಗ ಮತ್ತು ಶೌರ್ಯವು ಇಂದು ಕೂಡ ಕನ್ನಡ ನಾಡಿನ ಯುವಪೀಳಿಗೆಗೆ ಪ್ರೇರಣೆಯಾಗಿ ಉಳಿದಿದೆ.

'ದುರ್ಗದ ಹುಲಿ' ಎಂದು ಕರೆಯಲ್ಪಟ್ಟ ಮದಕರಿ ನಾಯಕರ ಆಡಳಿತವು ವಿಜಯನಗರ ಸಾಮ್ರಾಜ್ಯದ ನಂತರದ ಪಾಳೇಗಾರರ ಶಕ್ತಿಯ ಸಂಕೇತವಾಗಿತ್ತು. ಅವರ ತ್ಯಾಗ ಮತ್ತು ಶೌರ್ಯವು ಇಂದು ಕೂಡ ಕನ್ನಡ ನಾಡಿನ ಯುವಪೀಳಿಗೆಗೆ ಪ್ರೇರಣೆಯಾಗಿ ಉಳಿದಿದೆ.

## ನಾಡ ಪಿಸ್ತೂಲ್ ಮಾರಾಟ ಜಾಲ ಭೇದಿಸಿದ ಆನೇಕಲ್ ಪೊಲೀಸರು: 7 ಮಂದಿ ಬಂಧನ

**ಆನೇಕಲ್, ಸೆ.22:** ಅಕ್ರಮವಾಗಿ ಕಂಟ್ರಿಮೇಡ್ ಪಿಸ್ತೂಲ್ ಮಾರಾಟ ಮಾಡುತ್ತಿದ್ದ ಜಾಲವನ್ನು ಅನೇಕಲ್ ಪೊಲೀಸರು ಭೇದಿಸಿ ಏಳು ಆರೋಪಿಗಳನ್ನು ಬಂಧಿಸಿದ್ದಾರೆ. ಪ್ರದೀಪ್ ರಮೇಶ್, ಮನೋಜ್ ಅಲಿಯಾಸ್ ಜಾಕಿ, ರಿಜ್ವಾನ್ ಪಾಷಾ, ನಂಜಪ್ಪ, ವೆಂಕಟರಾಜು, ಸುಣವಾರ ಗೋಪಿ ಹಾಗೂ ಶಿವರಾಜ್ ಬಂಧಿತರು. ಆರೋಪಿಗಳಿಂದ 5 ಕಂಟ್ರಿಮೇಡ್ ಪಿಸ್ತೂಲ್‌ಗಳು ಮತ್ತು 10 ಜೀವಂತ ಗುಂಡುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಕಳೆದ ಆ.4ರಂದು ಹಾಲ್ದೇನಹಳ್ಳಿ ಗೇಟ್ ಬಳಿ ಗಸ್ತು ತಿರುಗುತ್ತಿದ್ದ ವೇಳೆ ಅನೇಕಲ್ ಪೊಲೀಸರು ಪ್ರದೀಪ್ ರಮೇಶ್‌ನನ್ನು ವಶಕ್ಕೆ ಪಡೆದು ಪರಿಶೀಲಿಸಿದಾಗ, ಆತನ ಬಳಿ ಮೂರು ಪಿಸ್ತೂಲ್‌ಗಳು ಹಾಗೂ 10 ಜೀವಂತ ಗುಂಡುಗಳು ಪತ್ತೆಯಾಗಿದ್ದವು. ಪ್ರದೀಪ್ ರಮೇಶ್ ವಿಚಾರಣೆ ವೇಳೆ ಮಧ್ಯಪ್ರದೇಶ ಮೂಲದ ದಾವೂದ್ ಈ ಜಾಲದ ಪ್ರಮುಖ ಸೂತ್ರಧಾರ ಎಂಬುದು ಬೆಳಕಿಗೆ ಬಂದಿದೆ. ಅಲ್ಲದೆ, ರೈಲಿನ ಮೂಲಕ ಪಿಸ್ತೂಲ್‌ಗಳನ್ನು ತರಿಸಿ ರಾಜ್ಯದಲ್ಲಿ ರೌಡಿಶೀಟರ್‌ಗಳಿಗೆ ಮಾರಾಟ ಮಾಡುತ್ತಿದ್ದ ಜಾಲ ಕಾರ್ಯನಿರ್ವಹಿಸುತ್ತಿತ್ತು ಎಂಬ ಮಾಹಿತಿ ತನಿಖೆಯಲ್ಲಿ ತಿಳಿದುಬಂದಿದೆ. ತನಿಖೆಯಲ್ಲಿ ಕುಖ್ಯಾತ ರೌಡಿಶೀಟರ್ ಕುಳ್ಳ ರಿಜ್ವಾನ್ ಸೇರಿದಂತೆ ಕೆಲವರಿಗೆ ಪಿಸ್ತೂಲ್ ಮಾರಾಟ ಮಾಡಿರುವ ಆರೋಪವೂ ಬೆಳಕಿಗೆ ಬಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಕರ್ನಾಟಕ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಪೊಲೀಸರು ತನಿಖೆಯನ್ನು ಮುಂದುವರೆಸಿದ್ದಾರೆ.

### ಯುವಜನತೆಯಲ್ಲಿ ಪ್ರಜಾಪ್ರಭುತ್ವದ ವಿಚಾರಧಾರೆ ಬಿತ್ತನೆ

# ವಾರದಲ್ಲಿ ಯುವ ಸಂಸತ್ತು ಸಭೆ ನಡೆಸಿ ವರದಿ ಸಲ್ಲಿಸಲು ಜಿಲ್ಲಾಧಿಕಾರಿ ಸೂಚನೆ

**ಕಲಬುರಗಿ, ಸೆ. 22:** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಯುವ ಜನತೆಗೆ ಪ್ರಜಾಪ್ರಭುತ್ವದ ವಿಚಾರದಾರೆ ತಲುಪಿಸುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ "ಯುವ ಸಂಸತ್ತು" ಆಯೋಜಿಸಬೇಕಾಗಿದ್ದು, ಇದೇ ವಾರದಲ್ಲಿ ತಾಲೂಕಾ ಯುವಸಂಸತ್ತು ಸಭೆ ನಡೆಸಿ ವರದಿ ನೀಡಬೇಕೆಂದು ತಾಲೂಕಾ ಮಟ್ಟದ ಅಧಿಕಾಯಿರಿಗಳಿಗೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಸೂಚನೆ ನೀಡಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮತ್ತು ತಾಲೂಕು ಮಟ್ಟದ "ಯುವ ಸಂಸತ್ತು ರಚನೆ" ಪೂರ್ವಭಾವಿ ಸಭೆ ನಡೆಸಿದ ಅವರು, ರಾಜ್ಯದ ವಿಧಾನಸಭೆ ಮಾದರಿಯಲ್ಲಿ ಪ್ರೌಢ ಶಾಲಾ, ಪದವಿ ರಾಹುಲ್ ಬಿಲಗುಂದಿ, ಎಸ್. ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿ ಹಂತದಿಂದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡು ಸಾಧ್ಯವಾದರೆ 224 ವಿದ್ಯಾರ್ಥಿಗಳು ಒಳಗೊಂಡ ಯುವಸಂಸತ್ತು ಸಭೆ ಆಯೋಜಿಸಬೇಕು. ಇದರಲ್ಲಿ ಉತ್ತಮ ಕಾಯಕ್ಷಮತೆ ತೋರಿದ ಅರ್ಹರ ಹೆಸರನ್ನು ಜಿಲ್ಲಾ ಯುವ ಸಂಸತ್ತು ಸಭೆಗೆ ಶಿಫಾರಸ್ಸು ಮಾಡಬೇಕು. ಇನ್ನು ಜಿಲ್ಲಾಮಟ್ಟದಿಂದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರಂತೆ ರಾಜ್ಯಮಟ್ಟದ ಯುವಸಂಸತ್ತಿಗೆ ಆಯ್ಕೆ ಮಾಡಿ ಕಳುಹಿಸಿಕೊಡಲಾಗುವುದು ಎಂದರು.

ತಾಲೂಕಾ ಯುವ ಸಂಸತ್ತು ಸಭೆಯ ನಂತರ ನಂತರ ಜಿಲ್ಲಾ ಯುವ ಸಂಸತ್ತು ಸಭೆ ಆಯೋಜಿಸಲಾಗುತ್ತದೆ. ದೇಶದ ಸಂಸದೀಯ ವ್ಯವಸ್ಥೆಯನ್ನು ಪರಿಚಯಿಸುವ ಎಸ್. ತವಡೆ, ಶ್ರೀನಿವಾಸ, ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಯುವಸಂಸತ್ತು ಸಭೆ ಯುವ ಸಮುದಾಯಕ್ಕೆ ತುಂಬಾ ಪ್ರಯೋಜನಕಾಯಿರಿಯಾಗಿದ್ದು, ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಅರ್ಥ ಪೂರ್ಣವಾಗಿ ಆಯೋಜಿಸಬೇಕು ಎಂದ ಜಿಲ್ಲಾಧಿಕಾರಿಗಳು, ತಾಲೂಕಾ ಮಟ್ಟದಲ್ಲಿ ಬಿ.ಇ.ಓ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಇದರ ಯಶಸ್ಸಿಗೆ ಮುಂದಾಳತ್ವ ವಹಿಸಬೇಕೆಂದರು.

ಜಿಲ್ಲಾ ಯುವಸಂಸತ್ತು ಸಭೆಗೆ ಜಿಲ್ಲಾ ಉಸ್ತುವಾರಿ ಸಚಿವರು, ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಮತ್ತು ವಕೀಲರ ಸಂಘದ ಜಿಲ್ಲಾಧ್ಯಕ್ಷರನ್ನು ಹಾಗೂ ತಾಲೂಕಾ ಯುವ ಸಂಸತ್ತು ಶಾಸಕರು, ಸಂಸದರು ಹಾಗೂ ತಾಲೂಕಿನ ನ್ಯಾಯಾಧೀಶರನ್ನು ಆಹ್ವಾನಿಸಬೇಕು. ಯುವ ಸಂಸತ್ತು ಸಭೆಯಲ್ಲಿ ಯಾವುದೇ ವಿವಾದಕ್ಕೆ ಆಸ್ಪದ ಕೊಡದ ಪ್ರಮುಖ ಮೂರು ವಿಷಯಗಳ ಮೇಲೆ ಚರ್ಚೆ ನಡೆಸಬೇಕು. ಸಾಂಕೇತಿಕವಾಗಿ ಕಾರ್ಯಕ್ರಮ ಉದ್ಘಾಟನೆ ಬಳಿಕ ಯುವ ಸಂಸತ್ತು ಕಾರ್ಯ ಕಲಾಪಗಳನ್ನು ವಿಧಾನಸಭೆಯ ಕಾರ್ಯವಿಧಾನ ನಡವಳಿಕೆ ನಿಯಮಾನುಸಾರ ನಡೆಸಬೇಕೆಂದು ಡಿ.ಸಿ. ಅಧಿಕಾರಿಗಳಿಗೆ ಸೂಚಿಸಿದರು.

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಮಂತ್ರಿ ಮಂಡಲ, ವಿಧಾನಸಭಾಧ್ಯಕ್ಷ, ಉಪಸಭಾಧ್ಯಕ್ಷ, ವಿರೋಧ ಪಕ್ಷದ ನಾಯಕ, ಮುಖ್ಯ ಸಚೇತಕ ಪಾತ್ರಗಳೊಂದಿಗೆ ಯುವ ಸಂಸತ್ತು ರಚಿಸಿ ಕಾರ್ಯ ಕಲಾಪ ನಡೆಸಬೇಕು. ಸದನದ ಪ್ರಕ್ರಿಯೆಗಳಾದ ಪ್ರಶ್ನೋತ್ತರ ಅವಧಿ, ಶೂನ್ಯವೇಳೆ, ನಿಯಮ 330/343 ಮೇಲಿನ ತುರ್ತು ವಿಷಯದ ಚರ್ಚೆ, ನಿಯಮ 60ರಡಿ ಗಮನ ಸೆಳೆಯುವ ಸೂಚನೆ, ಗೊತ್ತುವಳಿ ಮಂಡನೆ, ವಿಧೇಯಕಗಳ ಮಂಡನೆ, ವಿಧೇಯಕಗಳ ಮೇಲಿನ ಚರ್ಚೆ, ವಿಧೇಯಕಗಳ ಅಂಗೀಕಾರ, ಸಮಾಪ್ತಿ ಸೂಚನೆ ಮೊದಲಾದ ಸದನ ನಡವಳಿ ಪ್ರಕ್ರಿಯೆಯನ್ನು ಅನುಸಯಿರಿಸುವ ಮೂಲಕ ಶಾಸಕಾಂಗ ವ್ಯವಸ್ಥೆಯನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಕೆಲಸ ಇಲ್ಲಿ ಮಾಡಬೇಕು ಎಂದರು.

ಸಮಾಜಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿ ಪ್ರೀತಿ ದೊಡ್ಮನಿ ಅವರು ಯುವಸಂಸತ್ತು ರಚನೆ ಮತ್ತು ಕಾರ್ಯ ಕಲಾಪಗಳ ಕುರಿತು ವಿವರಿಸಿದರು.



ಮಂಗಳವಾರ ಮೈಸೂರಿನಲ್ಲಿ ದಸರಾ ಆಚರಣೆಗಾಗಿ ರಸ್ತೆಗಳಿಗೆ ಹೊಸರೂಪ ನೀಡಲಾಗುತ್ತಿದೆ.

# ವಿದ್ಯಾವಂತ ಸಮಾಜದಲ್ಲಿ ಬಾಲ್ಯವಿವಾಹಕ್ಕೆ ಅವಕಾಶವಿಲ್ಲ: ಪಾಪಮ್ಮ ಹಾಬಳೇಕರ್



**ಕಲಬುರಗಿ, ಸೆ. 22:** ಇದು ವಿದ್ಯಾವಂತ ಸುಶಿಕ್ಷಿತ ಸಮಾಜ. ಇಂಥ ಸಮಾಜದಲ್ಲಿ ಇನ್ನೂ ಬಾಲ್ಯವಿವಾಹಗಳು ನಡೆಯುತ್ತಿರುವುದು ಸಮಾಜ ತಲೆತಗ್ಗಿಸುವ ವಿಷಯವಾಗಿದೆ. ಇದರಿಂದ ಬಾಲಕಿ-ಬಾಲಕರ ಬಾಲ್ಯವನ್ನು ಕಸಿದು ಅವರ ಇಡೀ ಜೀವನ ಪಶ್ಚಾತ್ತಾಪ ಪಡುವಂತೆ ಮಾಡುವದು ಅಪರಾದ. ಮಕ್ಕಳ ಬಾಲ್ಯ ಉಳಿಸಿ ಅವರ ಭವಿಷ್ಯ ಉಜ್ವಲಗೊಳಿಸುವ ದೃಷ್ಟಿಯಿಂದ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂಬ ಕಾನೂನನ್ನೇ ತರಲಾಗಿದೆ. ಈ ಕಾನೂನು ಮೂಲಕ ಬಾಲ್ಯ ವಿವಾಹ ಮಾಡುವವರು, ಮಾಡಿಸುವವರು. ಮದುವೆಗೆ ಬಂದವರು, ಊಟ ಮಾಡಿದವರು, ಪುರೋಹಿತರ ಮೇಲೂ ಕೂಡ ಪ್ರಕರಣ ದಾಖಲಾಗುತ್ತದೆ ಎಂದು ನಿವೃತ್ತ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪಾಪಮ್ಮ ಹಾಬಳೇಕರ್ ಎಚ್ಚರಿಕೆ ನೀಡಿದರು.

ನಗರದ ನೃಪತುಂಗ ಕಾಲೊನಿಯ ಬುಡ್ಗಜಂಗಮ ಕಾಲೋನಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಕಲಬುರಗಿ ನಗರ ಶಿಶು ಅಭಿವೃದ್ಧಿ ಯೋಜನೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಮತ್ತು ಸಂಸ್ಕಾರ ಪ್ರತಿಷ್ಠಾನದ ಸಹಯೋಗದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನದ ಅಡಿಯಲ್ಲಿ ಬಾಲ್ಯವಿವಾಹ ನಿಷೇಧ ಮತ್ತು ಪೌಷ್ಠಿಕ ಆಹಾರದ ಬಗ್ಗೆ ಅರಿವು ಕಾರ್ಯಕ್ರಮವನ್ನುದ್ದೇಶಿಸಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಲ್ಲಣ್ಣ ದೇಸಾಯಿ ಮಾತನಾಡಿ, ಮಕ್ಕಳನ್ನು ಅಂಗನವಾಡಿ ಮತ್ತು ಶಾಲೆಗೆ ಕಳುಹಿಸಿ, ಅಲ್ಲಿ ಸಿಗುವ ಮಧ್ಯಾಹ್ನದ ಬಿಸಿಯೂಟ, ಬಟ್ಟೆ, ಪುಸ್ತಕ, ವಸತಿ ಶಾಲೆ ಸೌಲಭ್ಯ ಪಡೆಯಿರಿ. ಮಾತೃವಂದನಾ ಯೋಜನೆಯಲ್ಲಿ ಗರ್ಭಿಣಿಯರಿಗೆ ಹಣ ಸಿಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಉಡಿ ತುಂಬುವುದು ಮತ್ತು ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಲಾಯಿತು.

### 31.41 ಕೋಟಿ ರೂ. ಅಧಿಕ ಪರಿಹಾರ ರಾಜಿ ಸಂಧಾನ

# ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ 10,925 ಪ್ರಕರಣಗಳ ಯಶಸ್ವಿ ಇತ್ಯರ್ಥ: ವಿರಸ ಮರೆತು ಒಂದಾದ 7 ಜೋಡಿಗಳು

**ರಾಜಿಸಂಧಾನದಿಂದ ಹಣ,ಸಮಯ ಉಳಿತಾಯ: ಜಿಲ್ಲಾ ನ್ಯಾಯಾಧೀಶ ಹರೀಶ ಎ.**



**ವಿಜಯಪುರ,ಸೆ.21**–ಜಿಲ್ಲಾದ್ಯಂತ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ಗೆ ಕಕ್ಷಿದಾರರಿಂದ ಅಭೂತಪೂರ್ವ ಸ್ಪಂದನೆ ದೊರೆತಿದ್ದು, ಒಟ್ಟು 10,925 ಪ್ರಕರಣಗಳು ರಾಜಿ ಸಂಧಾನದ ಮೂಲಕ ಯಶಸ್ವಿಯಾಗಿ ಇತ್ಯರ್ಥಗೊಂಡವು.

ಆಸ್ತಿ ವಿಭಾಗ, ಚೆಕ್ ಬೌನ್ಸ್, ಮೋಟಾರು ವಾಹನ ಅಪಘಾತ ಪರಿಹಾರ, ಜೀವನಾಂಶ ಕೋರಿದ ಪ್ರಕರಣಗಳು, ರಾಜಿ ಮಾಡಿಕೊಳ್ಳ ಬಹುದಾದ ಕ್ರಿಮಿನಲ್ ಪ್ರಕರಣಗಳು ಹಾಗೂ ಅಮಲ್ದಾರಿ ಪ್ರಕರಣಗಳು ಲೋಕ್ ಅದಾಲತ್‌ನಲ್ಲಿ ಯಶಸ್ವಿಯಾಗಿ ಇತ್ಯರ್ಥಗೊಂಡವು.

**ಒಂದಾದ 7 ಜೋಡಿಗಳು:** ವಿಜಯಪುರ ಜಿಲ್ಲೆ ಮತ್ತು ತಾಲೂಕುಗಳನ್ನು ಒಳಗೊಂಡು ಒಟ್ಟು 7 ದಂಪತಿಗಳು ಮನಸ್ತಾಪ ಮರೆತು, ಜನತಾ ನ್ಯಾಯಾಲಯದ ಮೂಲಕ ಒಂದಾಗಿ ವೈವಾಹಿಕ ಜೀವನ ಮುಂದುವರಿಯಲು ಇದೇ ವೇಳೆ ಒಪ್ಪಿಕೊಂಡರು.

**ಭೂ ಸ್ವಾಧೀನ ಪರಿಹಾರ:** 96 ಭೂ ಸ್ವಾಧೀನ ಪ್ರಕರಣಗಳು ಮತ್ತು 312 ಭೂ ಸ್ವಾಧೀನ ದರಖಾಸ್ತು ಪ್ರಕರಣಗಳು ಇತ್ಯರ್ಥಗೊಂಡು, ಒಟ್ಟು 31,41,56,802 ರೂ. ಹಣವನ್ನು ರಾಜಿಸಂಧಾನದ ಮೂಲಕ ಬಗೆಹರಿಸಲಾಗಿದೆ.

ಬಳಿಕ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಹರೀಶ ಎ. ಅವರು ಮಾತನಾಡಿ, ಕಕ್ಷಿದಾರರು ವರ್ಷಗಟ್ಟಲೆ ಕೋರ್ಟ್ ಅಲೆಯುವ ಬದಲು ಜನತಾ ನ್ಯಾಯಾಲಯದ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಂಡರೆ ಹಣ ಮತ್ತು ಸಮಯ ಎರಡೂ ಉಳಿತಾಯವಾಗುತ್ತದೆ. ಹಾಗಾಗಿ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಸಾಯಬಣ್ಣ ಹಾಗರಗಿ ಅವರು ಮಾತನಾಡಿ, ಸಾರ್ವಜನಿಕರು ಶೀಘ್ರ ನ್ಯಾಯ ಪಡೆದುಕೊಂಡು ಸೌಹಾರ್ದತೆಯಿಂದ ಸಮಾಜದಲ್ಲಿ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಲೋಕ್ ಅದಾಲತ್‌ನ ಯಶಸ್ಸಿಗೆ ಶ್ರಮಿಸಿದ ಎಲ್ಲಾ ನ್ಯಾಯಾಂಗ ಅಧಿಕಾರಿಗಳು, ವಕೀಲರು, ಪೊಲೀಸ್ ಸಿಬ್ಬಂದಿ, ಕಕ್ಷಿದಾರರು ಹಾಗೂ ಪ್ರಾಧಿಕಾರದ ಸಿಬ್ಬಂದಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮೆಚ್ಚುಗೆ ವ್ಯಕ್ತಪಡಿಸಿತು.

# ಶಾಲಾ ವಾಹನಗಳಲ್ಲಿ 'ಕೇರ್ ಟೇಕರ್' ಕಡ್ಡಾಯ

**ಬೀದರ್, ಸೆ. 22:** ಶಿಕ್ಷಣ ಸಂಸ್ಥೆಗಳಿಂದಲೇ ಮನೆಗೆ ಹೋಗಿ ಮಕ್ಕಳನ್ನು ಶಾಲೆಗೆ ಕರೆದುಕೊಂಡು ಬರುವ ಶಾಲಾ ವಾಹನಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿ, ಅದರಲ್ಲಿ ಕಡ್ಡಾಯವಾಗಿ ಕೇರ್ ಟೇಕರ್




ಇರುವಂತೆ ನೋಡಿಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಮುಹಮ್ಮದ್ ಜಾಫರ್ ಸಾದಿಕ್ ಹೇಳಿದರು.

ರಸ್ತೆ ಸುರಕ್ಷತಾ ಅರಿವು ಕಾರ್ಯಾಗಾರ ಉದ್ಘಾಟಿಸಿ, ಶಾಲಾ ವಾಹನ ಚಲಾಯಿಸು ವವರಿಗೆ ಐದು ವರ್ಷ ಚಾಲನಾ ಅನುಭವ ಹೊಂದಿರಬೇಕು. ಅತಿ ವೇಗ ಹಾಗೂ ಓವರ್ ಟೇಕ್ ಮಾಡುವುದರಿಂದ ಹೆಚ್ಚಿನ ಅಪಘಾತಗಳು ಸಂಭವಿಸುತ್ತಿವೆ. ರಸ್ತೆಯಲ್ಲಿ ಸಮಾಧಾನದಿಂದ ರಸ್ತೆ ಚಾಲನಾ ನಿಯಮಗಳನ್ನು ಪಾಲಿಸುವ ಮೂಲಕ ವಾಹನ ಚಲಾಯಿಸಬೇಕು ಎಂದು ಸಲಹೆ ಮಾಡಿದರು.

ಅನಾರೋಗ್ಯದಿಂದ ಬಳಲುತ್ತಿದ್ದರೆ ವಾಹನ ಚಲಾಯಿಸಬಾರದು. ಒಂದು ವೇಳೆ ಗುಳಿಗೆ ತೆಗೆದುಕೊಂಡರೆ ಕನಿಷ್ಠ 2 ಗಂಟೆ ವಿಶ್ರಾಂತಿ ಮಾಡಿದ ಬಳಿಕವೇ ವಾಹನ ಓಡಿಸಬೇಕು. ಮದ್ಯಪಾನ ಮಾಡಿ ವಾಹನವನ್ನು ಓಡಿಸಲೇಬಾರದು. ಮದ್ಯಪಾನ ಮಾಡಿ ವಾಹನ ಚಲಾಯಿಸಿದರೆ ರೂ.10 ಸಾವಿರ ದಂಡ ಹಾಗೂ ಆರು ತಿಂಗಳು ಜೈಲು ಶಿಕ್ಷೆ ಇದೆ ಎಂದರು.

# ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಪ್ರಮುಖ ಸಂಸ್ಥೆ ವೀ.ವಿ ಸಂಘ: ಸೋಮಶೇಖರರೆಡ್ಡಿ

**ಬಳ್ಳಾರಿ, ಸೆ.22**– ವೀರಶೈವ ವಿದ್ಯಾವರ್ಧಕ ಸಂಘದ ಶ್ರೀಮತಿ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ಮಹಾವಿದ್ಯಾಲಯದ ಸುವರ್ಣ ಮಹೋತ್ಸವದ ಅಂಗವಾಗಿ ಗುರು ವಂದನಾ ಕಾರ್ಯಕ್ರಮವನ್ನು ಮಂಗಳವಾರ ಆಯೋಜಿಸಲಾಯಿತು. ಶ್ರೀ ಕೊಟ್ಟೂರು ಸ್ವಾಮಿ ವಿರಕ್ತ ಮಠ, ಶ್ರೀಧರಗಡ್ಡದ ಪರಮಪೂಜ್ಯ ಶ್ರೀ ಶ್ರೀ ಮರಿ ಕೊಟ್ಟೂರು ಸ್ವಾಮೀಜಿ, ಸುಕ್ಷೇತ್ರ ನಂದಿಪುರದ ಕಲ್ಯಾಣ ಸ್ವಾಮಿ ಮಠದ ಮಹೇಶ್ವರ ಸ್ವಾಮೀಜಿ ಸೇರಿದಂತೆ ಪೂಜ್ಯ ಸ್ವಾಮೀಜಿಗಳ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ಜರುಗಿತು. ಕಾಲೇಜಿನ ನಿವೃತ್ತ ಪ್ರಾಂಶುಪಾಲ ಪಿ. ಗುರುಬಸಪ್ಪ ಅಧ್ಯಕ್ಷತೆ ವಹಿಸಿದ್ದರು. ಬಳ್ಳಾರಿಯ ಮಾಜಿ ಶಾಸಕರಾದ ಜಿ. ಸೋಮಶೇಖರ ರೆಡ್ಡಿ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಹನುಮಂತ ರಾವ್ ಎಂ.ವಿ. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಪೂಜ್ಯ ಸ್ವಾಮೀಜಿ ಹಾಗೂ ಗಣ್ಯರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ವಿಶ್ವಮಾನವ ಬಸವಣ್ಣ, ಶ್ರೀಮತಿ ಅಲ್ಲಂ ಸುಮಂಗಳಮ್ಮ ಹಾಗೂ ಶ್ರೀ ತೊಗರಿ ವೀರಪ್ಪ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಲಾಯಿತು.

ಆಶೀರ್ವಚನ ನೀಡಿದ ಶ್ರೀ ಶ್ರೀ ಮರಿ ಕೊಟ್ಟೂರು ಸ್ವಾಮೀಜಿ, ಶಿಕ್ಷಣವು ಜೀವನವನ್ನು ಸಾರ್ಥಕಗೊಳಿಸುವ ಪ್ರಮುಖ ಸಾಧನವಾಗಿದ್ದು, ಮಹಿಳಾ .ಶಿಕ್ಷಣಕ್ಕೆ ಅಲ್ಲಂ ಸುಮಂಗಳಮ್ಮ



ಅವರು ನೀಡಿದ ಕೊಡುಗೆ ಶ್ಲಾಘನೀಯವಾಗಿದೆ ಎಂದು ಹೇಳಿದರು. ವೀರಶೈವ ವಿದ್ಯಾವರ್ಧಕ ಸಂಘವು ಇನ್ನಷ್ಟು ಪ್ರಗತಿ ಸಾಧಿಸಲಿ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಆರೋಗ್ಯ ಮತ್ತು ಗುಣಮಟ್ಟದ ಶಿಕ್ಷಣ ದೊರೆಯಲಿ ಎಂದು ಆಶಿಸಿದರು.


ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ, ವೀರಶೈವ ವಿದ್ಯಾವರ್ಧಕ ಸಂಘವು ಬಳ್ಳಾರಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿದ್ದು, 45ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿದೆ ಎಂದು ಹೇಳಿದರು. ಎ.ಎಸ್.ಎಂ. ಮಹಿಳಾ ಮಹಾ ವಿದ್ಯಾಲಯವು ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಪ್ರಮುಖ ಸಂಸ್ಥೆಯಾಗಿದೆ ಎಂದರು.

ನಿವೃತ್ತ ಶಿಕ್ಷಕ ಪಿ. ಗುರುಬಸಪ್ಪ ಅವರನ್ನು ಸ್ಮರಿಸಿದ ಅವರು, ಸಂಘದ ಶೈಕ್ಷಣಿಕ ಸೇವೆಗೆ ಗೌರವ ಸೂಚಿಸುವ ನಿಟ್ಟಿನಲ್ಲಿ 18 ಎಕರೆ ಭೂಮಿಯನ್ನು ದಾನ ಮಾಡಿರುವುದಾಗಿ ತಿಳಿಸಿದರು. ವೀರಶೈವ ವಿದ್ಯಾವರ್ಧಕ ಸಂಘದ ಗೌರವ ಖಜಾಂಚಿ ಬೈಲುವದ್ದಿಗೇರಿ ಯರ್ರಿಸ್ವಾಮಿ ಪ್ರಾಸ್ತಾವಿಕವಾಗಿ, ಸಂಘದ ಇತಿಹಾಸ, ಎ.ಎಸ್.ಎಂ. ಮಹಿಳಾ ಮಹಾ ವಿದ್ಯಾಲಯದ ಸ್ಥಾಪನೆ ಮತ್ತು ಬೆಳವಣಿಗೆ ಹಾಗೂ ಗುರು ವಂದನಾ ಕಾರ್ಯಕ್ರಮದ ಮಹತ್ವವನ್ನು ವಿವರಿಸಿದರು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿ ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಮಾಜಿ ಸದಸ್ಯರಾದ ಡಾ.ಮೈತ್ರೇಯಿಣಿ ಗಡಿಗೆಪ್ಪಗೌಡರ್ ಮಾತನಾಡಿ, ವೀರಶೈವ ವಿದ್ಯಾವರ್ಧಕ ಸಂಘವು 1918ರಿಂದ ಶೈಕ್ಷಣಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದು, ಬಳ್ಳಾರಿಯ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆದಿದೆ ಎಂದರು. ಅಲ್ಲಂ ಸುಮಂಗಳಮ್ಮ ಅವರು 1969ರಲ್ಲಿ ಮಹಿಳಾ ಶಿಕ್ಷಣ ಮತ್ತು ಸಬಲೀಕರಣಕ್ಕೆ ಭದ್ರ ಬುನಾದಿ ಹಾಕಿದರು ಎಂದು ತಿಳಿಸಿದರು. ವಿದ್ಯಾರ್ಥಿಗಳು 21ನೇ ಶತಮಾನದ ಸವಾಲುಗಳನ್ನು ಎದುರಿಸಲು ಶಿಕ್ಷಣ ವನ್ನು ಪ್ರಮುಖ ಸಾಧನವನ್ನಾಗಿ ಬಳಸಿಕೊಳ್ಳಬೇಕು. ಮಹಿಳೆಯರು ಸ್ವಾವಲಂಬಿಗಳಾಗಿ ಆತ್ಮಸ್ಥೈರ್ಯದಿಂದ ಬದುಕಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪ್ರಾಂಶುಪಾಲ ಪಿ. ಗುರುಬಸಪ್ಪ, ವೀರಶೈವ ವಿದ್ಯಾವರ್ಧಕ ಸಂಘವು ಶಿಕ್ಷಕ ವೃತ್ತಿಯ ಮೂಲಕ ತಮ್ಮ ಜೀವನಕ್ಕೆ ದಾರಿ ತೋರಿಸಿದೆ. ಶಿಕ್ಷಕ ವೃತ್ತಿ ಅತ್ಯಂತ ಶ್ರೇಷ್ಠ ವೃತ್ತಿಗಳಲ್ಲಿ ಒಂದಾಗಿದ್ದು, ಶಿಕ್ಷಕರು ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿ ಸಂಸ್ಥೆಯ ಪ್ರಗತಿಗೆ ಶ್ರಮಿಸಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಕಷ್ಟಪಟ್ಟು ಅಧ್ಯಯನ ಮಾಡಿ ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

# ಲೋಕ್ ಅದಾಲತ್ ಯಶಸ್ವಿ: 4,264 ಪ್ರಕರಣ ಇತ್ಯರ್ಥ, 15.42 ಕೋಟಿ ರೂ. ಮೊತ್ತ ಪರಿಹಾರ

**ಬಳ್ಳಾರಿ, ಸೆ.22.** ಬಳ್ಳಾರಿ ಜಿಲ್ಲೆಯಲ್ಲಿ ಸೆಪ್ಟೆಂಬರ್ 19 ರಂದು ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್ ಅಭೂತಪೂರ್ವ ಯಶಸ್ಸು ಕಂಡಿದ್ದು, ನ್ಯಾಯಾಲಯದಲ್ಲಿ ಬಾಕಿ ಇದ್ದ ಒಟ್ಟು 4,264 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸ ಲಾಗಿದ್ದು, ಒಟ್ಟು 15,42,66,848 (15.42 ಕೋಟಿ) ರೂ.ಗಳ ಪರಿಹಾರ ಮೊತ್ತವನ್ನು ಕಕ್ಷಿದಾರರಿಗೆ ಕೊಡಮಾಡಲಾಗಿದೆ.



ಈ ಕುರಿತು ಮಾಹಿತಿ ನೀಡಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಸಿದ್ಧಲಿಂಗ ಪ್ರಭು ಅವರು, ಬಳ್ಳಾರಿ ಜಿಲ್ಲೆಯ 16 ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ಯಶಸ್ವಿಯಾಗಿ ಜರುಗಿದೆ ಎಂದು ತಿಳಿಸಿದ್ದಾರೆ.

ವಿಚ್ಛೇದನ ಹಾಗೂ ವೈವಾಹಿಕ ಕಲಹದಂತಹ 5 ಕೌಟುಂಬಿಕ ಸಮಸ್ಯೆಗಳ ಪ್ರಕರಣಗಳಲ್ಲಿ ನ್ಯಾಯಾಧೀಶರು ನಡೆಸಿದ ರಾಜಿ ಸಂಧಾನ ಫಲಪ್ರದವಾಗಿದ್ದು, ಐದು ಜೋಡಿಗಳು ಮನಸ್ತಾಪ ಮರೆತು ಮತ್ತೆ ಜೊತೆಯಾಗಿ ಜೀವನ ನಡೆಸಲು ಸಮ್ಮತಿಸಿ ಒಂದಾಗಿವೆ. ಅದಾಲತ್‌ನ ಯಶಸ್ಸಿಗೆ ಶ್ರಮಿಸಿದ ನ್ಯಾಯಾಧೀಶರು, ವಕೀಲರು, ಕಕ್ಷಿದಾರರು, ಪೊಲೀಸ್ ಸಿಬ್ಬಂದಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಬಳ್ಳಾರಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿದ್ಧಲಿಂಗ ಪ್ರಭು ಅವರು ಅಭಿನಂದನೆ ತಿಳಿಸಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

**ಇತ್ಯರ್ಥಗೊಂಡ ಪ್ರಕರಣಗಳ ವಿವರ:**

ಜನನ ಪ್ರಮಾಣ ಪತ್ರ ಅರ್ಜಿಗಳು: 1,011
ದಂಡ ವಿಧಿಸಬಹುದಾದ ಕ್ರಿಮಿನಲ್ ಪ್ರಕರಣಗಳು: 2,357
ಇತರೆ ಕ್ರಿಮಿನಲ್ ಪ್ರಕರಣಗಳು: 409
ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು: 174
ಚೆಕ್ ಬೌನ್ಸ್ ಪ್ರಕರಣಗಳು: 73
ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು: 53
ಇತರೆ ಎಕ್ಸಿಕ್ಯೂಷನ್ ಪ್ರಕರಣಗಳು: 52
ಬ್ಯಾಂಕ್ ದಾವೆಗಳು: 38
ಇತರೆ ಸಿವಿಲ್ ಪ್ರಕರಣಗಳು: 20
ಪಾಲು ವಿಭಾಗ ದಾವೆಗಳು: 17
ನಿರ್ದಿಷ್ಟ ಪರಿಹಾರದ ದಾವೆಗಳು: 12
ಕೌಟುಂಬಿಕ ಪ್ರಕರಣಗಳು: 11
ಹಣ ವಸೂಲಾತಿ ದಾವೆಗಳು: 10
ವಾಣಿಜ್ಯ ದಾವೆಗಳು: 08
ಎಂ.ವಿ.ಸಿ. ಅಮಲ್‌ಜಾರಿ ಪ್ರಕರಣಗಳು: 05
ನೌಕರರ ಪರಿಹಾರ ಪ್ರಕರಣ: 02
ಎಫ್.ಡಿ.ಪಿ. ಪ್ರಕರಣಗಳು: 02

**ವ್ಯಾಜ್ಯ ಪೂರ್ವ ಪ್ರಕರಣಗಳಿಂದ 10.45 ಕೋಟಿ ರೂ. ಜಮೆ:**

ವ್ಯಾಜ್ಯ ಪೂರ್ವ (ಪ್ರಿ–ಲಿಟಿಗೇಷನ್) ಹಂತದಲ್ಲಿದ್ದ 66,959 ಪ್ರಕರಣಗಳು ಇತ್ಯರ್ಥಗೊಂಡಿದ್ದು, ಇವುಗಳಿಂದ ಒಟ್ಟು 10,45,22,074 (10.45 ಕೋಟಿ) ರೂ.ಗಳು ವಿವಿಧ ಬ್ಯಾಂಕ್ ಹಾಗೂ ಸರ್ಕಾರಿ ಇಲಾಖೆಗಳ ಖಜಾನೆಗೆ ಜಮೆಯಾಗಿವೆ.

ಮತ್ತೆ ಒಂದಾದ 5 ದಂಪತಿ

### ಬರ ನಿರ್ವಹಣೆಯಲ್ಲಿ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ: ವಿಜಯಪುರ ಡಿಸಿ ಸೂಚನೆ

**ವಿಜಯಪುರ, ಸೆ.21** – ಜಿಲ್ಲೆಯ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಒಂದು ತಂಡವಾಗಿ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರು ಸೇರಿದಂತೆ ಬರ ನಿರ್ವಹಣೆಗೆ ಸಂಬಂಧಿಸಿದ ಯಾವುದೇ ಸಮಸ್ಯೆ ಎದುರಾದಾಗ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ, ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.



ಕಾಲುವೆಗಳ ಮೂಲಕ ನೀರು ಹರಿಸುವ ಸಂದರ್ಭದಲ್ಲಿ ಕುಡಿಯುವ ನೀರು ವ್ಯರ್ಥವಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಈ ಕುರಿತು ತಾಲೂಕು ಮಟ್ಟದಲ್ಲಿ ಕಾರ್ಯಪಡೆ ಸಭೆ ನಡೆಸಿ, ಸಂಬಂಧಿಸಿದ ಅಧಿಕಾರಿಗಳು ನಿರಂತರವಾಗಿ ಪರಿಶೀಲನೆ ನಡೆಸಬೇಕು. ಸ್ಥಳೀಯವಾಗಿ ಸೂಕ್ತ ಗಮನ ಹರಿಸದಿದ್ದರೆ, ಪೂರೈಕೆಯಾದ ನೀರು ಎಷ್ಟು ಪ್ರಮಾಣದಲ್ಲಿ ಹಾಗೂ ಎಲ್ಲಿಯವರೆಗೆ ತಲುಪಿದೆ ಎಂಬುದನ್ನು ತಿಳಿದುಕೊಳ್ಳಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಅಧಿಕಾರಿಗಳು ಈಗಿನಿಂದಲೇ ಸಮರ್ಪಕವಾಗಿ ಗಮನಹರಿಸಬೇಕು ಎಂದು ಹೇಳಿದರು.

ಕುಡಿಯುವ ನೀರು ಪೂರೈಕೆ ಮಾಡಿದ ನಂತರ ಅದು ನಿಗದಿತ ಗ್ರಾಮ, ಪ್ರದೇಶ ಹಾಗೂ ಜನರಿಗೆ ಸಮರ್ಪಕವಾಗಿ ತಲುಪಿದೆಯೇ ಎಂಬುದನ್ನು ಅಧಿಕಾರಿಗಳು ಖುದ್ದಾಗಿ ಪರಿಶೀಲಿಸಬೇಕು. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಸಮಸ್ಯೆಯ ಮೂಲ ಕಾರಣವನ್ನು ಅರಿತುಕೊಂಡು ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು. ಸಮಸ್ಯೆ ಉಲ್ಬಣಿಸುವವರೆಗೆ ಕಾಯದೆ, ಮುಂಚಿತವಾಗಿಯೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

# ಆದಾಯಮೀರಿ ಆಸ್ತಿ ಗಳಿಕೆ: ನಿವೃತ್ತ ಅಧೀಕ್ಷಕನ ಮನೆ, ಫಾರ್ಮ್‌ಹೌಸ್ ಮೇಲೆ ಲೋಕಾ ದಾಳಿ

**ಮಂಡ್ಯ, ಸೆ.22:** ಆದಾಯ ಮೀರಿ ಆಸ್ತಿಗಳಿಕೆ ಆರೋಪದ ಮೇಲೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿನಿಲಯದ ನಿವೃತ್ತ ಅಧೀಕ್ಷಕ ಎಂ.ಶಿವರಾಜು ಅವರಿಗೆ ಸೇರಿದ ಮನೆ ಮತ್ತು ಫಾರ್ಮ್‌ಹೌಸ್ ಮೇಲೆ ಏಕಕಾಲದಲ್ಲಿ ಮಂಡ್ಯ ಲೋಕಾಯುಕ್ತ ಪೊಲೀಸರು ಮಂಗಳವಾರ ದಾಳಿ ನಡೆಸಿದರು.




ಮದ್ದೂರು ನಗರದ ಕೊಪ್ಪ ವೃತ್ತದ ವಿನಾಯಕ ಬಡಾವಣೆಯಲ್ಲಿ 3 ವರ್ಷಗಳ ಹಿಂದೆ ಕಟ್ಟಿಸಿರುವ ಮೂರಂತಸ್ತಿನ ಭವ್ಯ ಬಂಗಲೆ ಹಾಗೂ ತಾಲ್ಲೂಕಿನ ಕೆಸ್ತೂರು ಬಳಿಯ ಅವಸರದಹಳ್ಳಿಯ ಫಾರ್ಮ್‌ಹೌಸ್ ಅನ್ನು ಲೋಕಾಯುಕ್ತ ಪೊಲೀಸರು ತಪಾಸಣೆ ಮಾಡಿದರು. 2.50 ಲಕ್ಷ ನಗದು, 600 ಗ್ರಾಂ ಚಿನ್ನಾಭರಣ, 2 ಕಾರುಗಳು ಪತ್ತೆಯಾಗಿವೆ. 5 ನಿವೇಶನ, 2 ಮನೆ, 2 ವಾಣಿಜ್ಯ ಕಟ್ಟಡಗಳು, 1 ಫಾರ್ಮ್‌ಹೌಸ್, 6 ಎಕರೆ ಕೃಷಿಭೂಮಿ ಸೇರಿದಂತೆ ಒಟ್ಟು 2.71 ಕೋಟಿ ಆಸ್ತಿ ಪತ್ತೆಯಾಗಿದೆ.

**ಹಾಸ್ಟೆಲ್ ಸಾಮಗ್ರಿ ಪತ್ತೆ**–ಫಾರ್ಮ್‌ಹೌಸ್‌ನಲ್ಲಿ ಮಿನಿ ಬಾರ್ ಮಾದರಿಯಲ್ಲಿ ದುಬಾರಿ ಬೆಲೆಯ ಮದ್ಯದ ಬಾಟಲಿಗಳನ್ನು ಶೇಖರಿಸಿಟ್ಟಿರುವುದು ಕಂಡು ಬಂದಿದೆ. ಅಷ್ಟೇ ಅಲ್ಲದೇ ಹಾಸ್ಟೆಲ್‌ನ ಬಡಮಕ್ಕಳಿಗೆ ವಿತರಿಸಬೇಕಿದ್ದ ಸರ್ಕಾರಿ ಪಠ್ಯಪುಸ್ತಕ, ನೋಟ್ ಪುಸ್ತಕ, ಹಾಸಿಗೆ, ಬೆಡ್‌ಶೀಟ್‌ಗಳು, ಕೊಬ್ಬರಿ ಎಣ್ಣೆಯ ಡಬ್ಬಿಗಳೂ ಸೇರಿದಂತೆ ಸಾಮಗ್ರಿಗಳು ಸಿಕ್ಕಿವೆ. ಸೋಮನಹಳ್ಳಿ ಬೆಸಗರಹಳ್ಳಿಯ ಹಾಸ್ಟೆಲ್‌ಗಳಲ್ಲಿ ಕರ್ತವ್ಯ ನಿರ್ವಹಿಸಿದ್ದ ಶಿವರಾಜು ಒಂದು ತಿಂಗಳ ಹಿಂದಷ್ಟೇ ನಿವೃತ್ತರಾಗಿದ್ದಾರೆ.

# ದಸರಾ ಸಿಎಂ ಕಪ್ ಕ್ರೀಡಾಕೂಟ: ಭರತ್, ವಿಜಯಲಕ್ಷ್ಮಿ ವೇಗದ ಓಟಗಾರರು

**ಕಲಬುರಗಿ, ಸೆ. 22:** ನಗರದಲ್ಲಿ ನಡೆದ ದಸರಾ ಸಿಎಂ ಕಪ್ ಕ್ರೀಡಾಕೂಟದಲ್ಲಿ ಕಲಬುರಗಿಯ ಭರತ್ ಹಾಗೂ ವಿಜಯಲಕ್ಷ್ಮಿ 100 ಮೀ. ಓಟದ ಸ್ಪರ್ಧೆಯಲ್ಲಿ ವೇಗದ ಓಟಗಾರರಾಗಿ ಪ್ರಥಮ ಸ್ಥಾನಗಳಿಸಿದರು.



**ಫಲಿತಾಂಶ:** ಪುರುಷರ ವಿಭಾಗ: ಅಥ್ಲೆಟಿಕ್ಸ್–100 ಮೀ. ಓಟ–ಕಲಬುರಗಿಯ ಭರತ್–1, ಬಾಬು–2; 200 ಮೀ. ಓಟ–ಕಲಬುರಗಿಯ ಭರತ್–1, ವಿಶಾಲ–2; 400 ಮೀ. ಓಟ– ಸೇಡಂ ವಿಶ್ವರಾಜ ಭೀಮರಾಯ–1, ಅಫಜಲಪುರದ ನಾಗೇಶ್ ಎಸ್.–2; 800 ಮೀ. ಓಟ–ಕಲಬುರಗಿಯ ಶ್ರೀನಿವಾಸ–1, ಕಮಲಾಪುರದ ಇಮ್ರಾನ್–2; 1500 ಮೀ. ಓಟ–ಕಲಬುರಗಿಯ ಸಾಗರ–1, ಅಫಜಲಪುರದ ಅಂಬ್ರೇಶ–2; 5000 ಮೀ. ಓಟ– ಕಲಬುರಗಿಯ ಸಾಗರ–1, ಶಾಂತಲಿಂಗಯ್ಯ ಆರ್.–2.

ಲಾಂಗ್‌ಜಂಪ್–ಕಲಬುರಗಿಯ ಯಲ್ಲಾಲಿಂಗ–1, ಆಳಂದದ ರಾಹುಲ್–2; ಹೈಜಂಪ್–ಯಲ್ಲಾಲಿಂಗ–1, ಕಮಲಾಪುರದ ಪ್ರಶಾಂತ್–2; ತ್ರಿವಿಧ ಜಿಗಿತ–ಕಲಬುರಗಿಯ ಬಸವರಾಜ ಆರ್. ಹೂಗಾರ–1, ಕಾಳಗಿಯ ಸಮೀರ–2; ಶಾಟ್‌ಪುಟ್ ಥ್ರೋ–ಆಳಂದದ ಸಾಹೀಲ್–1, ಕಲಬುರಗಿಯ ಮೀರ್ ಸೈಫಾನ್–2; ಡಿಸ್ಕಸ್ ಥ್ರೋ–ಕಲಬುರಗಿಯ ಇಸ್ಮಾಯಿಲ್–1, ಕಮಲಾಪುರದ ಭೋಲೆನಾಥ–2; ಜಾವೆಲಿನ್ ಥ್ರೋ–ಕಲಬುರಗಿಯ ರಾಮು–1, ಆಳಂದದ ಶ್ರವಣಕುಮಾರ 2ನೇ ಸ್ಥಾನ ಗಳಿಸಿದರು. 4x100 ಮೀ. ರಿಲೇಯಲ್ಲಿ ಕಿರಣಕುಮಾರ ನಾಯಕತ್ವದ ತಂಡ –1 ಹಾಗೂ ಆಳಂದ ತಾಲ್ಲೂಕಿನ ರಾಹುಲ್ ನಾಯಕತ್ವದ ತಂಡ 2. ಥ್ರೋಬಾಲ್–ಸೇಡಂ ತಂಡ –1, ಯಡ್ರಾಮಿ ತಂಡ –2; ಬಾಲ್‌ಬ್ಯಾಡ್ಮಿಂಟನ್–ಕಲಬುರಗಿಯ ಜಿಬಿಬಿ ಕ್ಲಬ್ –1, ಕೆಎಚ್‌ಬಿ ಹೈಕೋರ್ಟ್ ತಂಡ–2; ಟಿಟಿ–ಕಲಬುರಗಿ ತಂಡವು 1.

**ಮಹಿಳೆಯರ ವಿಭಾಗ:** ಅಥ್ಲೆಟಿಕ್ಸ್–100 ಮೀ.ಓಟ– ಕಲಬುರಗಿಯ ವಿಜಯಲಕ್ಷ್ಮೀ–1, ಸಮೃದ್ಧಿ ಎ.–2; 200 ಮೀ.– ಕಲಬುರಗಿಯ ಸಮೃದ್ಧಿ ಎ.–1, ವೈಷ್ಣವಿ ಆರ್.–2; 400 ಮೀ. ಓಟ– ಕಲಬುರಗಿಯ ವೈಷ್ಣವಿ ಆರ್.–1, ಶಹಾಬಾದ್‌ನ ಎ. ಜನ್ನಿಧರ್–2; 800 ಮೀ.– ಕಲಬುರಗಿಯ ವಿದೇಶಾ–1, ಸೋನಾಕ್ಷಿ–2; 1,500 ಮೀ.– ಕಲಬುರಗಿಯ ಸೋನಕ್ಷಿ ಯುವರಾಜ–1, ಅಂಬುತಾಯಿ ಮಹಾದೇವ –2; 3,000 ಮೀ.– ಲಕ್ಷ್ಮೀ ಡಿ.–1, ಅಂಬಿಕಾ ಪಿ. 2.

ಲಾಂಗ್‌ಜಂಪ್–ಕಲಬುರಗಿಯ ಸೃಷ್ಟಿ –1, ಸಹನಾ–2; ಹೈಜಂಪ್– ಆಳಂದದ ಸೋನು ಎಲ್. –1, ಶಶಿಕಲಾ–2; ತ್ರಿವಿಧ ಜಿಗಿತ–ಆಳಂದದ ಸೋನು–1, ಶಹಾಬಾದ್‌ನ ಭಾಗ್ಯಶ್ರೀ–2; ಶಾಟ್‌ಪುಟ್ ಥ್ರೋ–ಕಲಬುರಗಿಯ ಮಸರತ್ ಸುಲ್ತಾನಾ–1, ಕಾವೇರಿ–2; ಡಿಸ್ಕಸ್ ಥ್ರೋ–ಕಲಬುರಗಿಯ ಕಾವೇರಿ–1, ಸೇಡಂನ ಶ್ರುತಿ–2; ಜಾವಲಿನ್ ಥ್ರೋ–ಮಸರತ್ ಸುಲ್ತಾನ–1, ಆಳಂದದ ನಿಖಿತಾ –2.

4x100 ಮೀ. ರಿಲೇಯಲ್ಲಿ ಕಲಬುರಗಿಯ ಸೋನಿ ನಾಯಕತ್ವದ ತಂಡ 1, ಸೇಡಂನ ಮೀನಾಕ್ಷಿ ನಾಯಕತ್ವದ ತಂಡ 2.

ವಾಲಿಬಾಲ್–ಕಲಬುರಗಿ ತಂಡ–1, ಸೇಡಂ ತಂಡ–2; ಕಬಡ್ಡಿ–ಸೇಡಂ ತಂಡ–1, ಕಮಲಾಪುರ ತಂಡ –2; ಥ್ರೋಬಾಲ್–ಶಹಾಬಾದ್ ತಂಡ –1, ಆಳಂದ ತಂಡ–2; ಹ್ಯಾಂಡ್‌ಬಾಲ್–ಕಲಬುರಗಿ ಕ್ಯಾಂಪ್‌ಬೆಲ್ ಶಾಲೆ–1, ಎಸ್‌ಆರ್‌ಎನ್ ಮೆಹತಾ ಶಾಲೆ –2; ಬಾಲ್‌ಬ್ಯಾಡ್ಮಿಂಟನ್–ಕಲಬುರಗಿಯ ಜೀವನಪ್ರಕಾಶ ಶಾಲೆ–1, ಕಲಬುರಗಿಯ ಸರ್ಕಾರಿ ಕನ್ಯಾ ಪ್ರೌಢಶಾಲೆ–2; ಟಿಟಿ–ಕಲಬುರಗಿ ತಂಡ 1ನೇ ಸ್ಥಾನ ಗಳಿಸಿತು.


23.09.2026
ಬೆಂಗಳೂರು ಗ್ರಾಮಾಂತರ
ಲೋಕಸಭಾ ಕ್ಷೇತ್ರದ
ಜನಪ್ರಿಯ ಸದಸ್ಯರಾದ
ಸನ್ಮಾನ್ಯಶ್ರೀ
ಡಾ.ಸಿ.ಎನ್.ಮಂಜುನಾಥ್
ಅವರಿಗೆ
ಜನ್ಮದಿನದ
ಶುಭಾಶಯಗಳು
ಶುಭಕೋರುವವರು:
ಎ.ಎಚ್.ಬಸವರಾಜು
ಮಾಜಿ ಬಿಬಿಎಂಪಿ ಸದಸ್ಯರು
ಹಾಗೂ ಬಿಜೆಪಿ ಮುಖಂಡರು
ಬನಶಂಕರಿ, ಪದ್ಮನಾಭನಗರ,
ಬೆಂಗಳೂರು, ಕರ್ನಾಟಕ